VOLUME: 16 | 09 APRIL 2026 | ಶುಕ್ರವಾರ | RS: 2 | PAGE: 06 ISSUE: 69 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ದಕ್ಷಿಣ ಚಿತ್ರರಂಗದ ಖ್ಯಾತ ನಟಿ ನಯನತಾರಾ, ಪತಿ-ಸಿನಿಮಾ ನಿರ್ದೇಶಕ ವಿಘ್ನೇಶ್ ಶಿವನ್ ಅವರೊಂದಿಗೆ ಗುರುವಾರ ತಿರುಮಲದ ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ, ದೇವರ ದರ್ಶನ ಪಡೆದರು. ಸೆಲೆಬ್ರಿಟಿ ದಂಪತಿಯನ್ನು ಕಣ್ತುಂಬಿಕೊಳ್ಳಲು ಅಭಿಮಾನಿಗಳು ಮುಗಿಬಿದ್ದರು. ಅಭಿಮಾನಿಗಳೊಂದಿಗೆ ಮಾತನಾಡಿದ ದಂಪತಿ, ಫೋಟೋಗಳಿಗೆ ಪೋಸ್ ನೀಡಿದರು.

BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಉತ್ತೀರ್ಣರಾದವರ ಪ್ರಮಾಣ ಕಳೆದ ವರ್ಷಕ್ಕಿಂತ

# 13.03%ರಷ್ಟು ಹೆಚ್ಚಳ

ಬೆಂಗಳೂರು: ಕರ್ನಾಟಕದ 2025–26ರ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟವಾಗಿದೆ. ಪರೀಕ್ಷೆ ಬರೆದ ಒಟ್ಟು ವಿದ್ಯಾರ್ಥಿಗಳಲ್ಲಿ 86.48% ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಇದೊಂದು ದಾಖಲೆಯಾಗಿದೆ. ಉತ್ತೀರ್ಣರಾದವರ ಪ್ರಮಾಣ ಕಳೆದ ವರ್ಷಕ್ಕಿಂತ 13.03%ರಷ್ಟು ಹೆಚ್ಚಳವಾಗಿದೆ.

ಈ ಬಾರಿ ನಗರ ಪ್ರದೇಶದ ವಿದ್ಯಾರ್ಥಿಗಳು ಹೆಚ್ಚಿನ ಪ್ರಮಾಣದಲ್ಲಿ ಅಂದರೆ 74.55% ಗ್ರಾಮೀಣ ವಿದ್ಯಾರ್ಥಿಗಳು 69.33% ರಷ್ಟು ತೇರ್ಗಡೆಯಾಗಿದ್ದಾರೆ. ಉಡುಪಿ, ಉತ್ತರ ಕನ್ನಡ, ಕಲಬುರಗಿ ಮೊದಲ ಸ್ಥಾನದಲ್ಲಿದ್ದು, ಈ ಬಾರಿ ಕಲ್ಯಾಣ ಕರ್ನಾಟಕ ವಿದ್ಯಾರ್ಥಿಗಳು 78.98% ರಷ್ಟು ತೇರ್ಗಡೆಯಾಗಿದ್ದು, ಕಲ್ಯಾಣ ಕರ್ನಾಟಕೇತರ ಪ್ರದೇಶದ ವಿದ್ಯಾರ್ಥಿಗಳು 87.99% ರಷ್ಟು ಉತ್ತೀರ್ಣರಾಗಿದ್ದಾರೆ. ಕಳೆದ ವರ್ಷಕ್ಕಿಂತ ಈ ಬಾರಿ ಕಲ್ಯಾಣ ಕರ್ನಾಟಕ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾಹಿತಿ ನೀಡಿದ್ದು, ಇದೇ ಮೊದಲ ಬಾರಿಗೆ ಮಕ್ಕಳಿಗೆ ನೇರವಾಗಿ ಫಲಿತಾಂಶ ಕೊಡುವ ಉದ್ದೇಶದಿಂದ ವೆಬ್ ಸೈಟ್ ನಲ್ಲಿ ಮೊದಲು ಪ್ರಕಟಿಸಲಾಗಿದೆ. ಡಿಜಿಟಲ್ ಆಗಿ ಫಲಿತಾಂಶ ನೀಡುವ ಕೆಲಸ ನಡೆಯುತ್ತಿದ್ದ ಕಾರಣ ಫಲಿತಾಂಶ ಪ್ರಕಟಣೆ ವಿಳಂಬವಾಗಿದೆ ಎಂದರು.

ಈ ಫಲಿತಾಂಶವು ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ಸಂತಸ ಹುಟ್ಟುಹಾಕಿದೆ. ಈ ಫಲಿತಾಂಶವು ವಿದ್ಯಾರ್ಥಿಗಳ ಸ್ವಂತ ಸಾಮರ್ಥ್ಯದಿಂದ ಬಂದಿದೆ. ಇದು, ಕರ್ನಾಟಕ ಸರ್ಕಾರದ ದೂರದೃಷ್ಟಿಯ ಹಲವು ಕ್ರಮಗಳು, ಶಿಕ್ಷಣ ಇಲಾಖೆಯ ನಿರಂತರ ಪ್ರಯತ್ನಗಳು ಹಾಗೂ ವಿದ್ಯಾರ್ಥಿಗಳ ಶ್ರಮದ ಫಲ. ರಾಜ್ಯದ ಶೈಕ್ಷಣಿಕ ಗುಣಮಟ್ಟವು ಹೆಚ್ಚುತ್ತಿದೆ ಎಂದು ಹೇಳಿದರು.

ಈ ವರ್ಷ 7,10,363 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಅವರಲ್ಲಿ, 3,35,138 ಮಂದಿ ಬಾಲಕರು ಮತ್ತು 3,31,359 ಬಾಲಕಿಯರು. 6.10 ಲಕ್ಷ



ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಬಾಲಕರು ಶೇ.83.65 ಮತ್ತು ಶೇ.88.70 ಬಾಲಕಿಯರು ಉತ್ತೀರ್ಣರಾಗಿದ್ದಾರೆ.

2024 ಮತ್ತು 2025ರ ಫಲಿತಾಂಶಕ್ಕೆ ಹೋಲಿಸಿದರೆ, ಇದು ಅತ್ಯುತ್ತಮ ಫಲಿತಾಂಶವೇ ಆಗಿದೆ. 2024ರಲ್ಲಿ ಒಟ್ಟು 6,98,478 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದರು. 6,81,079 ವಿದ್ಯಾರ್ಥಿಗಳು ಪರೀಕ್ಷೆ ಪಡೆದಿದ್ದರು. 5,52,690 ಮಂದಿ ಉತ್ತೀರ್ಣರಾಗಿದ್ದರು. ಒಟ್ಟು ಫಲಿತಾಂಶವು 2023ಕ್ಕಿಂತ 6.48% ಹೆಚ್ಚಳದೊಂದಿಗೆ 81.15%ಗೆ ಏರಿಕೆಯಾಗಿತ್ತು.

ಆದರೆ, ಈ ಫಲಿತಾಂಶದ ಹಿಂದೆ ಪರೀಕ್ಷೆಗಳು ಪಾರದರ್ಶಕವಾಗಿ ಮತ್ತು ಕಟ್ಟುನಿಟ್ಟಾಗಿ ನಡೆಯದೇ ಇರುವುದು ಹಾಗೂ ಗ್ರೇಸ್ ಅಂಕಗಳು ಪಾತ್ರ ಹೆಚ್ಚಿದೆ ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳು ಮತ್ತು ತಜ್ಞರು ಅಭಿಪ್ರಾಯಪಟ್ಟಿದ್ದರು.

ಆದ್ದರಿಂದ, ರಾಜ್ಯ ಸರ್ಕಾರವು ಪರೀಕ್ಷೆಯ ಪವಿತ್ರತೆಯನ್ನು ಕಾಪಾಡಲು, ಮಾಲ್ಪ್ರಾಕ್ಟಿಸ್ ತಡೆಯಲು ಹಾಗೂ ವಿದ್ಯಾರ್ಥಿಗಳ ನಿಜವಾದ ಕಲಿಕೆಯನ್ನು ಪ್ರೋತ್ಸಾಹಿಸಲು ಹಲವು ಕ್ರಮಗಳು ಮತ್ತು ಸುಧಾರಣೆಗಳನ್ನು ತಂದಿತು. ಶಿಕ್ಷಣ ಕ್ಷೇತ್ರದಲ್ಲಿ ಅದರಲ್ಲೂ ಶಾಲಾ ಮತ್ತು ಕಾಲೇಜುಗಳ ಶೈಕ್ಷಣಿಕ ಪರೀಕ್ಷೆಗಳಲ್ಲಿ ನಾನಾ ಬದಲಾವಣೆಗಳನ್ನು ಮಾಡಿತು.

2025ರ ಪರೀಕ್ಷೆಗಳ ವೇಳೆ, ಪರೀಕ್ಷಾ ಹಾಲ್‌ಗಳ ಮೇಲೆ ಕಟ್ಟೆಚ್ಚರ ವಹಿಸಲಾಗಿತ್ತು. ಪ್ರತಿ ಮೂಲೆಯನ್ನು ವೆಬ್ಕ್ಯಾಮ್ ಮೂಲಕ ನೇರ ಪ್ರಸಾರ ಮಾಡಲಾಗಿತ್ತು. ಈ ಕ್ರಮ ಯಾವ ಮಟ್ಟಿಗಿತ್ತೆಂದರೆ, ಪ್ರಾಯೋಗಿಕ ಪರೀಕ್ಷೆಗಳನ್ನೂ ವೆಬ್–ಸ್ಟ್ರೀಮಿಂಗ್ ಮಾಡಲಾಗಿತ್ತು. ಪರಿಣಾಮ, ಮಾಲ್ಪ್ರಾಕ್ಟಿಸ್ (ಕಾಪಿ, ಅಕ್ರಮ) ಸಂಪೂರ್ಣವಾಗಿ ತಡೆಯಲಾಯಿತು.

ಜತೆಗೆ, ಹಿಂದಿನ ವರ್ಷಗಳಲ್ಲಿ ನೀಡಲಾಗಿದ್ದ ಗ್ರೇಸ್ ಮಾರ್ಕ್ಸ್ ಅಥವಾ ಸಡಿಲತೆಯನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಯಿತು. 2025ರಲ್ಲಿ, ಕೆಲವು ಬಾರ್ಡರ್ಲೈನ್ ವಿದ್ಯಾರ್ಥಿಗಳಿಗೆ ನೀಡಲಾದ ಸಣ್ಣ ಸಡಿಲಿಕೆಗಳ ಹೊರತಾಗಿ, ಯಾವುದೇ ಗ್ರೇಸ್ ಮಾರ್ಕ್ಸ್ ನೀಡಲಿಲ್ಲ. ಮೌಲ್ಯಮಾಪನವನ್ನೂ ಹೆಚ್ಚು ನಿಖರತೆ ಮತ್ತು ಕಟ್ಟುನಿಟ್ಟಾಗಿ ನಡೆಸಲಾಯಿತು. ಆನ್ಲೈನ್ ಮಾರ್ಕ್ ಎಂಟ್ರಿ ವ್ಯವಸ್ಥೆ ಬಲಪಡಿಸಲಾಯಿತು.

ಆದಾಗ್ಯೂ, ಮುಖ್ಯ ಪರೀಕ್ಷೆಯಲ್ಲಿ ನಪಾಸು ಆದವರಿಗೆ ಮೂರು ಹಂತಗಳಲ್ಲಿ ಪೂರಕ ಪರೀಕ್ಷೆಗಳನ್ನು ನಡೆಸಲು ಅವಕಾಶ ನೀಡಲಾಯಿತು. ಅದೂ, ಯಾವುದೇ ಪರೀಕ್ಷಾ ಶುಲ್ಕವಿಲ್ಲದೆಯೇ, ಅನುತ್ತೀರ್ಣರಾಗಿದ್ದ ವಿದ್ಯಾರ್ಥಿಗಳು ಪೂರಕ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಸರ್ಕಾರವು ಅವಕಾಶ ಮಾಡಿಕೊಟ್ಟಿತು.

ಕಟ್ಟುನಿಟ್ಟಿನ ನಿಗಾ ಮತ್ತು ಕ್ರಮಗಳ ಫಲವಾಗಿ, 2025ರ ಫಲಿತಾಂಶವು ಗಮನಾರ್ಹವಾಗಿ ಕುಸಿಯಿತು. 2025ರಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ ಬರೆದಿದ್ದ ಒಟ್ಟು 6,37,805 ವಿದ್ಯಾರ್ಥಿಗಳಲ್ಲಿ 4,68,439 ಮಂದಿ ಮಾತ್ರವೇ ಉತ್ತೀರ್ಣರಾದರು. ಫಲಿತಾಂಶವು 73.45%ಗೆ ಕುಸಿಯಿತು. 2024ರ 81.15%ಗೆ ಹೋಲಿಸಿದರೆ, ಬರೋಬ್ಬರಿ 8% ಕುಸಿತ ಕಂಡಿತು.

ಆದರೂ, ಸರ್ಕಾರ ಮತ್ತು ಶಿಕ್ಷಣ ಇಲಾಖೆ ತಮ್ಮ ಕ್ರಮಗಳು ಮತ್ತು ಪಾರದರ್ಶಕತೆಯಲ್ಲಿ ರಾಜಿ ಇಲ್ಲವೆಂದು ಹೇಳಿತು. "ಫಲಿತಾಂಶ ಕಡಿಮೆಯಾದರೂ ಪರೀಕ್ಷೆಯ ಪವಿತ್ರತೆ ಕಾಪಾಡಲಾಗಿದೆ. ಇದು ವಿದ್ಯಾರ್ಥಿಗಳ ನಿಜವಾದ ಕಾರ್ಯಕ್ಷಮತೆಯನ್ನು ಪ್ರತಿಬಿಂಬಿಸುತ್ತದೆ. ಪರೀಕ್ಷೆಗಳನ್ನು ಸಡಿಲತೆಯಿಲ್ಲದೆ, ಪಾರದರ್ಶಕತೆಯೊಂದಿಗೆ ನಡೆಸಿದಾಗ ವಿದ್ಯಾರ್ಥಿಗಳ ನಿಜವಾದ ಪ್ರಗತಿ ಕಾಣುತ್ತದೆ" ಎಂದು ಶಿಕ್ಷಣ ಸಚಿವರು ಹೇಳಿದ್ದರು.

ಇಲಾಖೆಯ ಕ್ರಮಗಳು ಮತ್ತು ಬದಲಾವಣೆಗಳು ದೀರ್ಘಕಾಲೀನವಾಗಿ ಗುಣಮಟ್ಟ ಸುಧಾರಿಸಲು ಸಹಾಯಕವಾಗುತ್ತವೆ ಎಂದ ಸರ್ಕಾರವು, ಈ ಕ್ರಮಗಳ ಜೊತೆಗೆ, ಶಿಕ್ಷಣಿಕ ಕ್ಷೇತ್ರಗಳಲ್ಲಿನ ಸೌಲಭ್ಯಗಳ ಸುಧಾರಣೆ ಅಗತ್ಯವಿದೆ ಎಂಬುದನ್ನು ಒಪ್ಪಿಕೊಂಡಿತು. ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಗಳನ್ನು ಬರೆಯಲು ಅವಕಾಶಗಳನ್ನು ನೀಡಿತು.

2025–26ರಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಕಟ್ಟುನಿಟ್ಟಿನ ಕ್ರಮಗಳೊಂದಿಗೆ ಮತ್ತಷ್ಟು ಸುಧಾರಣೆಗಳನ್ನು ತಂದಿತು. ಈ ವರ್ಷ, ಉತ್ತೀರ್ಣರಾಗಲು ಅಗತ್ಯವಿರುವ ಕನಿಷ್ಠ ಅಂಕಗಳಲ್ಲಿ ಕೆಲವು ಬದಲಾವಣೆಗಳನ್ನು ತಂದಿತು. 2025–26ರ ಶೈಕ್ಷಣಿಕ ವರ್ಷದಿಂದ ಅನ್ವಯವಾಗುವಂತೆ ಉತ್ತೀರ್ಣತೆಯಪ್ರತಿ ವಿಷಯದಲ್ಲಿ ಕನಿಷ್ಠ 30% ಅಂಕಗಳೊಂದಿಗೆ ಒಟ್ಟು 33% ಅಂಕಗಳಿಗೆ ಇಳಿಸಿತು.

ಇದೀಗ, 2026ರಲ್ಲಿ ಸರ್ಕಾರವು ತನ್ನ ಕಟ್ಟುನಿಟ್ಟಿನ ಕ್ರಮಗಳು ಮತ್ತು ಸುಧಾರಣೆಗಳೊಂದಿಗೆ ಅತ್ಯುತ್ತಮ ಫಲಿತಾಂಶ ಬರುವಂತೆ ಮಾಡಿದೆ. ಪರೀಕ್ಷೆ ಮತ್ತು ಮೌಲ್ಯಮಾನದಲ್ಲಿ ಪ್ರಮುಖ ಬದಲಾವಣೆಗಳಾದರೂ, ಎರಡೇ ವರ್ಷದಲ್ಲಿ ಸರ್ಕಾರದ ಕ್ರಮಗಳು ಫಲ ನೀಡಿವೆ. ಪ್ರಸ್ತುತ 86% ಫಲಿತಾಂಶ ಬಂದಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ, 13%ರಷ್ಟು ಹೆಚ್ಚಾಗಿದೆ.

ಈ ಫಲಿತಾಂಶವು ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪೋಷಕರಲ್ಲಿ ಹೊಸ ಉತ್ಸಾಹವನ್ನು ಮೂಡಿಸಿದೆ. ಬಾಲಕಿಯರು ಈ ಬಾರಿಯೂ ಬಾಲಕರಿಗಿಂತ ಉತ್ತಮ ಪ್ರದರ್ಶನ ನೀಡಿ, ರಾಜ್ಯದ ಶೈಕ್ಷಣಿಕ ಪ್ರಗತಿಯಲ್ಲಿ ಮುಂಚೂಣಿಯಲ್ಲಿದ್ದಾರೆ.

ಫಲಿತಾಂಶದ ಹೆಚ್ಚಳವು ಕೇವಲ ಸಂಖ್ಯೆಯಲ್ಲಿನ ಏರಿಕೆ ಮಾತ್ರವಲ್ಲ, ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಗುಣಾತ್ಮಕ ಬದಲಾವಣೆಯ ಸಂಕೇತವೂ ಆಗಿದೆ ಎಂದು ಮಧು ಬಂಗಾರಪ್ಪ ಹೇಳಿದರು.

## ನಕ್ಸಲರ ಸಂಪರ್ಕಿಸಲು ಟ್ರೆಕ್ಕಿಂಗ್ ಬಂದಿದ್ದ ಮಹಿಳೆ

ಮಡಿಕೇರಿ: ಜಿಲ್ಲೆಯಲ್ಲಿ ಸಂಚಲನ ಮೂಡಿಸಿದ್ದ ಕೇರಳ ಮೂಲದ ಶರಣ್ಯ ನಾಪತ್ತೆ ಪ್ರಕರಣ ಈಗ ರಾಜಕೀಯ ಆಯಾಮ ಪಡೆದುಕೊಂಡಿದೆ.

ಶರಣ್ಯ ಪತ್ತೆಯಾದ ರೀತಿ ಮತ್ತು ಆಕೆಯ ನಡವಳಿಕೆ ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದ್ದು, ಇದರ ಹಿಂದೆ 'ಕಾಣದ ಕೈಗಳ' ಕೈವಾಡವಿದೆ ಎಂದು ಮಡಿಕೇರಿ ಬಿಜೆಪಿ ಗ್ರಾಮಾಂತರ ಮಂಡಲದ ಪ್ರಮುಖರು ಗಂಭೀರ ಆರೋಪ ಮಾಡಿದ್ದಾರೆ.

ಈ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸುವಂತೆ ಒತ್ತಾಯಿಸಿ ಬಿಜೆಪಿ ನಾಯಕರು ನಾಪೋಕ್ಲು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಜಿಲ್ಲಾ ಬಿಜೆಪಿ ಗ್ರಾಮೀಣ ಮಂಡಲದ ಪ್ರಧಾನ ಕಾರ್ಯದರ್ಶಿ ಪಿ.ದಾನೋಜ್ ನೇತೃತ್ವದಲ್ಲಿ ಕಾರ್ಯಕರ್ತರು ಮಂಗಳವಾರ ನಾಪೋಕ್ಲು ಪೊಲೀಸ್ ಠಾಣೆಗೆ ತೆರಳಿ ದೂರು ಸಲ್ಲಿಸಿದ್ದಾರೆ.

ಏಪ್ರಿಲ್ 2ರಂದು ಕಾಣೆಯಾಗಿದ್ದ ಕೇರಳ ಮೂಲದ 36 ವರ್ಷದ ಟ್ರೆಕ್ಕರ್ ಶರಣ್ಯ ಅವರನ್ನು ನಾಲ್ಕು ದಿನಗಳ ಬಳಿಕ ಪತ್ತೆಹಚ್ಚಲಾಗಿತ್ತು. ನೂರಕ್ಕೂ ಹೆಚ್ಚು ರಕ್ಷಣಾ ಸಿಬ್ಬಂದಿ ನಡೆಸಿದ ವ್ಯಾಪಕ ಶೋಧ ಕಾರ್ಯಾಚರಣೆಯ ನಡುವೆಯೂ ಮೂರು ದಿನಗಳ ಕಾಲ ಪತ್ತೆಯಾಗದ ಶರಣ್ಯ, ನಾಲ್ಕನೇ ದಿನ ಅರಣ್ಯದಲ್ಲಿ ಪತ್ತೆಯಾಗಿರುವುದು ಅನುಮಾನಗಳನ್ನು ಹುಟ್ಟುಹಾಕಿದೆ.

## ಕೇರಳ 78.24%, ಅಸ್ಸಾಂ 85.66%, ಪುದುಚೇರಿಯಲ್ಲಿ 89.89% ಮತದಾನ

ನವದೆಹಲಿ: ನಾಲ್ಕು ರಾಜ್ಯಗಳು, ಒಂದು ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭೆ ಚುನಾವಣೆಯ ಪೈಕಿ ಇಂದು ಕೇರಳ, ಅಸ್ಸಾಂ ಮತ್ತು ಕೇಂದ್ರಾಡಳಿತ ಪ್ರದೇಶ ಪುದುಚೇರಿಯಲ್ಲಿ ಮತದಾನ ನಡೆಯಿತು. ಮತದಾರರು ಬೆಳಗ್ಗೆಯಿಂದಲೇ ಮತಗಟ್ಟೆಗೆ ಬಂದು ತಮ್ಮ ಮತ ಹಕ್ಕು ಚಲಾಯಿಸಿದರು. ಕೇರಳ 78.24%, ಅಸ್ಸಾಂ 85.66%, ಪುದುಚೇರಿಯಲ್ಲಿ 89.89% ಮತದಾನ ದಾಖಲಾಗಿದೆ.

ಮತದಾನ ಪ್ರಕ್ರಿಯೆ ಮುಕ್ತ, ನ್ಯಾಯಯುತ ಮತ್ತು ಶಾಂತಿಯುತವಾಗಿರುವುದನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಚುನಾವಣಾ ಆಯೋಗ ವ್ಯಾಪಕ ಭದ್ರತಾ ವ್ಯವಸ್ಥೆಗಳು, ದೊಡ್ಡ ಪ್ರಮಾಣದ ಚುನಾವಣಾ ಸಿಬ್ಬಂದಿಯ ನಿಯೋಜನೆ ಮತ್ತು ಬಿಗಿ ಮೇಲ್ವಿಚಾರಣೆಯನ್ನು ಅನುಷ್ಠಾನಗೊಳಿಸಿತ್ತು.

ಇದರ ಜೊತೆಗೆ, ಕರ್ನಾಟಕ, ನಾಗಾಲ್ಯಾಂಡ್ ಮತ್ತು ತ್ರಿಪುರಾದಲ್ಲಿ ಉಪಚುನಾವಣೆಗೆ ಮತದಾನ ನಡೆಯಿತು.

ಹಿರಿಯ ನಟ ಮೋಹನ್ ಲಾಲ್ ವೋಟ್ ಮಾಡಿ, ಇನ್‌ಸ್ಟಾದಲ್ಲಿ ಫೋಟೋ ಹಂಚಿಕೊಂಡಿದ್ದಾರೆ. ಕೇರಳದ ತ್ರಿಶೂರ್‌ನ ವಾಣಿಯಂಪರದಲ್ಲಿ ಮತ ಚಲಾಯಿಸಿದ ನಂತರ 62 ವರ್ಷದ ವ್ಯಕ್ತಿಯೊಬ್ಬರು ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ.

ಇನ್ನೂ, ಕೇಂದ್ರಾಡಳಿತ ಪ್ರದೇಶವಾದ ಪುದುಚೇರಿಯಲ್ಲಿ ಮುಖ್ಯಮಂತ್ರಿ ಎನ್.ರಂಗಸಾಮಿ ಮೋಟಾರ್ ಸೈಕಲ್‌ನಲ್ಲಿ ಮತಗಟ್ಟೆಗೆ ಆಗಮಿಸಿ, ಮತಚಲಾಯಿಸಿದ್ದು ವಿಶೇಷ ಗಮನ ಸೆಳೆದಿದೆ.

ಮತದಾನದ ನಡುವೆ ಅಸ್ಸಾಂ ಸಿಎಂ ಹಿಮಂತ ಬಿಸ್ವಾ ಶರ್ಮಾ ಗುವಾಹಟಿಯ ದೌಲ್ ಗೋವಿಂದ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿ, ಬಳಿಕ ಮತದಾನ ಮಾಡಿದ್ದಾರೆ. ದಿವಂಗತ ಗಾಯಕ ಜುಬೀನ್ ಗಾರ್ಗ್ ಅವರ ಪತ್ನಿ ಗರಿಮಾ ಸೈಕಿಯಾ ಗಾರ್ಗ್ ದಿಸ್ಪುರ್ ವಿಧಾನಸಭಾ ಕ್ಷೇತ್ರದ ಮತಗಟ್ಟೆ ಸಂಖ್ಯೆ 116ರಲ್ಲಿ ಮತ ಚಲಾಯಿಸಿದ್ದಾರೆ.

ಕೇಂದ್ರ ಸಚಿವ ಸರ್ಬಾನಂದ ಸೋನೋವಾಲ್ ಅವರು ದಿಬ್ರುಗಢದಲ್ಲಿ ಮತ ಚಲಾಯಿಸಿ, ನೂರು ಕ್ಷೇತ್ರ ಗೆಲ್ಲುವ ವಿಶ್ವಾಸ ವ್ಯಕ್ತಪಡಿಸಿದರು.

ಈ ಮಧ್ಯೆ ಬಂಗಾಳದಲ್ಲಿ ಪ್ರಚಾರ ನಡೆಸಿದ ಪ್ರಧಾನಿ ಮೋದಿ ಅವರು, ಟಿಎಂಸಿ ಕಿತ್ತೊಗೆಯಲು ಮತದಾರರಿಗೆ ಕರೆ ನೀಡಿದ್ದಾರೆ.

ವಿಪಕ್ಷ ನಾಯಕ ಸುವೇಂದು ಅಧಿಕಾರಿಯ ಭದ್ರಕೋಟೆ ಹಲ್ದಿಯಾದಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡಿದ ಮೋದಿ, ಟಿಎಂಸಿಯ ಭ್ರಷ್ಟಾಚಾರ ಮತ್ತು ಮಹಿಳೆಯರ ವಿರುದ್ಧದ ಅಪರಾಧಗಳ ಎಲ್ಲಾ ಫೈಲ್‌ಗಳನ್ನು ಬಿಜೆಪಿ ಮತ್ತೆ ತೆರೆಯುತ್ತದೆ. ಅಕ್ರಮದಲ್ಲಿ ತೊಡಗಿರುವ ಎಲ್ಲಾ ನಾಯಕರನ್ನು ಜೈಲಿಗೆ ಹಾಕ್ತೇವೆ.

ನಿಜವಾದ ನಾಗರಿಕರಿಗೆ ಸರ್ಕಾರಿ ಸೌಲಭ್ಯಗಳನ್ನು ಒದಗಿಸಲಾಗುವುದು, ನುಸುಳುಕೋರರು ಈ ದೇಶದಲ್ಲಿ ಉಳಿಯಲು ಬಿಡಲ್ಲ, 7ನೇ ವೇತನ ಆಯೋಗವನ್ನು ಜಾರಿಗೆ ತರುತ್ತೇವೆ ಅಂತ ಭರವಸೆ ನೀಡಿದ್ದಾರೆ.

## ಶಾಲೆಗಳಲ್ಲಿ ವಂದೇಮಾತರಂ ಗೀತೆ ಹಾಡುವುದನ್ನು ವಿರೋಧಿಸಿ ಸಲ್ಲಿಸಿದ್ದ ಪಿಐಎಲ್ ವಜಾ

ಬೆಂಗಳೂರು: ಶಾಲೆಗಳಲ್ಲಿ ಪ್ರತಿದಿನ 'ವಂದೇ ಮಾತರಂ' ಗೀತೆಯನ್ನು ಎಲ್ಲ ಆರು ಚರಣಗಳೊಂದಿಗೆ ಕಡ್ಡಾಯವಾಗಿ ಹಾಡುವ ಸಂಬಂಧ ಕೇಂದ್ರ ಸರ್ಕಾರ ಹೊರಡಿಸಿರುವ ಶಿಷ್ಟಾಚಾರ ಮಾರ್ಗಸೂಚಿಗಳನ್ನು ಅಸಾಂವಿಧಾನಿಕ ಎಂದು ಘೋಷಿಸುವಂತೆ ಕೋರಿ ಸಲ್ಲಿಕೆಯಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಲು ನಿರಾಕರಿಸಿರುವ ಹೈಕೋರ್ಟ್ ಅದನ್ನು ವಜಾಗೊಳಿಸಿದೆ.

ಬೆಂಗಳೂರಿನ ವಕೀಲ ಸೋಮಶೇಖರ್ ರಾಜವಂಶಿ ಸಲ್ಲಿಸಿರುವ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಮತ್ತು ನ್ಯಾಯಮೂರ್ತಿ ಸಿ ಎಂ ಪೂಣಚ್ಚ ಅವರ ನೇತೃತ್ವದ ವಿಭಾಗೀಯ ಪೀಠ ವಿಚಾರಣೆ ನಡೆಸಿತು.

ಹೆಚ್ಚುವರಿ ಸಾಲಿಸಿಟರ್ ಜನರಲ್ ಕೆ ಅರವಿಂದ್ ಕಾಮತ್ ಅವರು "ಕೇಂದ್ರ ಗೃಹ ಇಲಾಖೆಯ ಆದೇಶದಲ್ಲಿ ವಂದೇ ಮಾತರಂ ಗೀತೆ ಹಾಡಬಹುದು ಎಂಬ ಪದ ಬಳಕೆ ಮಾಡಲಾಗಿದ್ದು, ಅದು ಕಡ್ಡಾಯವಲ್ಲ ಎಂಬುದನ್ನು ಸೂಚಿಸುತ್ತದೆ. ಅಲ್ಲದೇ, ಈಚೆಗೆ ಸುಪ್ರೀಂ ಕೋರ್ಟ್ ಇಂಥದ್ದೇ ಮನವಿ ಒಳಗೊಂಡಿದ್ದ ಪಿಐಎಲ್ ವಜಾಗೊಳಿಸಿದೆ" ಎಂದರು.

ಇದನ್ನು ಆಲಿಸಿದ ಪೀಠವು "ವಂದೇ ಮಾತರಂ ಗೀತೆಯನ್ನು ಯಾವುದೇ ಶಾಸನಬದ್ಧ ಚೌಕಟ್ಟಿನಲ್ಲಿ ಸೇರ್ಪಡೆ ಮಾಡಲಾಗಿಲ್ಲ. ಕೇಂದ್ರ ಸರ್ಕಾರದ ಆದೇಶದಲ್ಲಿ ಸಾಧ್ಯತೆ ಎಂಬ ಪದ ಬಳಕೆ ಮಾಡಿದ್ದು, ಅದು ಕಡ್ಡಾಯವಲ್ಲ.

## ಶೇ.33ರಷ್ಟು ಮಹಿಳಾ ಮೀಸಲಾತಿ ಜಾರಿಗೆ ಸಂಪುಟ ಅನುಮೋದನೆ

ನವದೆಹಲಿ: ದೇಶದ ರಾಜಕೀಯ ಇತಿಹಾಸದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮಹತ್ವದ ಹೆಜ್ಜೆ ಇರಿಸಿದೆ. 2029 ರಿಂದ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಶೇಕಡಾ 33 ರಷ್ಟು ಮಹಿಳಾ ಮೀಸಲಾತಿಯನ್ನು ಜಾರಿಗೆ ತರಲು ಅಗತ್ಯವಿರುವ ಮೂರು ಪ್ರಮುಖ ಮಸೂದೆಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.

ಈ ಕುರಿತು ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, 2023 ರಲ್ಲಿ ಅಂಗೀಕರಿಸಲಾದ ಮಹಿಳಾ ಮೀಸಲಾತಿ ಕಾನೂನನ್ನು ಜಾರಿಗೆ ತರುವ ನಿಟ್ಟಿನಲ್ಲಿ ಸಂಸತ್ತಿನ ಬಜೆಟ್ ಅಧಿವೇಶನವನ್ನು ಮೂರು ದಿನಗಳ ಕಾಲ ವಿಸ್ತರಿಸಲಾಗಿದೆ ಎಂದು ತಿಳಿಸಿದರು. ಈ ವಿಶೇಷ ಅಧಿವೇಶನವು ಏಪ್ರಿಲ್ 16, 17 ಮತ್ತು 18 ರಂದು ನಡೆಯಲಿದ್ದು, ಮಹಿಳಾ ಹಕ್ಕುಗಳ ಬಗ್ಗೆ ಉಭಯ ಸದನಗಳಲ್ಲಿ ಸುದೀರ್ಘ ಚರ್ಚೆ ನಡೆಯಲಿದೆ. ಈ ಪ್ರಸ್ತಾವನೆಯು ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಪ್ರಸ್ತುತ 543 ರಿಂದ 816 ಕ್ಕೆ ಹೆಚ್ಚಿಸಲಿದ್ದು, 273 ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿಡಲಾಗಿದೆ. ಈ ಪ್ರಸ್ತಾವನೆಯು ಮೊದಲು ಆ ವರ್ಷ ನಡೆಯುವ ಲೋಕಸಭಾ ಚುನಾವಣೆಗಳು ಮತ್ತು ಕೆಲವು ರಾಜ್ಯ ವಿಧಾನಸಭಾ ಚುನಾವಣೆಗಳಲ್ಲಿ ಜಾರಿಗೆ ಬರಲಿದೆ.

ದೇಶದ ಅರ್ಧದಷ್ಟು ಜನಸಂಖ್ಯೆಯ ಕೊಡುಗೆಯನ್ನು ಗುರುತಿಸುವುದು ಮತ್ತು ಸಂಸತ್ತಿನಲ್ಲಿ ಅವರ ಭಾಗವಹಿಸುವಿಕೆಯನ್ನು




ಖಚಿತಪಡಿಸುವುದು ನಮ್ಮ ಗುರಿ. ಇದು ಮಹಿಳಾ ಸಬಲೀಕರಣವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲಿದೆ ಎಂದು ಪ್ರಧಾನಿ ಆಶಯ ವ್ಯಕ್ತಪಡಿಸಿದರು.

ರಾಜ್ಯ ಶಾಸಕಾಂಗ ಸಭೆಗಳಲ್ಲಿಯೂ ಸಹ ಅದೇ ಅನುಪಾತದಲ್ಲಿ ಸ್ಥಾನಗಳನ್ನು ಕಾಯ್ದಿರಿಸಲಾಗುವುದು. ಸರ್ಕಾರವು ಸಂವಿಧಾನ ತಿದ್ದುಪಡಿ ಮಸೂದೆಯನ್ನು ಪರಿಚಯಿಸುತ್ತದೆ, ಜೊತೆಗೆ ಸೀಟುಗಳನ್ನು ಹೊಸದಾಗಿ ನಿರ್ಧರಿಸಲು ಡಿಲಿಮಿಟೇಶನ್ ಕಾಯ್ದೆಯನ್ನು ತಿದ್ದುಪಡಿ ಮಾಡಲು ಪ್ರತ್ಯೇಕ ಸಾಮಾನ್ಯ ಮಸೂದೆಯನ್ನು ಪರಿಚಯಿಸುತ್ತದೆ.

ಹೊಸ ಸ್ಥಾನಗಳನ್ನು 2027 ರ ಜನಗಣತಿಯ ಬದಲಿಗೆ 2011 ರ ಜನಗಣತಿಯ ಆಧಾರದ ಮೇಲೆ ನಿರ್ಧರಿಸಬಹುದು. ಈ ಕಾನೂನು ರಾಜ್ಯ ಶಾಸಕಾಂಗಗಳು ಮತ್ತು ದೆಹಲಿ, ಜಮ್ಮು ಮತ್ತು ಕಾಶ್ಮೀರ ಮತ್ತು ಪುದುಚೇರಿಯಂತಹ ಕೇಂದ್ರಾಡಳಿತ ಪ್ರದೇಶಗಳಿಗೂ ಅನ್ವಯಿಸುತ್ತದೆ.

ಉತ್ತರ ಪ್ರದೇಶದಲ್ಲಿ ಮಹಿಳಾ ಲೋಕಸಭಾ ಸ್ಥಾನಗಳು ಅತಿ ಹೆಚ್ಚು ಏರಿಕೆಯಾಗಲಿದ್ದು, 40 ಸ್ಥಾನಗಳು 80 ರಿಂದ 120 ಕ್ಕೆ ಏರಿಕೆಯಾಗಲಿವೆ. ಮಹಾರಾಷ್ಟ್ರದಲ್ಲಿ ಮಹಿಳೆಯರಿಗೆ 24 ಸ್ಥಾನಗಳು ಮೀಸಲಾಗಲಿದ್ದು, ಅದರ ಲೋಕಸಭಾ ಸ್ಥಾನಗಳು 48 ರಿಂದ 72 ಕ್ಕೆ ಏರಿಕೆಯಾಗಲಿವೆ.

## ವಿಂಡೋ ಟ್ರೈಲಿಂಗ್ ಮೂಲಕ ರೈಲ್ವೆ ಕಾಮಗಾರಿಗಳ ಪರಿವೀಕ್ಷಣೆ

ಬೆಂಗಳೂರು: ಐದು ಗಂಟೆಗಳ ಕಾಲ ಬೆಂಗಳೂರಿನಿಂದ ಮೈಸೂರಿಗೆ ವಿಶೇಷ ರೈಲಿನಲ್ಲಿ ಪ್ರಯಾಣ ಮಾಡಿ ಆ ಮಾರ್ಗದಲ್ಲಿ ನಡೆಯುತ್ತಿರುವ ರೈಲ್ವೆ ಇಲಾಖೆಗೆ ಸಂಬಂಧಿಸಿದ ಅಭಿವೃದ್ಧಿ ಕಾರ್ಯಗಳನ್ನು ಪರಿವೀಕ್ಷಣೆ ನಡೆಸಿದ್ದು ನನಗೆ ವಿಶೇಷ ಅನುಭವವಾಗಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು.

ರೈಲು ರೈಲು ಪ್ರಯಾಣದ ನಡುವೆ ತಮ್ಮನ್ನು ಭೇಟಿಯಾದ ಮಾಧ್ಯಮಗಳ ಜೊತೆ ಮಾತನಾಡಿದ ಕೇಂದ್ರ ಸಚಿವರು, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರೊಂದಿಗೆ ಇಂದು ಬೆಳಗ್ಗೆ ಬೆಂಗಳೂರಿನ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಿಂದ ಬೆಳಗ್ಗೆ 10 ಗಂಟೆಗೆ ಹೊರಟು ಅಪರಾಹ್ನ 3 ಗಂಟೆಗೆ ಮೈಸೂರು ತಲುಪಿದ್ದೇವೆ.



ವಿಂಡೋ ಟ್ರೈಲಿಂಗ್ ಮೂಲಕ ಪರಿವೀಕ್ಷಣೆ ನಡೆಸಲಾಯಿತು ಎಂದರು.

ನಾನು ಮೊದಲು ಹೆಚ್ಚಾಗಿ ರೈಲಿನಲ್ಲಿಯೇ ರಾಜ್ಯಾದ್ಯಂತ ಪ್ರವಾಸ ಮಾಡುತ್ತಿದ್ದೆ. ಕೆಲ ವರ್ಷಗಳಿಂದ ರೈಲಿನಲ್ಲಿ ಪ್ರಯಾಣಿಸುವ ಅವಕಾಶ ಸಿಕ್ಕಿರಲಿಲ್ಲ. ಈಗ ಮತ್ತೊಮ್ಮೆ ರೈಲಿನಲ್ಲಿ ಪ್ರಯಾಣಿಸಿ ಜನರ ಸಮಸ್ಯೆ ಆಲಿಸುವ ಅವಕಾಶ ಸಿಕ್ಕಿರುವುದು ಸಂತೋಷ ತಂದಿದೆ. ಕೇಂದ್ರ ಸಚಿವನಾಗಿ ರೈಲಿನಲ್ಲಿ ಸಂಚರಿಸಿದ್ದು, ಆ ಸಂದರ್ಭದಲ್ಲಿ ಜನತೆಯನ್ನು ಮಾರ್ಗದ ಉದ್ದಕ್ಕೂ ಭೇಟಿಯಾಗಿದ್ದು ರೋಮಾಂಚನ ಉಂಟುಮಾಡಿದೆ ಎಂದು ಹೇಳಿದರು.

ಸಾಮೂಹಿಕ ಸಾರಿಗೆ ವ್ಯವಸ್ಥೆಗಳಲ್ಲಿ ರೈಲು ಸಾರಿಗೆಗೆ ಅತ್ಯಂತ ಮಹತ್ವವಿದೆ. ಪ್ರಯಾಣಿಕರ ಸಂಚಾರ ಮಾತ್ರವಲ್ಲದೆ ವಾಣಿಜ್ಯ ದೃಷ್ಟಿಯಿಂದಲೂ ರೈಲು ವ್ಯವಸ್ಥೆ ದೇಶದ ಬೆನ್ನೆಲುಬಾಗಿದೆ. ಮುಖ್ಯವಾಗಿ ಬೆಂಗಳೂರು ಮತ್ತು ಮೈಸೂರು ನಗರಗಳ ನಡುವೆ ರೈಲು ಸಂಚಾರ ಈಗಾಗಲೇ ಉತ್ತಮವಾಗಿದ್ದು ಅದನ್ನು ಮತ್ತಷ್ಟು ಉತ್ತಮಗೊಳಿಸುವ ನಿಟ್ಟಿನಲ್ಲಿ ನಾನು ಮತ್ತು ಸೋಮಣ್ಣನವರು ಚರ್ಚೆ ನಡೆಸಿದ್ದೇವೆ. ಪ್ರಧಾನಿ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ ಈ ಭಾಗದಲ್ಲಿ ಮತ್ತಷ್ಟು ಪರಿವರ್ತನಾತ್ಮಕ ಬೆಳವಣಿಗೆಯನ್ನು ಕಾಣುವ ದಿನಗಳು ದೂರವಿಲ್ಲ ಎಂದು ಕುಮಾರಸ್ವಾಮಿ ಅವರು ಹೇಳಿದರು.

ಪ್ರಮುಖವಾಗಿ ನಾನು ರಾಮನಗರ ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿ ಹಾದುಹೋಗುವ ರೈಲು ಮಾರ್ಗದ ವ್ಯಾಪ್ತಿಯಲ್ಲಿ ಬರುವ ನಿಲ್ದಾಣಗಳ ಅಭಿವೃದ್ಧಿ, ಹೆಚ್ಚುವರಿ ರೈಲುಗಳ ಸಂಚಾರ, ಪ್ರಮುಖ ರೈಲುಗಳ ನಿಲುಗಡೆ, ವಾಣಿಜ್ಯ ಚಟುವಟಿಕೆಗಳ ವೃದ್ಧಿ ಹಾಗೂ ಉದ್ಯೋಗ ಸೃಷ್ಟಿಸುವ ನಿಟ್ಟಿನಲ್ಲಿ ಸಚಿವ ಸೋಮಣ್ಣ ಅವರೊಂದಿಗೆ ವಿಸ್ತೃತ ಮಾತುಕತೆ ನಡೆಸಿದ್ದೇನೆ ಎಂದು ಕುಮಾರಸ್ವಾಮಿ ಅವರು ಮಾಹಿತಿ ನೀಡಿದರು.

ಮುಖ್ಯವಾಗಿ ಎಲ್ಲಾ ಲೆವೆಲ್ ಕ್ರಾಸಿಂಗ್ ಗಳನ್ನು ಪರಿಶೀಲಿಸಿ ಅಗತ್ಯವಿರುವ ಕಡೆ ಅಂಡರ್ ಪಾಸ್ ಗಳನ್ನು ನಿರ್ಮಿಸುವ ನಿಟ್ಟಿನಲ್ಲಿ ಸಚಿವ ಸೋಮಣ್ಣ ಅವರೊಂದಿಗೆ ಚರ್ಚೆ ನಡೆಸಲಾಯಿತು.

ಜತೆಗೆ, ಈ ಮಾರ್ಗದ ಮದ್ದೂರು, ಶ್ರೀರಂಗಪಟ್ಟಣ, ಪಾಂಡವಪುರ ಸೇರಿದಂತೆ ಹಲವಾರು ರೈಲು ನಿಲ್ದಾಣಗಳನ್ನು ಅಭಿವೃದ್ಧಿಪಡಿಸಿ ಮೇಲ್ದರ್ಜೆಗೆ ಏರಿಸುವ ಬಗ್ಗೆ ರೈಲ್ವೆ ಸಚಿವರು ಮತ್ತು ಅಧಿಕಾರಿಗಳ ಜತೆ ಸಮಾಲೋಚನೆ ನಡೆಸಲಾಯಿತು ಎಂದು ಬೃಹತ್ ಕೈಗಾರಿಕಾ ಸಚಿವರು ಹೇಳಿದರು.

ಪಟ್ಟಣದಲ್ಲಿ ಹಾಲಿ ಇರುವ ರೈಲು ನಿಲ್ದಾಣ ಪಟ್ಟಣದ ಜನರಿಗೆ ದೂರದಲ್ಲಿದ್ದು, ಅದು ಸುಮಾರು ನೂರು ವರ್ಷಗಳಷ್ಟು ಹಳೆಯದು. ಹೀಗಾಗಿ ಪಟ್ಟಣದಲ್ಲಿ ಮತ್ತೊಂದು ಸುಸಜ್ಜಿತ ರೈಲು ನಿಲ್ದಾಣ ಅಗತ್ಯವಿದೆ ಎಂದು ಸಚಿವ ಸೋಮಣ್ಣ ಅವರಿಗೆ ಕುಮಾರಸ್ವಾಮಿ ಅವರು ಮನವರಿಕೆ ಮಾಡಿಕೊಟ್ಟರು. ಇದಕ್ಕೆ ಸ್ಪಂದಿಸಿದ ಸಚಿವ ಸೋಮಣ್ಣ ಅವರು ತಕ್ಷಣವೇ ಈ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಭಾರತ ಸಾರಥಿ
09/04/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ನಿರುದ್ಯೋಗಿಗಳ ಆಕ್ರೋಶದ ಪ್ರತಿಭಟನೆ: 56 ಸಾವಿರ ಹುದ್ದೆಗಳ ಭರ್ತಿಗೆ ಪಟ್ಟು

ಕೋಲಾರ

ರಾಜ್ಯಾದ್ಯಂತ ವಿದ್ಯಾರ್ಥಿಗಳಿಗೆ ಇರುವ ಸಮಸ್ಯೆಗಳನ್ನು ಕರ್ನಾಟಕ ಸರ್ಕಾರ ಗಂಭೀರವಾಗಿ ಪರಿಗಣಿಸದೆ ಇದ್ದರೇ ಮುಂದಿನ ದಿನಗಳಲ್ಲಿ ಕರ್ನಾಟಕ ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲೂ ಯುವಶಕ್ತಿಯ ಹೋರಾಟವನ್ನು ತೋರಿಸಬೇಕಾಗುತ್ತದೆ ಎಂದು ಆಲ್ ಕರ್ನಾಟಕ ಸ್ಟೇಟ್ ಸ್ಟೂಡೆಂಟ್ಸ್ ಅಸೋಸಿಯೇಷನ್ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆ ನಡೆಸಿದ ಅವರು, ಕರ್ನಾಟಕ ಸರ್ಕಾರ ಕೋಲಾರ ಜಿಲ್ಲೆಗೆ 500 ಆಸನಗಳ ಸಾಮರ್ಥ್ಯದ ಹೊಸ ಗ್ರಂಥಾಲಯ ಮಂಜೂರು ಮಾಡಬೇಕು, ಕೆಪಿಎಸ್‌ಸಿಯಲ್ಲಿ ಅಕ್ರಮವಾಗಿರುವ ಕೆಎಎಸ್, ಸಿಟಿಐ, ಪಿಡಿಓ, ಮುಂತಾದ ಎಲ್ಲಾ ನೇಮಕಾತಿಗಳ ಬಗ್ಗೆ ತನಿಖೆ ಮಾಡಲು ಸಿಬಿಐಗೆ ಒಪ್ಪಿಸಬೇಕು. ರಾಜ್ಯ ಸರ್ಕಾರ ಈ ಕೂಡಲೇ 56432 ಹುದ್ದೆಗಳಿಗೆ ನೇಮಕಾತಿ ಅಧಿಸೂಚನೆ ಹೊರಡಿಸಿ ಹಾಗೂ ಎಂಟು ತಿಂಗಳ ಒಳಗಡೆ ನೇಮಕಾತಿಯನ್ನು ಮಾಡಿ ಮುಗಿಸಬೇಕು, ಪ್ರಬುದ್ಧ ಅಕಾಡೆಮಿಯ ಉಚಿತ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ತರಬೇತಿ ವಿದ್ಯಾರ್ಥಿಗಳಿಗೆ ಸ್ಟೈಫಂಡ್ ಹಣವನ್ನು ನೀಡಬೇಕು, ಪಿ.ಎಸ್.ಐ ಸಿವಿಲ್ 600 ಆರ್ಥಿಕ ಅನುಮೋದನೆ ದೊರೆತಿದ್ದು ಕೂಡಲೇ ನೇಮಕಾತಿ ಪ್ರಾರಂಭಿಸಬೇಕು. ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಯನ್ನು ಆರ್ಥಿಕ ಇಲಾಖೆಯಿಂದ ಅನುಮತಿ ಪಡೆದಿರುವ ಎಲ್ಲಾ ಹುದ್ದೆಗಳನ್ನು ಕೂಡಲೇ ಪ್ರಾರಂಭಿಸಬೇಕು. ಕೆ.ಎಸ್. ಆರ್.ಪಿ, ಆರ್.ಎಸ್.ಐ, ಕೆ.ಎಸ್.ಐ.ಎಸ್.ಎಫ್, ಐ.ಬಿ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗಳನ್ನು ಕೂಡಲೇ ನೇಮಕಾತಿ ಪ್ರಾರಂಭಿಸಬೇಕು, ಎಸ್.ಓ ಸಿ.ಓ ನೇಮಕಾತಿ ಪ್ರಾರಂಭಿಸಬೇಕೆಂದು ಆಗ್ರಹಿಸಿದರು.

ಪಿ.ಎಸ್.ಟಿ.ಆರ್, ಜಿ.ಪಿ.ಎಸ್.ಟಿ.ಆರ್. ಹೆಚ್.ಎಸ್.ಟಿ.ಆರ್ ಕೂಡಲೇ ನೇಮಕಾತಿ ಪ್ರಾರಂಭಿಸಬೇಕು ಪಿ.ಯು ಲೆಕ್ಚರರ್ ಹಾಗೂ ಅಸಿಸ್ಟೆಂಟ್ ಪ್ರೊಫೆಸರ್ ಕೂಡಲೇ ನೇಮಕಾತಿ ಪ್ರಾರಂಭಿಸಬೇಕು, ದೈಹಿಕ ಶಿಕ್ಷಕರು & ಕಂಪ್ಯೂಟರ್ ಆಪರೇಟರ್ & ವಾರ್ಡನ್ ಕೂಡಲೇ ನೇಮಕಾತಿ ಪ್ರಾರಂಭಿಸಬೇಕು. ಗ್ರಂಥಪಾಲಕ ಹಾಗೂ ಗ್ರಂಥಾಲಯ ಸಹಾಯಕ ನೇಮಕಾತಿಯನ್ನು ಕೂಡಲೇ ಪ್ರಾರಂಭ ಮಾಡಬೇಕು, 384 ಕೆ.ಎ.ಎಸ್ ಕನ್ನಡ ಅಭ್ಯರ್ಥಿಗಳಿಗೆ ನ್ಯಾಯ ದೊರಕಿಸಬೇಕು, 2000 ಎಫ್.ಡಿ.ಎ & 2000 ಎಸ್.ಡಿ.ಎ ನೇಮಕಾತಿಯನ್ನು ಪ್ರಾರಂಭಿಸಬೇಕು, ಎಕ್ಸೈಜ್ ಸಬ್ ಇನ್ಸ್‌ಪೆಕ್ಟರ್ 247 ಹುದ್ದೆಗಳ ನೇಮಕಾತಿಯನ್ನು ಕೂಡಲೇ ಪ್ರಾರಂಭಿಸಲೇಬೇಕು, ಸಬ್ ರಿಜಿಸ್ಟ್ರಾರ್ ಮತ್ತು ರೆವೆನ್ಯೂ ಇನ್ಸ್‌ಪೆಕ್ಟರ್ ಹುದೆಗಳ ನೇಮಕಾತಿಯನ್ನು ಕೂಡಲೇ ಪ್ರಾರಂಭಿಸಲೇಬೇಕು, ಸಿ.ಟಿ.ಐ ಮತ್ತು ಆರ್.ಟಿ.ಓ ಹೊಸ ನೇಮಕಾತಿಯನ್ನು ಕೂಡಲೇ ಪ್ರಾರಂಭಿಸಲೇಬೇಕೆಂದು ಒತ್ತಾಯಿಸಿದರು. ಪಿ.ಡಿ.ಓ ಗ್ರೇಡ್ –1 ಮತ್ತು ಗ್ರೇಡ್–2ಎಫ್.ಡಿ.ಎ ಮತ್ತು ಎಸ್.ಡಿ.ಎ ವಿ.ಎ.ಓ ಕೂಡಲೇ ನೇಮಕಾತಿ ಪ್ರಾರಂಭಿಸಲೇಬೇಕು, ಓ.ಬಿ.ಸಿ, ಎಸ್. ಡಬ್ಲ್ಯೂ.ಡಿ, ಮೈನಾರಿಟಿ ಡಿಪಾರ್ಟ್‌ಮೆಂಟ್, ಡಿ.ಎಂ.ಓ ತಾಲೂಕು ವೆಲ್ ಫೇರ್ ಆಫೀಸ್ ಹೊಸ ನೇಮಕಾತಿಯನ್ನು ಕೂಡಲೇ ಪ್ರಾರಂಭಿಸಲೇಬೇಕು, ಫುಡ್ ಅಂಡ್ ಸಿವಿಲ್ ಸಪ್ಲೆ ಇಲಾಖೆಯ ಫುಡ್ ಇನ್ಸ್‌ಪೆಕ್ಟರ್ ಹೊಸ ನೇಮಕಾತಿಯನ್ನು ಕೂಡಲೇ ಪ್ರಾರಂಭಿಸಲೇಬೇಕು, ಲ್ಯಾಂಡ್ ಸರ್ವೇಯರ್, ಎ.ಓ, ಎಎಓ ಹುದ್ದೆಗಳನ್ನು ಕೂಡಲೇ ಕೆ.ಇ.ಎ ಮೂಲಕ ನೇಮಕಾತಿ ಪ್ರಾರಂಭಿಸಲೇಬೇಕು ಎಂದು ಆಗ್ರಹಿಸಿದರು.




ಪ್ರತಿಭಟನೆಯಲ್ಲಿ ಹಿಂದುಳಿದ ವರ್ಗಗಳ ಜಿಲ್ಲಾ ಉಪಾಧ್ಯಕ್ಷ ಎನ್.ನಂದೀಶ್, ತಾಲೂಕು ಉಪಾಧ್ಯಕ್ಷ ಸಿ.ಕಲ್ಲೇಶ್, ಕರವೇ ಜಿಲ್ಲಾಧ್ಯಕ್ಷ ಮೇಡಿಹಾಳ ರಾಘವೇಂದ್ರ, ಆಲ್ ಕರ್ನಾಟಕ ಸ್ಟೇಟ್ ಸ್ಟೂಡೆಂಟ್ಸ್ ಅಸೋಸಿಯೇಷನ್ ಜಿಲ್ಲಾಧ್ಯಕ್ಷ ಚಂದ್ರಪ್ಪ, ಸದಸ್ಯರಾದ ವೆಂಕಟೇಶ್, ಅಂಬರೀಶ್, ಕಿರಣ್, ನಾಗೇಶ್, ಜಿತೇಂದ್ರ, ಸಂತೋಷ್, ಸುಬ್ರಮಣಿ ಪ್ರಮೋದ್, ರಾಕೇಶ್ ಇದ್ದರು.

# ವೇಮಗಲ್-ಕುರಗಲ್ ಪಟ್ಟಣಕ್ಕೆ ಸಬ್‌ರಿಜಿಸ್ಟ್ರಾರ್ ಕಚೇರಿ ಮಂಜೂರು

ಕೋಲಾರ



ಮಾಜಿ ಸಭಾಪತಿ ವಿ.ಆರ್. ಸುದರ್ಶನ್ ಅವರ ಮನವಿಗೆ ಸ್ಪಂದಿಸಿರುವ ರಾಜ್ಯ ಸರ್ಕಾರ ತಾಲ್ಲೂಕಿನ ವೇಮಗಲ್ ಪಟ್ಟಣದಲ್ಲಿ ಉಪ ನೊಂದಣಾಧಿಕಾರಿಗಳ ಕಚೇರಿ ಪ್ರಾರಂಭಿಸಲು ಅನುಮತಿ ನೀಡಿದ್ದು, ಈ ಕುರಿತು ಸರ್ಕಾರದ ಕಂದಾಯ ಇಲಾಖೆ ಉಪಕಾರ್ಯದರ್ಶಿ ವಿ.ಪದ್ಮ ಅಧಿಕೃತ ಆದೇಶ ಹೊರಡಿಸಿದ್ದಾರೆ. ತಾಲ್ಲೂಕೊಂದಕ್ಕೆ ಅಗತ್ಯವಿರುವ ವಿವಿಧ ಇಲಾಖೆಗಳನ್ನು ಒಂದೊಂದಾಗಿ ಮಂಜೂರು ಮಾಡಿಸಿಕೊಳ್ಳುವ ಪ್ರಯತ್ನ ಸಾಗಿದೆ.

ಮಾಜಿ ಸಭಾಪತಿ ವಿ.ಆರ್. ಸುದರ್ಶನ್ ಅವರು ಮುಖ್ಯಮಂತ್ರಿಗಳಿಗೆ ಈ ಸಂಬಂಧ ಮನವಿ ಸಲ್ಲಿಸಿ, ಕೋಲಾರ ತಾಲ್ಲೂಕಿನಲ್ಲಿ 7 ಕಂದಾಯ ಹೋಬಳಿಗಳಿದ್ದು, ದೊಡ್ಡ ಕಂದಾಯ ತಾಲ್ಲೂಕು ಆಗಿರುವುದರಿಂದ ಕೋಲಾರದ ಸಬ್‌ರಿಜಿಸ್ಟ್ರಾರ್ ಕಚೇರಿಯಲ್ಲಿ ಒತ್ತಡ ಹೆಚ್ಚಿದೆ. ಈ ಹಿನ್ನಲೆಯಲ್ಲಿ ವೇಮಗಲ್‌ನಲ್ಲಿ ಉಪ ನೊಂದಣಾಧಿಕಾರಿಗಳ ಕಚೇರಿ ಪ್ರಾರಂಭಿಸುವ ಮೂಲಕ ಈ ಭಾಗದ ಜನತೆಗೆ ನೆರವಾಗಲು ಕೋರಿದ್ದರು.

ಸುದರ್ಶನ್ ಅವರ ಮನವಿಗೆ ಸ್ಪಂದಿಸಿರುವ ಮುಖ್ಯಮಂತ್ರಿಗಳು ಮತ್ತು ಸರ್ಕಾರ ಕೂಡಲೇ ಜಾರಿಗೆ ಬರುವಂತೆ ವೇಮಗಲ್‌ನಲ್ಲಿ ಸಬ್‌ರಿಜಿಸ್ಟ್ರಾರ್ ಕಚೇರಿ ಆರಂಭಿಸಲು ಸೂಚಿಸಿದ್ದು, ಸದರಿ ಕಚೇರಿಗೆ ಇತರೆ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೆಚ್ಚುವರಿ ಸಿಬ್ಬಂದಿಯನ್ನು ಮರುನಿಯೋಜಿಸುವಂತೆ ತಿಳಿಸಿದೆ. ಇಲ್ಲವಾದಲ್ಲಿ ಮಾತ್ರ ಹುದ್ದೆಗಳನ್ನು ಸೃಜಿಸುವ ಕುರಿತು ಸೂಕ್ತ ಸ್ಪಷ್ಟನೆಯೊಂದಗೆ ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುಂದ್ರಾಂಕಗಳ ಆಯುಕ್ತರಿಗೆ ಪ್ರಸ್ತಾವನೆ ಸಲ್ಲಿಸಲು ಆದೇಶಿಸಲಾಗಿದೆ.

**ಸುದರ್ಶನ್‌ರಿಂದ ಸರ್ಕಾರಕ್ಕೆ ಧನ್ಯವಾದ:**

ವೇಮಗಲ್‌ಗೆ ಸಬ್‌ರಿಜಿಸ್ಟ್ರಾರ್ ಕಚೇರಿ ಮಂಜೂರು ಮಾಡಿದ್ದರ ಕುರಿತು ಹರ್ಷ ವ್ಯಕ್ತಪಡಿಸಿರುವ ಮಾಜಿ ಸಭಾಪತಿ ವಿ.ಆರ್.ಸುದರ್ಶನ್, ಕರ್ನಾಟಕ ಸರ್ಕಾರಕ್ಕೆ ಧನ್ಯವಾದ ಸಲ್ಲಿಸಿದ್ದಾರೆ. ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಕಂದಾಯ ಸಚಿವರು. ಕೋಲಾರ ಶಾಸಕರು ವಿಧಾನ ಪರಿಷತ್ ಸದಸ್ಯರು ರೆವಿನ್ಯೂ ಇಲಾಖೆ ಮತ್ತು ಆರ್ಥಿಕ ಇಲಾಖೆ ಅಧಿಕಾರಿಗಳಿಗೆ ಅವರು ವೇಮಗಲ್ ನಾಗರೀಕರು, ಸಂಘ ಸಂಸ್ಥೆಗಳ ಪರವಾಗಿ ಧನ್ಯವಾದ ಮತ್ತು ಕೃತಜ್ಞತೆ ಸಲ್ಲಿಸಿದ್ದಾರೆ.

# ಜಯನಗರದಲ್ಲಿ ಇಯರ್ 360ರ ಹೊಸ ಬೆಸ್ಟ್‌ಸೌಂಡ್ ಸೆಂಟರ್ ಉದ್ಘಾಟನೆ




ಬೆಂಗಳೂರು

ಶ್ರವಣ ಆರೈಕೆಯಲ್ಲಿ ಹೊಸ ಅನುಭವವನ್ನು ನೀಡುವ ಉದ್ದೇಶದಿಂದ ಇಯರ್ 360 ಸಂಸ್ಥೆ, ಘಖಂ ಇಂಡಿಯಾ ಸಹಯೋಗದಲ್ಲಿ, ಬೆಂಗಳೂರಿನ ಜಯನಗರದಲ್ಲಿ ತನ್ನ ಹೊಸ ಬೆಸ್ಟ್‌ಸೌಂಡ್ ಸೆಂಟರ್ ಅನ್ನು ಆರಂಭಿಸಿದೆ. ಜಯನಗರದ ಈಸ್ಟ್ ಎಂಡ್ ಮೇನ್ ರೋಡ್‌ನಲ್ಲಿ ಸ್ಥಾಪಿತವಾಗಿರುವ ಈ ಕೇಂದ್ರವು, ಶ್ರವಣ ತೊಂದರೆ ಹೊಂದಿರುವವರಿಗೆ ಆಧುನಿಕ ತಂತ್ರಜ್ಞಾನ, ವೈಯಕ್ತಿಕ ಸಲಹೆ ಮತ್ತು ಉತ್ತಮ ಕ್ಲಿನಿಕಲ್ ಸೇವೆಗಳನ್ನು ಒಂದೇ ವೇದಿಕೆಯಲ್ಲಿ ಒದಗಿಸುವುದಾಗಿ ಸಂಸ್ಥೆ ತಿಳಿಸಿದೆ.

499/97, ಗ್ರೌಂಡ್ ಫ್ಲೋರ್, ಈಸ್ಟ್ ಎಂಡ್ ಮೇನ್ ರೋಡ್, ಕಾರ್ಪೊರೇಶನ್ ಕಾಲೊನಿ, ಜಯನಗರ, ಬೆಂಗಳೂರು 560041ರಲ್ಲಿ ಆರಂಭಗೊಂಡಿರುವ ಈ ಬೆಸ್ಟ್‌ಸೌಂಡ್ ಸೆಂಟರ್, ಇಯರ್ 360 ಸಂಸ್ಥೆಯ ಪ್ರಮುಖ ರಿಟೇಲ್ ಪರಿಕಲ್ಪನೆಯಾಗಿದೆ.

ಕೇವಲ ವೈದ್ಯಕೀಯ ಪರೀಕ್ಷೆಗೆ ಸೀಮಿತವಾಗದೆ, ಶ್ರವಣ ಆರೈಕೆಯನ್ನು ಹೆಚ್ಚು ವೈಯಕ್ತಿಕ, ಸುಲಭ ಮತ್ತು ಮಾನವೀಯ ಅನುಭವವನ್ನಾಗಿ ರೂಪಿಸುವ ಗುರಿಯೊಂದಿಗೆ ಈ ಕೇಂದ್ರವನ್ನು ವಿನ್ಯಾಸಗೊಳಿಸಲಾಗಿದೆ.

ಸಂಸ್ಥೆಯ ಪ್ರಕಾರ, ಇಂದಿನ ಆರೋಗ್ಯ ಸೇವೆಗಳಲ್ಲಿ ಜನರು ನಿರೀಕ್ಷಿಸುವ ಆರಾಮದಾಯಕ ಅನುಭವ ಮತ್ತು ತಜ್ಞ ವೈದ್ಯಕೀಯ ಸೇವೆಗಳ ನಡುವಿನ ಅಂತರವನ್ನು ಕಡಿಮೆ ಮಾಡಲು ಈ ಕೇಂದ್ರ ಸಹಕಾರಿಯಾಗಲಿದೆ. ಕೇಂದ್ರದ ಒಳಾಂಗಣ ವಿನ್ಯಾಸ, ತಂತ್ರಜ್ಞಾನ ಬಳಕೆ ಹಾಗೂ ಸೇವಾ ಮಾದರಿಯನ್ನು ಜಾಗತಿಕ ಮಟ್ಟದಲ್ಲಿ ಹಲವಾರು ಹಂತದ ಪರೀಕ್ಷೆ ಮತ್ತು ಪ್ರೋಟೋಟೈಪಿಂಗ್ ಮೂಲಕ ರೂಪಿಸಲಾಗಿದೆ.

ಬೆಂಗಳೂರಿನಲ್ಲಿ ಈ ಪರಿಕಲ್ಪನೆಯನ್ನು ಪರಿಚಯಿಸುವ ಮೂಲಕ, ಅಂತಾರಾಷ್ಟ್ರೀಯ ಮಟ್ಟದ ಶ್ರವಣ ಆರೈಕೆ ಗುಣಮಟ್ಟವನ್ನು ಭಾರತದಲ್ಲೂ ಲಭ್ಯವಾಗುವಂತೆ ಮಾಡುವ ಪ್ರಯತ್ನ ನಡೆದಿದೆ.

ಇಯರ್ 360 ಮತ್ತು ಇಂಡಿಯಾ ಪ್ರತಿನಿಧಿಗಳ ಪ್ರಕಾರ, ಭಾರತದಲ್ಲಿ ಶ್ರವಣ ಸಮಸ್ಯೆ ದೊಡ್ಡ ಪ್ರಮಾಣದಲ್ಲಿ ಕಂಡುಬರುತ್ತಿದ್ದರೂ, ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯುವವರ ಸಂಖ್ಯೆ ಇನ್ನೂ ಕಡಿಮೆಯಾಗಿದೆ. ವಿಶ್ವ ಆರೋಗ್ಯ ಸಂಸ್ಥೆಯ ಅಂದಾಜಿನಂತೆ, ಭಾರತದಲ್ಲಿ ಸುಮಾರು 6.3 ಕೋಟಿ ಜನರು ಗಂಭೀರ ಶ್ರವಣ ತೊಂದರೆಯಿಂದ ಬಳಲುತ್ತಿದ್ದಾರೆ. ಜಾಗತಿಕವಾಗಿ 1.5 ಬಿಲಿಯನ್‌ಗಿಂತ ಹೆಚ್ಚು ಜನರು ವಿವಿಧ ಮಟ್ಟದ ಶ್ರವಣ ನಷ್ಟದೊಂದಿಗೆ ಬದುಕುತ್ತಿದ್ದಾರೆ. ಅವರಲ್ಲಿ 430 ಮಿಲಿಯನ್ ಜನರಿಗೆ ಗಂಭೀರ ಶ್ರವಣ ಹಾನಿ ಇದೆ. 2050ರ ವೇಳೆಗೆ ಈ ಸಂಖ್ಯೆ 700 ಮಿಲಿಯನ್‌ಗೆ ಏರಬಹುದು ಎಂದು ಅಂದಾಜಿಸಲಾಗಿದೆ.

# 12ರಂದು ಪದಗ್ರಹಣ ಕಾರ್ಯಕ್ರಮ

ಕೋಲಾರ

ರಾಜ್ಯದ ವಿಜಯಪುರ ಜಿಲ್ಲೆಯ ಬಿಡಿಜಿ ಕಾಲೇಜಿನಲ್ಲಿ ಇದೇ 12ರಂದು ಮಧ್ಯಾಹ್ನ 3 ಗಂಟೆಗೆ ಹಮ್ಮಿಕೊಂಡಿರುವ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಹಾಸಭಾ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪಂಡಿತ್ ನರಹರಿ ಆಚಾರ್ ಮುತ್ತಗಿರ ಅವರು ವಹಿಸುವರು.ಇದೇ ಸಂದರ್ಭದಲ್ಲಿ ಮಹಾಸಭಾದ ಸಮ್ಮೇಳನದ ಕಾರ್ಯಕ್ರಮ, ವಿಜಯಪುರ ಜಿಲ್ಲಾ ಘಟಕ ಮತ್ತು ಯುವ ಘಟಕ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವೂ ನಡೆಯಲಿದ್ದು, ಶ್ರೀಗಳು ಸಾನಿಧ್ಯ ವಹಿಸಲಿದ್ದಾರೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಖ್ಯಾತ ಜ್ಯೋತಿಷಿಗಳು ಹಾಗೂ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಹಾಸಭಾದ ಅಧ್ಯಕ್ಷ ಮಂಜುನಾಥ್ ಭಟ್‌ನೆರವೇರಿಸುವರು.


ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳು ಮತ್ತು ಮಹಾಸಭಾದ ಗೌರವ ಅಧ್ಯಕ್ಷ ಮೋಹನ್ ಕೆ, ಸತೀಶ್, ಎಮ್.ಕೆ. ಕುಲಕರ್ಣಿ ಮತ್ತು ಶ್ರೀಹರಿ ಗೊಳಸಂಗಿ, ಸಂಘದ ಹಿತೈಷಿಗಳಾದ ಮಹೇಶ್ ದೇಶಪಾಂಡೆ , ಮೋಹನ್ ದೇಸಾಯಿ ಮತ್ತು ವಿಜಯಪುರದ ಜಿಲ್ಲಾ ಅಧ್ಯಕ್ಷ ಕೃಷ್ಣ ಜಿ ಕುಲಕರ್ಣಿ ಹಾಗೂ ಇತರ ಗಣ್ಯ ವ್ಯಕ್ತಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

ರಾಜ್ಯದ ಎಲ್ಲಾ ವಿಪ್ರರು, ವಿಜಯಪುರದ ಜನತೆ ಹಾಗೂ ಎಲ್ಲಾ ಪದಾಧಿಕಾರಿಗಳು ಇದರಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಘಟನೆಯ ರಾಜ್ಯ ಗೌರವಾಧ್ಯಕ್ಷರು ಹಾಗೂ ಅಖಿಲ ಕರ್ನಾಟಕ ಮಾಧ್ವ ಬ್ರಾಹ್ಮಣ ಮಹಾಸಭಾ ಅಧ್ಯಕ್ಷರೂ ಆದ ಕೆ.ಮೋಹನ್ ಮನವಿ ಮಾಡಿದ್ದಾರೆ.

# ರಾಜರಾಜೇಶ್ವರಿ ನಗರದಲ್ಲಿ ಹೊಸ ಫರ್ಟಿಲಿಟಿ ಕೇಂದ್ರ ಆರಂಭ

ಬೆಂಗಳೂರು

ಭಾರತದ ಪ್ರಮುಖ ಫರ್ಟಿಲಿಟಿ ಸೇವಾ ಸಂಸ್ಥೆಗಳಲ್ಲೊಂದು ಇಂದಿರಾ ಐವಿಎಫ್, ಇಂದು ಬೆಂಗಳೂರು ನಗರದಲ್ಲಿನ *ಆರ್‌ಆರ್ ನಗರ (ರಾಜರಾಜೇಶ್ವರಿ ನಗರ)*ದಲ್ಲಿ ತನ್ನ ಹೊಸ ಫರ್ಟಿಲಿಟಿ ಕೇಂದ್ರವನ್ನು ಉದ್ಘಾಟಿಸಿರುವುದಾಗಿ ಘೋಷಿಸಿದೆ. ಈ ಹೊಸ ಕೇಂದ್ರದ ಆರಂಭವು ನಗರದಲ್ಲಿ ಸಂಘಟಿತ ಹಾಗೂ ತಂತ್ರಜ್ಞಾನಾಧಾರಿತ ಫರ್ಟಿಲಿಟಿ ಚಿಕಿತ್ಸೆಗೆ ಲಭ್ಯತೆಯನ್ನು ಇನ್ನಷ್ಟು ಬಲಪಡಿಸುವ ದಿಕ್ಕಿನಲ್ಲಿ ಇಂದಿರಾ ಐವಿಎಫ್ ತೆಗೆದುಕೊಂಡ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ. ಈ ಕೇಂದ್ರವು 2ನೇ ಮಹಡಿ, ಕುಶಾಲ್‌ಸ್ ಶೋರೂಮ್ ಮೇಲ್ಭಾಗ, ಜವಾಹರಲಾಲ್ ನೆಹರು ರಸ್ತೆ, ಬಾಲಕೃಷ್ಣ ರಂಗ ಮಂದಿರ ಎದುರು, ಲೇಔಟ್, 3ನೇ ಹಂತ, ರಾಜರಾಜೇಶ್ವರಿ ನಗರ, ಬೆಂಗಳೂರು 560098 ನಲ್ಲಿ ಸ್ಥಿತವಾಗಿದೆ. ಇಲ್ಲಿ ಇಂದಿರಾ ಐವಿಎಫ್‌ನ ಮಾನಕೃತ ಕ್ಲಿನಿಕಲ್ ಪ್ರೋಟೋಕಾಲ್‌ಗಳು ಹಾಗೂ ಅತ್ಯಾಧುನಿಕ ಪ್ರಯೋಗಾಲಯ ವ್ಯವಸ್ಥೆಗಳ ಬೆಂಬಲದೊಂದಿಗೆ



ಸಂಪೂರ್ಣ ಫರ್ಟಿಲಿಟಿ ಮೌಲ್ಯಮಾಪನ ಮತ್ತು ಸಹಾಯಕ ಗರ್ಭಧಾರಣಾ ಚಿಕಿತ್ಸಾ ಸೇವೆಗಳು ಲಭ್ಯವಿರಲಿವೆ. ಉದ್ಘಾಟನಾ ಸಮಾರಂಭದಲ್ಲಿ ಡಾ. ಶ್ಯಾಮ್ ಎನ್. ಗುಪ್ತಾ, ಸೆಂಟರ್ ಹೆಡ್, ಇಂದಿರಾ ಐವಿಎಫ್ ಜೆಪಿ ನಗರ, ಬೆಂಗಳೂರು, ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಡಾ. ಪ್ರಜ್ವಲ್ ಬಿ ಕೆ, ಸಲಹಾ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು ಹಾಗೂ ಸೆಂಟರ್ ಹೆಡ್, ಇಂದಿರಾ ಐವಿಎಫ್ ರಾಜರಾಜೇಶ್ವರಿ ನಗರ, ಅವರೊಂದಿಗೆ ಇಂದಿರಾ ಐವಿಎಫ್‌ನ ಹಿರಿಯ ಪ್ರತಿನಿಧಿಗಳು ಹಾಗೂ ವೈದ್ಯಕೀಯ ವೃತ್ತಿಪರರು ಉಪಸ್ಥಿತರಿದ್ದರು.

ವಿಸ್ತರಣೆಯ ಕುರಿತು ಪ್ರತಿಕ್ರಿಯಿಸಿದ ಶ್ರೀ ನಿತಿಜ್ ಮುರ್ಡಿಯಾ, ಮ್ಯಾನೇಜಿಂಗ್ ಡೈರೆಕ್ಟರ್, ಇಂದಿರಾ ಐವಿಎಫ್ ಹಾಸ್ಪಿಟಲ್ ಲಿಮಿಟೆಡ್ ಅವರು, "ರಾಜರಾಜೇಶ್ವರಿ ನಗರದಲ್ಲಿ ನಮ್ಮ ವಿಸ್ತರಣೆ ಪ್ರಮುಖ ನಗರ ಪ್ರದೇಶಗಳಲ್ಲಿ ಸಂಘಟಿತ ಫರ್ಟಿಲಿಟಿ ಆರೈಕೆಯನ್ನು ಬಲಪಡಿಸುವ ನಮ್ಮ ನಿರಂತರ ಪ್ರಯತ್ನವನ್ನು ತೋರಿಸುತ್ತದೆ. ಇಂದಿರಾ ಐವಿಎಫ್‌ನ ಪ್ರತಿಯೊಂದು ಕೇಂದ್ರವೂ ಏಕೀಕೃತ ಕ್ಲಿನಿಕಲ್ ಪ್ರೋಟೋಕಾಲ್ ಮತ್ತು ಸ್ಥಾಪಿತ ಪ್ರಯೋಗಾಲಯ ವ್ಯವಸ್ಥೆಗಳೊಂದಿಗೆ ಕಾರ್ಯನಿರ್ವಹಿಸುತ್ತಿದ್ದು, ಇದು ನಮ್ಮ ನೆಟ್‌ವರ್ಕ್‌ನ ಎಲ್ಲ ಕೇಂದ್ರಗಳಲ್ಲಿ ರೋಗಿ ಆರೈಕೆಯಲ್ಲಿ ಏಕರೂಪತೆ ಖಚಿತಪಡಿಸುತ್ತದೆ," ಎಂದು ತಿಳಿಸಿದ್ದಾರೆ.

# ಶಾಸಕ ವಿರುದ್ಧದ ಪ್ರತಿಭಟನೆ ರಾಜಕೀಯ ಪ್ರೇರಿತ



ಕೋಲಾರ

"ಬಾಬು ಜಗಜೀವನ್ ರಾಮ್ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮೆರವಣಿಗೆಗೆ ಚಾಲನೆ ನೀಡಿದ ಶಾಸಕ ಕೊತ್ತೂರು ಮಂಜುನಾಥ್ ವಿರುದ್ಧ ವಿನಾಕಾರಣ ಪ್ರತಿಭಟನೆ ನಡೆಸಿರುವುದು ಖಂಡನೀಯ. ಇಂತಹ ಮುಖಂಡರಿಗೆ ಶಾಸಕರನ್ನು ಪ್ರಶ್ನಿಸುವ ಯಾವುದೇ ನೈತಿಕತೆ ಇಲ್ಲ," ಎಂದು ಕಾಂಗ್ರೆಸ್ ಹಾಗೂ ಮಾದಿಗ ಸಮಾಜದ ಯುವ ಮುಖಂಡ ಹಾರೋಹಳ್ಳಿ ರಾಜೇಶ್ ಗುಡುಗಿದ್ದಾರೆ.

ಜಯಂತಿ ಅಂಗವಾಗಿ ನಡೆದ ಸ್ತಬ್ಧಚಿತ್ರ ಹಾಗೂ ಪಲ್ಲಕ್ಕಿ ಮೆರವಣಿಗೆಗೆ ಶಾಸಕ ಮಂಜುನಾಥ್ ಅವರೇ ಚಾಲನೆ ನೀಡಿದ್ದರು. ವಿಧಾನ ಪರಿಷತ್ ಸದಸ್ಯ ಅನಿಲ್ ಕುಮಾರ್ ಅವರೊಂದಿಗೆ ಶಾಸಕರು ದೀರ್ಘಕಾಲ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಬಳಿಕ ಹೊಸಕೋಟೆಯಲ್ಲಿ ಸಿಎಂ ಹಾಗೂ ಉಸ್ತುವಾರಿ ಸಚಿವರ ಪೂರ್ವನಿರ್ಧರಿತ ಕಾರ್ಯಕ್ರಮವಿದ್ದ ಕಾರಣ ಅಲ್ಲಿಗೆ ತೆರಳಿದ್ದಾರೆ ಹೊರತು ಕಾರ್ಯಕ್ರಮವನ್ನು ನಿರ್ಲಕ್ಷಿಸಿಲ್ಲ ಎಂದು ರಾಜೇಶ್ ಸ್ಪಷ್ಟಪಡಿಸಿದರು. "ಕೆಲವು ಮುಖಂಡರು ರಾಜಕೀಯ ಕಾರಣಕ್ಕಾಗಿ ಶಾಸಕರ ವಿರುದ್ಧ ಸುಖಾಸುಮ್ಮನೆ ಆರೋಪ ಮಾಡುತ್ತಿದ್ದಾರೆ. ಜೆಡಿಎಸ್, ಬಿಜೆಪಿಯ ಯಾವೊಬ್ಬ ಜನಪ್ರತಿನಿಧಿಯೂ ಮೆರವಣಿಗೆಯಲ್ಲಾಗಲಿ ಅಥವಾ ವೇದಿಕೆ ಕಾರ್ಯಕ್ರಮದಲ್ಲಾಗಲಿ ಭಾಗವಹಿಸಿಲ್ಲ. ಅವರ ಬಗ್ಗೆ ಪ್ರಶ್ನಿಸದ ಈ ಮುಖಂಡರು, ಕಾರ್ಯಕ್ರಮದಲ್ಲಿ ಭಾಗಿಯಾದವರ ವಿರುದ್ಧವೇ ಆಕ್ರೋಶ ವ್ಯಕ್ತಪಡಿಸುತ್ತಿರುವುದು ಇವರ ದ್ವಂದ್ವ ನೀತಿಯನ್ನು ತೋರಿಸುತ್ತದೆ," ಎಂದು ಕಿಡಿಕಾರಿದರು.

# ರಾಜ್ಯಪಾಲರ ಹಿಂದಿ ಪ್ರೇಮಕ್ಕೆ ಕನ್ನಡಿಗರ ಆಕ್ರೋಶ: ಕರವೇ ಬೃಹತ್ ಪ್ರತಿಭಟನೆ

ಕೋಲಾರ

ಹಿಂದಿ ಸಾಮ್ರಾಜ್ಯಶಾಹಿಗಳ ಪರವಾಗಿ ವರ್ತಿಸುತ್ತ ಕರ್ನಾಟಕ ವಿರೋಧಿ ಧೋರಣೆ ತಳೆದಿರುವ ರಾಜ್ಯಪಾಲ ತಾವರ್ ಚಂದ್ ಗೆಹ್ಲೋಟ್ ಅವರನ್ನು ಕೇಂದ್ರ ಸರ್ಕಾರ ಕೂಡಲೇ ಹಿಂದಕ್ಕೆ ಕರೆಯಿಸಿಕೊಳ್ಳಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಒತ್ತಾಯಿಸಿ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಿತು.

ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆ ನಡೆಸಿ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ಮೇಡಿಹಾಳ ಎಂ.ಕೆ.ರಾಘವೇಂದ್ರ, ರಾಜ್ಯ ಸರ್ಕಾರವು ಎಸ್.ಎಸ್.ಎಲ್.ಸಿ ಪರೀಕ್ಷೆಗಳಲ್ಲಿ ತೃತೀಯ ಭಾಷೆಗೆ ಗ್ರೇಡಿಂಗ್ ವ್ಯವಸ್ಥೆ ಜಾರಿಗೆ ತಂದ ನಿರ್ಧಾರವನ್ನು ಮರುಪರಿಶೀಲಿಸುವಂತೆ ರಾಜ್ಯಪಾಲರು ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿದ್ದಾರೆ. ಈ ಪತ್ರದ ಹಿಂದೆ ಕರ್ನಾಟಕದಲ್ಲಿ ಹಿಂದಿ ಹೇರಿಕೆಯನ್ನು ಶಾಶ್ವತವಾಗಿ ನಡೆಸುವ ಹುನ್ನಾರವಿದೆ. ರಾಜ್ಯಪಾಲರು ತಮ್ಮ ಕಾರ್ಯವ್ಯಾಪ್ತಿಯನ್ನು ಮೀರಿ ಕನ್ನಡಿಗರ ಆಶೋತ್ತರಗಳಿಗೆ ವಿರುದ್ಧವಾಗಿ ನಡೆದುಕೊಂಡಿದ್ದಾರೆ. ಹೀಗಾಗಿ ಅವರು ಕರ್ನಾಟಕದಲ್ಲಿ ಒಂದೇ ಒಂದು ನಿಮಿಷವೂ ರಾಜ್ಯಪಾಲರಾಗಿ ಉಳಿಯುವ ನೈತಿಕತೆಯನ್ನು ಕಳೆದುಕೊಂಡಿದ್ದಾರೆ ಎಂದು



ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯಪಾಲರು ರಾಜ್ಯದ ದಿನನಿತ್ಯದ ಆಡಳಿತದಲ್ಲಿ ಮೂಗು ತೂರಿಸುವುದು ಅತ್ಯಂತ ಆಕ್ಷೇಪಾರ್ಹವಾದ ಬೆಳವಣಿಗೆಯಾಗಿದೆ. ರಾಜ್ಯ ಸರ್ಕಾರವನ್ನು ಕರ್ನಾಟಕದ ಜನತೆ ಆಯ್ಕೆ ಮಾಡಿದ್ದಾರೆ. ನಾಡಿನ ಜನರ ಬೇಕು, ಬೇಡಗಳನ್ನು ರಾಜ್ಯ ಸರ್ಕಾರ ತೀರ್ಮಾನಿಸುತ್ತದೆ. ಹೀಗಿರುವಾಗ ಸರ್ಕಾರದ ಮುಖ್ಯಸ್ಥರಾಗಿ ಸರ್ಕಾರದ ನಾಡಪರ ಕಾಳಜಿಯ ನಿರ್ಧಾರಗಳನ್ನು ಬೆಂಬಲಿಸುವುದು ಅವರ ಕರ್ತವ್ಯವಾಗಿರುತ್ತದೆ. ಆದರೆ ಅವರು ಹಿಂದಿ ಮಾಫಿಯಾ ಪರವಾಗಿ ಕಾರ್ಯನಿರ್ವಹಿಸುತ್ತಿರುವಂತೆ ತೋರುತ್ತದೆ. ಹೀಗಾಗಿ ಅವರನ್ನು ಕೇಂದ್ರ ಸರ್ಕಾರ ಕೂಡಲೇ ವಜಾಗೊಳಿಸಬೇಕೆಂದು ಆಗ್ರಹಿಸಿದರು.

"ಬೆಂಗಳೂರು ಸ್ಥಳೀಯ ಭಾಷೆಗಳ ಸಂರಕ್ಷಣಾ ಸಂಘ" ಎಂಬ ಅನಾಮಧೇಯ ಸಂಘಟನೆಯ ಮನವಿಗೆ ತುರ್ತಾಗಿ ರಾಜ್ಯಪಾಲರು ಪ್ರತಿಕ್ರಿಯಿಸಿ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿರುವುದೇ ಒಂದು ದೊಡ್ಡ ದುಷ್ಟ ಹುನ್ನಾರವಾಗಿದೆ. ಕರ್ನಾಟಕವನ್ನು ವಲಸೆ ಬರುತ್ತಿರುವ ಹಿಂದಿಭಾಷಿಕರಿಗಾಗಿ ಸುರಕ್ಷಿತ ಸ್ವರ್ಗವನ್ನಾಗಿಸುವ ದೂರಗಾಮಿ ಉದ್ದೇಶಗಳು ಹಿಂದಿ ಮಾಫಿಯಾಗೆ ಇದೆ. ಅದರ ಭಾಗವಾಗಿಯೇ ರಾಜ್ಯಪಾಲರು ಈ ಪತ್ರ ಬರೆದಿದ್ದಾರೆ ಎಂಬುದು ಸ್ಪಷ್ಟ. ಕರ್ನಾಟಕದ ಶಿಕ್ಷಣ ನೀತಿಯನ್ನು ರಾಜ್ಯ ಸರ್ಕಾರ ತೀರ್ಮಾನಿಸುತ್ತದೆ. ರಾಜ್ಯ ಸರ್ಕಾರವನ್ನು ಇದಕ್ಕಾಗಿಯೇ ನಾವು ಆಯ್ಕೆ ಮಾಡಿ ಕಳಿಸಿದ್ದೇವೆ. ಇದನ್ನು ಪ್ರಶ್ನಿಸಲು ರಾಜ್ಯಪಾಲರು ಯಾರು? ಅವರಿಗೆ ಸಂವಿಧಾನ ಈ ಅವಕಾಶ ನೀಡಿಲ್ಲ. ಹಿಂದಿ ಮಾಫಿಯಾ ಎಷ್ಟು ಬಲಶಾಲಿಯಾಗಿದೆ ಎಂಬುದು ಇದರಿಂದ ಗೊತ್ತಾಗುತ್ತಿದೆ. ಹುತ್ತದ ಒಳಗೆ ಇನ್ನೆಷ್ಟು ಹಾವುಗಳು ಇವೆಯೋ ಗೊತ್ತಿಲ್ಲ. ಎಲ್ಲವೂ ಹೊರಬರಲಿ ಎಂದು ತಮ್ಮ ಅಸಮಧಾನವನ್ನು ಹೊರ ಹಾಕಿದರು.

ರಾಜ್ಯಪಾಲರ ಈ ಪತ್ರವನ್ನು ರಾಜ್ಯ ಸರ್ಕಾರ ಕಸದ ಬುಟ್ಟಿಗೆ ಎಸೆಯಬೇಕು. ಕನ್ನಡಿಗರ ಹಿತದೃಷ್ಟಿಗೆ ವಿರುದ್ಧವಾಗಿ ಯಾರೇ ಏನೇ ಹೇಳಿದರೂ ಅದನ್ನು ರಾಜ್ಯ ಸರ್ಕಾರ ಪರಿಗಣಿಸಬೇಕಿಲ್ಲ. ನಾವು ಹಿಂದೆ ಬ್ರಿಟಿಷ್ ಸಾಮ್ರಾಜ್ಯಶಾಹಿಯ ವಿರುದ್ಧ ಹೋರಾಡಿದ್ದೆವು. ಈಗ ಹಿಂದಿ ಸಾಮ್ರಾಜ್ಯಶಾಹಿ ನಮ್ಮನ್ನು ಆಳಲು ಯತ್ನಿಸುತ್ತಿದೆ. ಇದಕ್ಕೆ ನಾವು ಅವಕಾಶ ಕೊಡುವುದಿಲ್ಲ. ನಮ್ಮ ಪ್ರಾಣ ಹೋದರೂ ನಮ್ಮ ನೆಲದ ಅಸ್ಮಿತೆಯನ್ನು ಉಳಿಸಿಕೊಳ್ಳುತ್ತೇವೆ.

ತೃತೀಯ ಭಾಷೆ ಗ್ರೇಡಿಂಗ್ ವ್ಯವಸ್ಥೆಯ ನಿರ್ಧಾರ ಸರ್ಕಾರ ಕೈಗೊಂಡಿದೆ. ಇದನ್ನು ಬದಲಿಸುವ ಪ್ರಯತ್ನ ಯಾರೇ ಮಾಡಿದರೂ ರಕ್ತಕ್ರಾಂತಿಯಾಗುತ್ತದೆ. ರಾಜ್ಯಪಾಲ ಗೆಹ್ಲೋಟ್ ಹಿಂದಿ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಅಲ್ಲೆಲ್ಲಾ ತೃತೀಯ ಭಾಷೆಯಾಗಿ ಕನ್ನಡ ಕಲಿಸಲು ತಾಕೀತು ಮಾಡಲಿ. ಅಷ್ಟೇಕೆ ಅವರ ಸ್ವಂತ ರಾಜ್ಯವಾದ ಮಧ್ಯಪ್ರದೇಶದಲ್ಲಿ ಈಗಲೂ ಎರಡೇ ಭಾಷೆಗಳನ್ನು ಕಲಿಸಲಾಗುತ್ತಿದೆ. ಮೂರನೇ ಭಾಷೆಯನ್ನಾಗಿ ಕಡ್ಡಾಯವಾಗಿ ಕನ್ನಡ ಕಲಿಸುವಂತೆ ಅಲ್ಲಿನ ಸರ್ಕಾರದ ಮೇಲೆ ಅವರು ಒತ್ತಡ ಹೇರಲಿ. ಅದು ಸಾಧ್ಯವಿಲ್ಲದಿದ್ದರೆ ಕನ್ನಡಿಗರ ಮೇಲೆ ಯಾಕೆ ಹಿಂದಿ ಹೇರಲು ಯತ್ನಿಸುತ್ತಾರೆ. ಇಂಥ ನಾಡದ್ರೋಹಿ ರಾಜ್ಯಪಾಲ ಕರ್ನಾಟಕದಲ್ಲಿ ಇರಲು ಯೋಗ್ಯರಲ್ಲ. ಅವರನ್ನು ಕೇಂದ್ರ ಸರ್ಕಾರ ಕೂಡಲೇ ಹಿಂದಕ್ಕೆ ಕರೆಯಿಸಿಕೊಳ್ಳಲಿ ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಪ್ರಧಾನ ಕಾರ್ಯದರ್ಶಿ ವಿ.ಮುನಿರಾಜು, ಮಹಿಳಾ ಅಧ್ಯಕ್ಷೆ ಲತಾಬಾಯಿ ಮಾಡಿಕ್, ತಾಲೂಕು ಅಧ್ಯಕ್ಷ ಕೋಲಾರ ಶಶಿಕುಮಾರ್, ಬಂಗಾರಪೇಟೆ ರಾಮ ಪ್ರಸಾದ್, ಮುಳಬಾಗಿಲು ಹುಸೇನ್, ಕೆಜಿಎಫ್ ನಂಜುಂಡಪ್ಪ, ರೈತ ಘಟಕದ ಅಧ್ಯಕ್ಷ ಡಿ.ವಿ.ಮಂಜುನಾಥ್‌ಗೌಡ, ಜಿಲ್ಲಾಧ್ಯಕ್ಷ ಶಂಕರರೆಡ್ಡಿ, ಪದಾಧಿಕಾರಿಗಳಾದ ಗಣೇಶ್, ಸಂತೋಶ್, ಯಾನಾದಹಳ್ಳಿ ಮಂಜುನಾಥ್, ಭಾಗ್ಯಲಕ್ಷ್ಮಿ, ಭಾಗ್ಯ, ನೇತ್ರ ಭಾಗವಹಿಸಿದ್ದರು.

# 23 ರಿಂದ 9ನೇ ಸುತ್ತಿನ ಕಾಲು ಬಾಯಿ ರೋಗದ ಲಸಿಕಾ ಅಭಿಯಾನ

ಕೋಲಾರ



ಇದೇ ಏಪ್ರಿಲ್ 23 ರಿಂದ ಮೇ 22 ರವರೆಗೆ ಜಿಲ್ಲೆಯಲ್ಲಿ 9ನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದರು.

ಅವರು ಇಂದು ತಮ್ಮ ಕಚೇರಿಯಲ್ಲಿ ಕಾಲುಬಾಯಿ ರೋಗ ಲಸಿಕೆ ಕುರಿತು ಹಮ್ಮಿಕೊಳ್ಳಲಾದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಕೋಲಾರ ವತಿಯಿಂದ ಹಮ್ಮಿಕೊಳ್ಳಲಾದ ಈ ಅಭಿಯಾನದಲ್ಲಿ ರೈತರು, ಹಾಲು ಉತ್ಪಾದಕರ ಸಂಘಗಳು ಭಾಗವಹಿಸಿ ತಮ್ಮ ಪಶುಗಳಿಗೆ ಕಾಲುಬಾಯಿ ರೋಗದ ಲಸಿಕೆ ಹಾಕಿಸುವುದರ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಅವರು ಕೋರಿದರು.

ಜಾನುವಾರುಗಳಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ 1962 ಪಶು ಸಹಾಯವಾಣಿಗೆ ಕರೆ ಮಾಡಿ ಉಚಿತ ಆಂಬುಲೆನ್ಸ್ ಸೇವೆ ಪಡೆಯಬೇಕೆಂದರು.

ನಂತರ ಮಾತನಾಡಿದ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರಾದ ಡಾ॥ ಜಿ.ಎಂ. ರಮೇಶ್, ಕಾಲು ಬಾಯಿ ರೋಗವು ಎತ್ತು, ಹೋರಿ, ಹಸು, ಎಮ್ಮೆ ಮತ್ತು ಹಂದಿಗಳಲ್ಲಿ ಉಂಟಾದರೆ ಆರ್ಥಿಕತೆ ನಷ್ಟ ಮಾಡುತ್ತದೆ. ಅಲ್ಲದೆ ರೋಗದಿಂದ ಗುಣಮುಖವಾದ ಜಾನುವಾರುಗಳಲ್ಲಿ ಗರ್ಭ ಕಟ್ಟುವಿಕೆಯಲ್ಲಿ ವಿಳಂಬ ಉಂಟಾಗುತ್ತದೆ ಹಾಗೂ ಹಾಲಿನ ಇಳುವರಿಯಲ್ಲಿ ಇಳಿಮುಖ ಉಂಟಾಗುವ ಸಾಧ್ಯತೆ ಇರುತ್ತದೆ. ರೋಗದಿಂದ ಪೂರ್ಣ ಸುರಕ್ಷತೆಗಾಗಿ 3 ತಿಂಗಳ ಮೇಲ್ಪಟ್ಟ ಎಲ್ಲ ಜಾನುವಾರುಗಳಿಗೆ ಲಸಿಕೆ ಹಾಕುವುದು ಅಗತ್ಯವಿದೆ ಎಂದರು.

ಈ ಕಾಲು ಬಾಯಿ ರೋಗದ ಲಸಿಕೆಯನ್ನು ವರ್ಷಕ್ಕೆ ಎರಡು ಬಾರಿ ಹಾಕಲಾಗುತ್ತದೆ. ಒಂದು ತಿಂಗಳು ನಡೆಯುವ ಈ ಅಭಿಯಾನದಲ್ಲಿ ಲಸಿಕೆದಾರರು ಬೆಳಿಗ್ಗೆ 6 ಗಂಟೆಯಿಂದ 9 ರವರೆಗೆ ಲಸಿಕೆ ಹಾಕಲಿದ್ದಾರೆ. ಸುಮಾರು 370 ಲಸಿಕೆದಾರರಿಗೆ ಈ ಕುರಿತು ತರಬೇತಿ ಸಹ ನೀಡಲಾಗಿದೆ. ಈ ಬಾರಿ ಭಾರತ್ ಪಶುಧನ್ ಆ್ಯಪ್‌ನಲ್ಲಿ ಲಸಿಕೆದಾರರು ಲಸಿಕೆ ಹಾಕಿದ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಅವಕಾಶ ಇರುತ್ತದೆ.

ಈ ಅಭಿಯಾನದಲ್ಲಿ ದಿನಕ್ಕೆ 7500 ಜಾನುವಾರುಗಳಿಗೆ ಲಸಿಕೆ ಹಾಕುವ ಗುರಿ ಹೊಂದಿದ್ದು, ಒಟ್ಟು 2,10,143 ಜಾನುವಾರುಗಳಿಗೆ ಲಸಿಕೆ ಹಾಕಲಾಗುವುದು. ಕಳೆದ ಬಾರಿ ಈ ಕಾಲು ಬಾಯಿ ಲಸಿಕಾ ಕಾರ್ಯಕ್ರಮದಲ್ಲಿ ಶೇ.100 ರಷ್ಟು ಸಾಧನೆ ಮಾಡಲಾಗಿದೆ. ಅಲ್ಲದೆ 1962 ಪಶು ಆ್ಯಂಬುಲೆನ್ಸ್ ಸಹಾಯವಾಣಿ ಕಾರ್ಯನಿರ್ವಹಿಸುತ್ತಿದೆ. ಹೆಚ್ಚಿನ ಮಾಹಿತಿಗೆ ಸಾರ್ವಜನಿಕರು 8277100200 ಅನ್ನು ಸಂಪರ್ಕಿಸಬಹುದೆಂದು ತಿಳಿಸಿದರು.

ಜಿಲ್ಲೆಯಲ್ಲಿ 193694 ದನ ಹಾಗೂ 16449 ಎಮ್ಮೆಗಳಿಗೆ, ಒಟ್ಟು 210143 ಜಾನುವಾರುಗಳಿಗೆ ಉಚಿತ ಲಸಿಕೆ ನೀಡುವ ಗುರಿ ಹೊಂದಿದ್ದೇವೆ, ಜಿಲ್ಲೆಯಲ್ಲಿ ಒಟ್ಟು 69 ಲಸಿಕಾ ಮೇಲ್ವಿಚಾರಕರು ಹಾಗೂ 358 ಲಸಿಕಾದಾರರನ್ನು ಒಳಗೊಂಡ ತಂಡಗಳನ್ನು ರಚಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ 9 ನೇ ಸುತ್ತಿನ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮದ ಕರಪತ್ರ ಮತ್ತು ಭಿತ್ತಿಪತ್ರ ಬಿಡುಗಡೆ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಪ್ರವೀಣ್.ಪಿ ಬಾಗೇವಾಡಿ, ಕೋಲಾರ ಜಿಲ್ಲಾ ಹಾಲು ಒಕ್ಕೂಟ ಮಂಡಳಿಯ ವ್ಯವಸ್ಥಾಪಕರಾದ ಡಾ. ಚೇತನ್, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ದಾಖಲಾತಿ ಹೆಚ್ಚಳಕ್ಕೆ ಶ್ರಮಿಸಿದ್ದಕ್ಕಾಗಿ ಶಾಲಾಭಿವೃದ್ಧಿ ಸಮಿತಿಯಿಂದ ಅಭಿನಂದನೆ



ಕೋಲಾರ

ಸರ್ಕಾರಿ ಶಾಲೆ ಉಳಿಸುವ ಸದುದ್ದೇಶದಿಂದ ಮಕ್ಕಳ ದಾಖಲಾತಿಗಾಗಿ ಶಿಕ್ಷಕಿ ರೇಖಾ ಅವಿರತವಾಗಿ ಶ್ರಮ ಪಟ್ಟಿದ್ದು, ಅವರ ಸೇವೆಯನ್ನು ಗ್ರಾಮ ಸದಾ ಸ್ಮರಿಸುತ್ತದೆ ಎಂದು ರಾಮಸಂದ್ರ ಗ್ರಾಮದ ಮುಖಂಡ ಪ್ರತಾಪ್ ತಿಳಿಸಿದರು.

ತಾಲೂಕಿನ ಹುತ್ತೂರು ಹೋಬಳಿಯ ರಾಮಸಂದ್ರ ಗ್ರಾಮದ ಸರ್ಕಾರಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಎಸ್ ರೇಖಾ ಅವರು ವಯೋ ನಿವೃತ್ತಿಯಾದ ಹಿನ್ನಲೆಯಲ್ಲಿ ಅವರನ್ನು ಬೀಳ್ಕೊಟ್ಟು ಅವರು ಮಾತನಾಡುತ್ತಿದ್ದರು.

ತಾಲ್ಲೂಕಿನ ವಿವಿಧೆಡೆ ಹೊಲ್ಲಂಬಳ್ಳಿ, ಅಗ್ನಿಹಳ್ಳಿ, ಕುರುಬರಹಳ್ಳಿ, ರಾಮಸಂದ್ರ ಗ್ರಾಮ ಸೇರಿದಂತೆ ಸುಮಾರು 31 ವರ್ಷಗಳ ಸುಧೀರ್ಘ ಕಾಲ ಶಿಕ್ಷಕಿಯಾಗಿ ಸೇವೆ ಸಲ್ಲಿಸಿ ಇದೀಗ ನಿವೃತ್ತಿ ಹೊಂದಿರುವ ಅವರು ಕೆಲಸ ಮಾಡಿದ ಕಡೆಗಳಲ್ಲಿ ತಮ್ಮ ಬದ್ದತೆಯ ಸೇವೆಯಿಂದಾಗಿ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ ಎಂದರು.

ರಾಮಸಂದ್ರ ಗ್ರಾಮದ ಸರ್ಕಾರಿ ಶಾಲೆಯಲ್ಲಿ 10 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದು, ಸರ್ಕಾರಿ ಶಾಲೆಗಳನ್ನು ಉಳಿಸುವುದೇ ಸವಾಲಾಗಿರುವ ಸಂದರ್ಭದಲ್ಲಿ ಮಕ್ಕಳ ದಾಖಲಾತಿ ಹೆಚ್ಚಳಕ್ಕೆ ತುಂಬಾ ಶ್ರಮ ಪಟ್ಟಿದ್ದಾರೆ ಎಂದು ಅಭಿನಂದಿಸಿದರು.

ಹಳೆ ವಿದ್ಯಾರ್ಥಿ ಪ್ರತಾಪ್ ಮಾತನಾಡಿ, 31 ವರ್ಷಗಳ ಕಾಲ ನಿಸ್ವಾರ್ಥ ಸೇವೆ ಸಲ್ಲಿಸಿದ್ದು, ರಾಮಸಂದ್ರ ಗ್ರಾಮದಲ್ಲಿಯೇ 10ವರ್ಷಗಳಿಂದ ಕೆಲಸ ಮಾಡಿದ್ದಾರೆ. ಮಕ್ಕಳ ದಾಖಲಾತಿ ಹೆಚ್ಚಿಸುವಲ್ಲಿ ತುಂಬಾ ಶ್ರಮಪಟ್ಟಿದ್ದಾರೆ. ಸೌಮ್ಯ ಸ್ವಭಾವದವರಾಗಿದ್ದು, ಮಕ್ಕಳಿಗೆ ಉತ್ತಮವಾದ ಗುಣಮಟ್ಟದ ಶಿಕ್ಷಣವನ್ನು ನೀಡಿದ್ದಾರೆ. ಸಮಯ ಪ್ರಜ್ಞೆಯನ್ನು ಇವರನ್ನು ನೋಡಿ ನಾವು ಕಲಿಯಬೇಕಿದೆ. ಮಕ್ಕಳ ಕಲಿಕೆಗಾಗಿ ತುಂಬಾ ಶ್ರಮ ಪಟ್ಟಿದ್ದಾರೆ. ಈಗ ನಿವೃತ್ತಿಯಾಗುತ್ತಿರುವುದು ತುಂಬಾ ಬೇಸರ ಆಗುತ್ತಿದೆ ಎಂದರು.

ನಿವೃತ್ತ ಶಿಕ್ಷಕಿ ಎಸ್.ರೇಖಾ ಮಾತನಾಡಿ, ನಾವು ಹೇಗೆ ಮಕ್ಕಳ ಜೊತೆ ಇರ್ತೇವೋ ಹಾಗೇ ನಮಗೆ ಊರು ಸಹ ಸಹಕಾರ ಕೊಡುತ್ತೆ. ನನಗೆ ನಿವೃತ್ತಿಯಾಗುತ್ತಿರುವುದರಿಂದ ದುಃಖ ಆಗುತ್ತಿಲ್ಲ. ಬದಲಾಗಿ ಆತ್ಮತೃಪ್ತಿ ಇದೆ. ನನಗೆ ದಾರಿ ತೋರಿಸಿಕೊಟ್ಟ ಗುರುಗಳ ಮಾರ್ಗದರ್ಶನದಲ್ಲಿ ನಾನು ನಡೆದಿದ್ದೇನೆ. ನಮ್ಮ ಶಾಲೆಯ ಮಕ್ಕಳು ಸಹ ಒಳ್ಳೆ ದಾರಿಯಲ್ಲಿ ನಡೆದು ಒಳ್ಳೆ ಒಳ್ಳೆ ಉದ್ಯೋಗಗಳನ್ನು ಪಡೆಯಲಿ ಎಂದು ಹಾರೈಸಿದರು. ಇದೇ ವೇಳೆ ಶಾಲಾ ಮಕ್ಕಳಿಗೆ ಬ್ಯಾಗ್ ಮತ್ತು ವಾಟರ್ ಬಾಟೆಲ್‌ಗಳನ್ನು ಕೊಡುಗೆಯಾಗಿ ವಿತರಿಸಿದರು.

ಶಾಲಾ ಮುಖ್ಯ ಶಿಕ್ಷಕರು, ಸಿಬ್ಬಂದಿ ವರ್ಗ, ಎಸ್‌ಡಿಎಂಸಿ ಅಧ್ಯಕ್ಷರು, ಗ್ರಾಮ ಪಂಚಾಯತಿ ಸದಸ್ಯರು ಹಾಗೂ ವಿದ್ಯಾರ್ಥಿಗಳ ಸಹಯೋಗದೊಂದಿಗೆ ಶಿಕ್ಷಕಿ ರೇಖಾ ಅವರಿಗೆ ಸನ್ಮಾನ ಮಾಡಿ ಬೀಳ್ಕೊಡುಗೆ ಮಾಡಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸದಸ್ಯರಾದ ರವೀಂದ್ರ, ವನಜಾಕ್ಷಿ, ಎಸ್‌ಡಿಎಂಸಿ ಅಧ್ಯಕ್ಷರು ಶಿವಪ್ಪ, ಉಪಾಧ್ಯಕ್ಷ ವೆಂಕಟೇಶ್, ಪ್ರವೀಣ್, ಮಂಜುನಾಥ್, ಯುವರಾಜ್, ಹಿರಿಯರಾದ ನಾರಾಯಣಶೆಟ್ಟಿ, ಶಿವಣ್ಣ, ಮುಖ್ಯ ಶಿಕ್ಷಕರು ಶ್ರೀನಿವಾಸ್, ಪಿಡಿಓ ಹುತ್ತೂರು ಗ್ರಾಮ ಪಂಚಾಯತಿ ಪಿಡಿಓ ಲಕ್ಷ್ಮೀ ಸೇರಿದಂತೆ ರಾಮಸಂದ್ರ ಗ್ರಾಮಸ್ಥರು ಭಾಗಿಯಾಗಿದ್ದರು.

# ಅಂಬೇಡ್ಕರ್ ಜಯಂತಿ ಪ್ರಯುಕ್ತ 15 ಸಾವಿರ ಹೆಲ್ಮೆಟ್ ವಿತರಣೆ



ಬಾಗೇಪಲ್ಲಿ

"ರಸ್ತೆ ಸುರಕ್ಷತೆ ಹಾಗೂ ಜೀವ ರಕ್ಷಣೆಯ ಉದ್ದೇಶದಿಂದ ಏಪ್ರಿಲ್ 14ರಂದು ನಡೆಯಲಿರುವ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಹರಿನಾಥರೆಡ್ಡಿ ಚಾರಿಟಬಲ್ ಟ್ರಸ್ಟ್ ವತಿಯಿಂದ 15 ಸಾವಿರ ಉಚಿತ ಹೆಲ್ಮೆಟ್‌ಗಳನ್ನು ವಿತರಿಸಲಾಗುವುದು," ಎಂದು ಎನ್‌ಡಿಎ ಮುಖಂಡ ಹಾಗೂ ಜಿಪಂ ಮಾಜಿ ಸದಸ್ಯ ಹರಿನಾಥರೆಡ್ಡಿ ತಿಳಿಸಿದರು.

ಬುಧವಾರ ಪಟ್ಟಣದ ಹೊರವಲಯದ ಫಾರಂಹೌಸ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಹಂತ ಹಂತವಾಗಿ 42 ಸಾವಿರ ಹೆಲ್ಮೆಟ್ ವಿತರಣೆ: ಈಗಾಗಲೇ ಗುಡಿಬಂಡೆ, ಚೇಳೂರು ಹಾಗೂ ಬಾಗೇಪಲ್ಲಿ ತಾಲೂಕುಗಳ 28 ಗ್ರಾಪಂ ವ್ಯಾಪ್ತಿಯಲ್ಲಿ 42 ಸಾವಿರ ಹೆಲ್ಮೆಟ್‌ಗಳನ್ನು ವಿತರಿಸಲಾಗಿದೆ. ಏಪ್ರಿಲ್ 14ರಂದು ನಡೆಯಲಿರುವ ಕಾರ್ಯಕ್ರಮದಲ್ಲಿ ಕಸಬಾ ಹೋಬಳಿಯ ನಾಲ್ಕು ಗ್ರಾಪಂ ವ್ಯಾಪ್ತಿಯ (ದೇವರಗುಡಿಪಲ್ಲಿ, ಪರಗೋಡು, ಘಂಟಂವಾರಿಪಲ್ಲಿ, ಯಲ್ಲಂಪಲ್ಲಿ) ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ನೀಡಲಾಗುವುದು. ಈ ಕಾರ್ಯಕ್ರಮದಲ್ಲಿ ಸಂಸದ ಡಾ. ಕೆ. ಸುಧಾಕರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಜೀವ ರಕ್ಷಣೆಗೆ ಆದ್ಯತೆ: "ಹೆಲ್ಮೆಟ್ ಧರಿಸದ ಕಾರಣ ಅನೇಕರು ಅಪಘಾತದಲ್ಲಿ ಮೃತಪಟ್ಟು ಕುಟುಂಬಗಳು ಬೀದಿಪಾಲಾಗಿವೆ. ರಸ್ತೆ ಅಪಘಾತಗಳಲ್ಲಿ ಸಾವಿನಿಂದ ತಪ್ಪಿಸಿಕೊಳ್ಳಲು ಪ್ರತಿಯೊಬ್ಬ ಸವಾರರೂ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂಬುದು ನಮ್ಮ ಟ್ರಸ್ಟ್‌ನ ಆಶಯ," ಎಂದು ಅವರು ಕರೆ ನೀಡಿದರು.

ಸ್ಥಳಾವಕಾಶದ ಬಗ್ಗೆ ಅಧಿಕಾರಿಗಳ ಅನುಮತಿ: ಕಾರ್ಯಕ್ರಮವನ್ನು ತಾಲೂಕು ಕ್ರೀಡಾಂಗಣದಲ್ಲಿ ನಡೆಸಲು ಉದ್ದೇಶಿಸಲಾಗಿದ್ದು, ಅಧಿಕಾರಿಗಳ ಅನುಮತಿಗೆ ಕಾಯಲಾಗುತ್ತಿದೆ. ಒಂದು ವೇಳೆ ರಾಜಕೀಯ ಒತ್ತಡಗಳಿಂದಾಗಿ ಅನುಮತಿ ನಿರಾಕರಿಸಲ್ಪಟ್ಟರೆ, ಪರ್ಯಾಯ ಸ್ಥಳದಲ್ಲಿ ಸಭೆ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು. ಅಂದು ಸಭೆಗೆ ಬರುವ ಸುಮಾರು 20 ಸಾವಿರ ಜನರಿಗೆ ಉಚಿತ ಊಟದ ವ್ಯವಸ್ಥೆ ಮಾಡಲಾಗುವುದು ಎಂದರು.

ಈ ಸಭೆಯಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷ ವಿ. ವೆಂಕಟಶಿವಾರೆಡ್ಡಿ, ಜೆ.ಪಿ. ಚಂದ್ರಶೇಖರರೆಡ್ಡಿ, ನಿವೃತ್ತ ಪ್ರಾಂಶುಪಾಲ ಕೆ.ಟಿ. ವೀರಾಂಜನೇಯ, ಪುರಸಭೆ ಮಾಜಿ ಸದಸ್ಯ ಆ.ನಾ. ಮೂರ್ತಿ, ಮುಖಂಡರಾದ ಎಸ್. ಆರ್. ಲಕ್ಷ್ಮೀನಾರಾಯಣ, ಗೋಪಾಲಕೃಷ್ಣ, ಶಿವಪ್ಪ, ಶ್ರೀನಿವಾಸರೆಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಾರ್ವಜನಿಕ ಸ್ಥಳದಲ್ಲಿ ಕಸ ಸುರಿದರೆ, 500 ದಂಡದ ಎಚ್ಚರಿಕೆ



ವಿಜಯಪುರ

ಪಟ್ಟಣದ ಸ್ವಚ್ಛತೆ ಕಾಪಾಡುವ ಉದ್ದೇಶದಿಂದ, ಮನೆಗಳಲ್ಲಿ ಉತ್ಪತ್ತಿಯಾಗುವ ಕಸವನ್ನು ರಸ್ತೆಯಲ್ಲಿ ತಂದು ಹಾಕುವುದರ ಬದಲಿಗೆ, ಪುರಸಭೆಯಿಂದ ಬರುವ ಕಸಸಂಗ್ರಹಣಾ ವಾಹನಗಳಿಗೆ ನೀಡುವಂತೆ ಪುರಸಭೆ ಆರೋಗ್ಯ ನಿರೀಕ್ಷಕಿ ಲಾವಣ್ಯ ಹೇಳಿದರು.

ಪಟ್ಟಣದ ವಿವಿಧ ವಾರ್ಡುಗಳಲ್ಲಿ, ಸ್ವಚ್ಛತಾ ಅಭಿಯಾನ ಯೋಜನೆಯಡಿಯಲ್ಲಿ, ಸಾರ್ವಜನಿಕರು ಕಸ ಸುರಿಯುತ್ತಿದ್ದ ಜಾಗಗಳನ್ನು ಗುರುತಿಸಿ, ಸ್ವಚ್ಚಗೊಳಿಸಿದ ನಂತರ ರಂಗೋಲಿ ಬಿಡಿಸಿ, ಸಾರ್ವಜನಿಕರಿಗೆ ಸ್ವಚ್ಚತೆಯ ಅರಿವು ಮೂಡಿಸಿದರು.

ಮನೆಗಳಲ್ಲಿ ಉತ್ಪತ್ತಿಯಾಗುವಂತಹ ಕಸವನ್ನು ತಂದು, ರಸ್ತೆಗಳ ಬದಿಯಲ್ಲಿ ಸುರಿಯುವುದು, ಹಾಗೂ ಚರಂಡಿಗಳಿಗೆ ಸುರಿಯುವುದರಿಂದ ದುರ್ವಾಸನೆಯ ಜೊತೆಗೆ, ಸುತ್ತಮುತ್ತಲಿನ ನೈರ್ಮಲ್ಯ ಹಾಳಾಗುವುದರ ಜೊತೆಗೆ, ಜನರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಯಾರಾದರೂ ಕಸವನ್ನು ನಿಯಮ ಬಾಹಿರವಾಗಿ ಹಾಕಿದರೆ, ಕನಿಷ್ಟ 500 ರೂಪಾಯಿ ದಂಡ ವಿಧಿಸಲಾಗುತ್ತದೆ ಎಂದರು.

ಪುರಸಭೆಯ ಸಿಬ್ಬಂದಿಯಾದ ಪೃಥ್ವಿ, ಸಹನ, ಕಮ್ಯೂನ್ಯೂಟಿ ಸಂಘಟಕ ಸಂಪನ್ಮೂಲ ವ್ಯಕ್ತಿಗಳು ಶೈಲಾ, ಹಾಗೂ ಸಾರ್ವಜನಿಕರು ಹಾಜರಿದ್ದರು.

# ರಾಜ್ಯಪಾಲರ 'ಕನ್ನಡ ವಿರೋಧಿ' ನೀತಿಗೆ ಕರವೇ ಆಕ್ರೋಶ



ತುಮಕೂರು

ರಾಜ್ಯದಲ್ಲಿ ದ್ವಿಭಾಷಾ ನೀತಿ ಜಾರಿಗೆ ತರುವ ಸರ್ಕಾರದ ನಿರ್ಧಾರಕ್ಕೆ ಅಡ್ಡಿಪಡಿಸುತ್ತಿರುವ ರಾಜ್ಯಪಾಲರ ಕ್ರಮವನ್ನು ಖಂಡಿಸಿ, ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣಗೌಡ ಬಣ) ಜಿಲ್ಲಾ ಘಟಕದ ವತಿಯಿಂದ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ಈ ಕೂಡಲೇ ರಾಜ್ಯಪಾಲ ಥಾವರ್ ಚಂದ್ ಗೆಹಲೋಟ್ ಅವರನ್ನು ವಾಪಸ್ ಕರೆಯಿಸಿಕೊಳ್ಳಬೇಕೆಂದು ಆಗ್ರಹಿಸಿ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರವೇ ಜಿಲ್ಲಾಧ್ಯಕ್ಷ ಅರುಣ್ ಕೃಷ್ಣಯ್ಯ ಮಾತನಾಡಿ, "ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆ. ಸರ್ಕಾರವು ಹಿಂದಿ ಪರೀಕ್ಷೆಗೆ ಅಂಕಗಳ ಬದಲಾಗಿ ಗ್ರೇಡ್ ನೀಡುವ ಪದ್ಧತಿ ಜಾರಿಗೆ ತರುವ ಮೂಲಕ ದ್ವಿಭಾಷಾ ನೀತಿಗೆ ಒತ್ತು ನೀಡಿದೆ. ಇದು ಸ್ವಾಗತಾರ್ಹ ಕ್ರಮ. ಆದರೆ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದು ನಿರ್ಧಾರ ಮರುಪರಿಶೀಲಿಸುವಂತೆ ಸೂಚಿಸಿರುವ ರಾಜ್ಯಪಾಲರ ನಡವಳಿಕೆ ಕನ್ನಡ ವಿರೋಧಿಯಾಗಿದೆ," ಎಂದು ಕಿಡಿಕಾರಿದರು.

"ಹಿಂದಿಯನ್ನು ಒಂದು ಭಾಷೆಯಾಗಿ ಕಲಿಯಲು ನಮ್ಮ ಅಭ್ಯಂತರವಿಲ್ಲ, ಆದರೆ ಬಲವಂತವಾಗಿ ಹೇರುವುದನ್ನು ಸಹಿಸುವುದಿಲ್ಲ. ರಾಜ್ಯಪಾಲರು ಪದೇ ಪದೇ ಕನ್ನಡ ಭಾಷೆಯ ವಿಷಯದಲ್ಲಿ ಹಸ್ತಕ್ಷೇಪ ಮಾಡುತ್ತಿದ್ದಾರೆ. ರಾಜ್ಯಪಾಲರಿಗೆ ಹಿಂದಿ ಮೇಲೆ ಅಷ್ಟೊಂದು ಒಲವಿದ್ದರೆ ಉತ್ತರ ಭಾರತದ ರಾಜ್ಯಗಳಿಗೆ ಹೋಗಲಿ. ಕರ್ನಾಟಕದಲ್ಲಿ ಇಂತಹ ನೀತಿ ಮುಂದುವರಿದರೆ ರಾಜ್ಯಾದ್ಯಂತ ಮತ್ತೊಂದು 'ಗೋಕಾಕ್ ಚಳವಳಿ' ಮಾದರಿಯ ಹೋರಾಟ ಅನಿವಾರ್ಯವಾಗಲಿದೆ," ಎಂದು ಅವರು ಎಚ್ಚರಿಸಿದರು.

ನೆರೆಯ ತಮಿಳುನಾಡು ಮತ್ತು ಮಹಾರಾಷ್ಟ್ರಗಳಲ್ಲಿ ದ್ವಿಭಾಷಾ ನೀತಿ ಯಶಸ್ವಿಯಾಗಿ ಜಾರಿಯಲ್ಲಿದೆ. ಕರ್ನಾಟಕದಲ್ಲೂ ಅದೇ ಹಾದಿಯಲ್ಲಿ ಸಾಗುತ್ತಿರುವಾಗ ರಾಜ್ಯಪಾಲರು ಅಡ್ಡಿಪಡಿಸುತ್ತಿರುವುದು ದುರದೃಷ್ಟಕರ ಎಂದು ಹೋರಾಟಗಾರರು ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಪ್ರತಿಭಟನಾಕಾರರು ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮನವಿ ಪತ್ರ ಸಲ್ಲಿಸಿದರು.

ಕರವೇ ಪ್ರಧಾನ ಕಾರ್ಯದರ್ಶಿ ಅಂಬರೀಷ್, ಉಪಾಧ್ಯಕ್ಷರಾದ ಆದೇಶ್, ರಾಜೇಶ್, ಮಹಿಳಾ ಘಟಕದ ರಾಧಾ ಎಲ್. ಗೌಡ, ತಾಲೂಕು ಅಧ್ಯಕ್ಷರಾದ ನಟರಾಜು (ಕೊರಟಗೆರೆ), ಶಶಿಕುಮಾರ್, ಯುವ ಘಟಕದ ಪವನ್, ಅರುಣ್ ಹಾಗೂ ಮುಖಂಡರಾದ ಮಾಲಾ, ಶಕುಂತಲ, ಹೇಮ, ರೇಖಾ, ಪಾರ್ವತಮ್ಮ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಬಂಗಾರಪೇಟೆ ಬೋವಿ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ



ಬಂಗಾರಪೇಟೆ

"ಒಳ ಮೀಸಲಾತಿ ಜಾರಿಯಿಂದ ಬೋವಿ ಸಮುದಾಯದ ಮುಂದಿನ ಪೀಳಿಗೆಯ ಭವಿಷ್ಯಕ್ಕೆ ಕುತ್ತು ಬರಲಿದ್ದು, ಇದನ್ನು ತಡೆಯಲು ಸಮಾಜವು ಭೇದಾಭಿಪ್ರಾಯ ಮರೆತು ರಾಜ್ಯಮಟ್ಟದ ಹೋರಾಟಕ್ಕೆ ಸಜ್ಜಾಗಬೇಕು," ಎಂದು ಮಾಜಿ ಶಾಸಕ ಹಾಗೂ ಸಮುದಾಯದ ಮುಖಂಡ ಎಂ. ನಾರಾಯಣಸ್ವಾಮಿ ಕರೆ ನೀಡಿದರು.

ನಗರದ ಸಂಜಯ ಗಾಂಧಿ ನಗರದಲ್ಲಿ ಆಯೋಜಿಸಲಾಗಿದ್ದ ಬೋವಿ ಸಮುದಾಯದ ಪ್ರಮುಖರ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ಸಮುದಾಯದಲ್ಲಿ ಉಂಟಾಗುತ್ತಿರುವ ಗುಂಪುಗಾರಿಕೆ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, "ವೈಯಕ್ತಿಕ ಲಾಭಕ್ಕಾಗಿ ಪ್ರತ್ಯೇಕ ತಂಡಗಳನ್ನು ರಚಿಸುವುದು ಸಮಾಜದ ಹಿತಾಸಕ್ತಿಗೆ ಮಾರಕ. ಇಂತಹ ಚಟುವಟಿಕೆಗಳು ಸರ್ಕಾರದ ಮುಂದೆ ನಮ್ಮ ಶಕ್ತಿಯನ್ನು ದುರ್ಬಲಗೊಳಿಸುತ್ತವೆ. ಗುಂಪುಗಾರಿಕೆ ಬಿಟ್ಟು ಒಂದೇ ವೇದಿಕೆಯಡಿ ಹೋರಾಡಿದಾಗ ಮಾತ್ರ ನ್ಯಾಯ ಸಿಗಲು ಸಾಧ್ಯ," ಎಂದರು. ಸದಾಶಿವ ಆಯೋಗದ ಶಿಫಾರಸುಗಳ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಎಂ. ನಾರಾಯಣಸ್ವಾಮಿ, "ಈ ಶಿಫಾರಸುಗಳು ಜಾರಿಯಾದಲ್ಲಿ ನಮ್ಮ ಯುವಕರಿಗೆ ಶಿಕ್ಷಣ ಮತ್ತು ಉದ್ಯೋಗದ ಅವಕಾಶಗಳು ಕೈತಪ್ಪಲಿವೆ. ಈಗಾಗಲೇ ಹಿಂದುಳಿದಿರುವ ನಮ್ಮ ಸಮಾಜಕ್ಕೆ ಇದರಿಂದ ಮತ್ತಷ್ಟು ಅನ್ಯಾಯವಾಗಲಿದೆ. ಈ ನಿಟ್ಟಿನಲ್ಲಿ ಸರ್ಕಾರವು ಸಮುದಾಯದ ಅಭಿಪ್ರಾಯವನ್ನು ಗಣನೆಗೆ ತೆಗೆದುಕೊಳ್ಳಬೇಕು," ಎಂದು ಒತ್ತಾಯಿಸಿದರು. ಇದೇ ಸಂದರ್ಭದಲ್ಲಿ ಸಂಘಟನೆಯನ್ನು ಬಲಪಡಿಸಲು ಬಂಗಾರಪೇಟೆ ತಾಲ್ಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ಗೌರವಾಧ್ಯಕ್ಷರು: ಕೃಷ್ಣಪ್ಪ ಗಾಜಗ

ಅಧ್ಯಕ್ಷರು: ಕೆ.ಜಿ. ಮಂಜುನಾಥ್ ಕಣಿಂಬೆಲೆ

ಹಿರಿಯ ಉಪಾಧ್ಯಕ್ಷರು: ರಾಮಕೃಷ್ಣಪ್ಪ ಚಿಕ್ಕಹೊಸಹಳ್ಳಿ

ಪ್ರಧಾನ ಕಾರ್ಯದರ್ಶಿ: ಮಂಜುನಾಥ್ ಅಮರಾವತಿ

ಸಭೆಯಲ್ಲಿ ಬೋವಿ ಸಮುದಾಯದ ಕೋಲಾರ ಜಿಲ್ಲಾ ಅಧ್ಯಕ್ಷ ಸಿ.ವಿ. ಗೋಪಾಲ್, ಮುಖಂಡರಾದ ಶ್ರೀಕೃಷ್ಣ, ಕೃಷ್ಣಪ್ಪ, ಆದಿನಾರಾಯಣ ಕುಟ್ಟಿ, ಎಸ್. ನಾರಾಯಣ ಸೇರಿದಂತೆ ಮಹಿಳಾ ಪ್ರತಿನಿಧಿಗಳು ಹಾಗೂ ಯುವ ಮುಖಂಡರು ಉಪಸ್ಥಿತರಿದ್ದರು.

# 'ಗ್ಯಾಸ್ ಸರಬರಾಜಿನಲ್ಲಿ ಕೇಂದ್ರ ಸರ್ಕಾರ ಸಂಪೂರ್ಣ ವಿಫಲ'



ಬೂದಿಕೋಟೆ

"ದೇಶದ ಜನತೆಗೆ ಸಮರ್ಪಕವಾಗಿ ಗ್ಯಾಸ್ ಸರಬರಾಜು ಮಾಡುವಲ್ಲಿ ಕೇಂದ್ರದ ಬಿಜೆಪಿ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದ್ದು, ಸಾರ್ವಜನಿಕರು ಹಾಗೂ ಶ್ರಮಿಕ ವರ್ಗ ಬೀದಿಗೆ ಬರುವಂತಾಗಿದೆ," ಎಂದು ಶಾಸಕ ಎಸ್. ಎನ್. ನಾರಾಯಣಸ್ವಾಮಿ ಬೇಸರ ವ್ಯಕ್ತಪಡಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ಯಾಸ್ ಅಭಾವ ಮತ್ತು ಬೆಲೆ ಏರಿಕೆ ವಿಚಾರವಾಗಿ ಕೇಂದ್ರ ಸರ್ಕಾರದ ವೈಫಲ್ಯಗಳನ್ನು ಕಟುವಾಗಿ ಟೀಕಿಸಿದರು.

"ಉಚಿತ ಗ್ಯಾಸ್ ನೀಡುತ್ತೇವೆ ಎಂದು ಸೌದೆ ಒಲೆಗಳನ್ನು ತೆಗೆಸಿದ ಮೋದಿ ಸರ್ಕಾರ, ಈಗ ಗ್ಯಾಸ್ ನೀಡದೆ ಜನರನ್ನು ವಂಚಿಸುತ್ತಿದೆ. ಸಿಎನ್‌ಜಿ, ಗೃಹಬಳಕೆ ಹಾಗೂ ಕಮರ್ಷಿಯಲ್ ಗ್ಯಾಸ್ ಸಿಗದೆ ಹೋಟೆಲ್ ಉದ್ಯಮ ನಲುಗುತ್ತಿದೆ. ಗ್ಯಾಸ್ ಕೊರತೆಯಿಂದಾಗಿ ನನ್ನ ಮಾಲೀಕತ್ವದ ಹೋಟೆಲನ್ನೂ ಬಂದ್ ಮಾಡಬೇಕಾದ ಪರಿಸ್ಥಿತಿ ಬಂದಿದೆ ಎಂದರೆ ಸಾಮಾನ್ಯ ಉದ್ಯಮಿಗಳ ಕಥೆ ಏನು?" ಎಂದು ಅವರು ಪ್ರಶ್ನಿಸಿದರು.

ಎಲ್‌ಪಿಜಿ ಗ್ಯಾಸ್ ಸಿಗದೆ ಆಟೋ ಚಾಲಕರು ಒಂದು ಹೊತ್ತಿನ ಊಟಕ್ಕೂ ಪರದಾಡುತ್ತಿದ್ದಾರೆ. ಅಗತ್ಯ ವಸ್ತುಗಳ ದಾಸ್ತಾನು ಮಾಡುವ ಜವಾಬ್ದಾರಿಯನ್ನು ನಿರ್ವಹಿಸದ ಕೇಂದ್ರ ಸರ್ಕಾರ, ಜನಸಾಮಾನ್ಯರ ಮೇಲೆ ಹೊರೆ ಹೇರುತ್ತಿದೆ ಎಂದು ಅವರು ಆಪಾದಿಸಿದರು.

ದೇಶದ ಆರ್ಥಿಕ ಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಶಾಸಕರು, ಪ್ರಮುಖಾಂಶಗಳನ್ನು ಮುಂದಿಟ್ಟರು.

ಹೆಚ್ಚುತ್ತಿರುವ ಸಾಲ: ಮೋದಿ ಅಧಿಕಾರಕ್ಕೆ ಬರುವ ಮುನ್ನ 54 ಲಕ್ಷ ಕೋಟಿ ರೂ. ಇದ್ದ ಸಾಲ, ಇಂದು 218 ಲಕ್ಷ ಕೋಟಿ ರೂ.ಗೆ ಏರಿಕೆಯಾಗಿದೆ.

ಕುಸಿಯುತ್ತಿರುವ ರೂಪಾಯಿ: ಡಾಲರ್ ಎದುರು ರೂಪಾಯಿ ಮೌಲ್ಯ 95ಕ್ಕೆ ಕುಸಿದಿದ್ದು, ದೇಶದ ಆರ್ಥಿಕತೆ ಪಾಕಿಸ್ತಾನಕ್ಕಿಂತ ಕೆಳಕ್ಕೆ ಹೋಗುವ ಅಪಾಯವಿದೆ.

ಯುವಜನತೆಗೆ ಕರೆ: "ವಿದ್ಯಾವಂತ ಯುವಕರು ಕೇವಲ ಗುಂಗಿನಲ್ಲಿ ಇರದೆ ಸತ್ಯಾಂಶವನ್ನು ಅರಿಯಬೇಕು. ದೇಶದ ವಾಸ್ತವ ಆರ್ಥಿಕ ಪರಿಸ್ಥಿತಿಯನ್ನು ತಿಳಿಯಬೇಕು," ಎಂದು ಕರೆ ನೀಡಿದರು.

# ಬೋರ್‌ವೆಲ್ ಕೇಬಲ್ ಕಳವು: ಇಬ್ಬರು ವಶಕ್ಕೆ

ಕೆಜಿಎಫ್

ಬೇತಮಂಗಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ರೈತರ ನಿದ್ದೆಗೆಡಿಸಿದ್ದ ಬೋರ್‌ವೆಲ್ ಕೇಬಲ್ ವೈರ್ ಕಳ್ಳತನ ಪ್ರಕರಣವನ್ನು ಭೇದಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸರು, ಇಬ್ಬರು ಆರೋಪಿಗಳನ್ನು ಬಂಧಿಸಿ ಲಕ್ಷಾಂತರ ರೂಪಾಯಿ ಮೌಲ್ಯದ ಸ್ವತ್ತನ್ನು ವಶಪಡಿಸಿಕೊಂಡಿದ್ದಾರೆ.

ಮಾ.30 ರಂದು ಶ್ರೀನಿವಾಸಪುರ ಗ್ರಾಮದ ನಿವಾಸಿ ನಾರಾಯಣಪ್ಪ ಎಂಬುವವರ ಜಮೀನಿನಲ್ಲಿ ಅಳವಡಿಸಲಾಗಿದ್ದ 410 ಮೀಟರ್ ಉದ್ದದ ಬೋರ್‌ವೆಲ್ ಕೇಬಲ್ ವೈರ್ ಕಳವಾಗಿತ್ತು. ಈ ಸಂಬಂಧ ಬೇತಮಂಗಲ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಪ್ರಕರಣದ ಗಂಭೀರತೆ ಅರಿತ ಪೊಲೀಸರು ತನಿಖೆ ಚುರುಕುಗೊಳಿಸಿದ್ದರು.

ಡಿವೈಎಸ್‌ಪಿ ವಿ. ಲಕ್ಷ್ಮಯ್ಯ ಅವರ ಮಾರ್ಗದರ್ಶನದಲ್ಲಿ, ಸಿಪಿಐ ವೈ.ಆರ್. ರಂಗಶಾಮಯ್ಯ ಹಾಗೂ ಪಿಎಸ್‌ಐ ತ್ಯಾಗರಾಜ್ ಎಂ. ನೇತೃತ್ವದ ವಿಶೇಷ ತಂಡ ಕಾರ್ಯಾಚರಣೆ ನಡೆಸಿ ಇಬ್ಬರು ಆರೋಪಿಗಳನ್ನು ಸೆರೆಹಿಡಿದಿದೆ. ಚಲಪತಿ (37 ವರ್ಷ), ವಾಸ: ಜೇಡಮಾಕನಹಳ್ಳಿ. ಬಾಬು (47 ವರ್ಷ), ವಾಸ: ಪಂತನಹಳ್ಳಿ ಗ್ರಾಮ. ವಿಚಾರಣೆ ವೇಳೆ ಆರೋಪಿಗಳು ಕೃತ್ಯವೆಸಗಿರುವುದನ್ನು ಒಪ್ಪಿಕೊಂಡಿದ್ದು, ಅವರಿಂದ 80,600 ರೂ. ಮೌಲ್ಯದ 310 ಮೀಟರ್ ಕೇಬಲ್ ವೈರ್ ಹಾಗೂ ಕೃತ್ಯಕ್ಕೆ ಬಳಸಿದ್ದ ಒಂದು ದ್ವಿಚಕ್ರ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ. ಆರೋಪಿಗಳನ್ನು ಸದ್ಯ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಸಮರ್ಥವಾಗಿ ಕಾರ್ಯಾಚರಣೆ ನಡೆಸಿ ಕಳ್ಳರನ್ನು ಪತ್ತೆಹಚ್ಚಿದ ಪಿಎಸ್‌ಐ ತ್ಯಾಗರಾಜ್, ನಾರಾಯಣಸ್ವಾಮಿ ಡಿ.ಕೆ ಹಾಗೂ ಸಿಬ್ಬಂದಿಗಳಾದ ರಮೇಶ್, ಶ್ರೀನಿವಾಸ, ಮಂಜುನಾಥ ಗೌಡ ಸೇರಿದಂತೆ ತಂಡದ ಉತ್ತಮ ಕೆಲಸವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಅವರು ಶ್ಲಾಘಿಸಿದ್ದಾರೆ.



# ಕವಿಗಳ ಸ್ವರಚಿತ ಕವನ ವಾಚನಕ್ಕೆ ಸಾಕ್ಷಿಯಾದ ನಗರ್ತಪೇಟೆ



ಶಿಡ್ಲಘಟ್ಟ

ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ನಗರದ 2ನೇ ನಗರ್ತಪೇಟೆಯ ಸಂಗೀತ ವಿದೂಷಿ ಮಂಜುಳಾ ಜಗದೀಶ್ ಅವರ ನಿವಾಸದಲ್ಲಿ ವಿಶಿಷ್ಟವಾದ 'ಮನೆಯಂಗಳದಲ್ಲಿ ಕವಿಗೋಷ್ಠಿ' ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕವಿಗಳಾದ ಶ್ಯಾಮ್ ಸುಂದರ್, ರೂಪಸಿ ರಮೇಶ್, ಹರೀಶ್ ಬಾಬು, ಜಗದೀಶ್ ಕುಮಾರ್, ಸತ್ಯನಾರಾಯಣ ರಾವ್, ವಿ. ಕೃಷ್ಣ, ಶ್ರೀನಿವಾಸ್ ವಿಶ್ವಕರ್ಮ ಹಾಗೂ ಎನ್. ಸುಂದರ್ ಅವರು ತಮ್ಮ ಸ್ವರಚಿತ ಕವನಗಳನ್ನು ವಾಚಿಸುವ ಮೂಲಕ ಸಾಹಿತ್ಯಾಸಕ್ತರ ಮನಗೆದ್ದರು. ಪ್ರಕೃತಿ, ಸಮಾಜ ಹಾಗೂ ಜೀವನದ ವಿವಿಧ ಮಜಲುಗಳ ಕುರಿತ ಕವನಗಳು ಗೋಷ್ಠಿಯಲ್ಲಿ ಗಮನ ಸೆಳೆದವು.

ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಎಸ್.ವಿ. ನಾಗರಾಜರಾವ್ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್‌ನ ದತ್ತಿ ಕಾರ್ಯಕ್ರಮಗಳ ಉದ್ದೇಶ ಮತ್ತು ಸಾಹಿತ್ಯ ಪ್ರಸಾರದಲ್ಲಿ ಅದರ ಪ್ರಾಮುಖ್ಯತೆಯ ಬಗ್ಗೆ ಸವಿಸ್ತಾರವಾಗಿ ವಿವರಿಸಿದರು.

ನಿವೃತ್ತ ಉಪನ್ಯಾಸಕ ಮಹಮ್ಮದ್ ಖಾಸಿಂ ಅವರು ಕನ್ನಡ ಭಾಷೆಯ ಶ್ರೀಮಂತಿಕೆ ಹಾಗೂ ವಚನ ಸಾಹಿತ್ಯವು ಸಮಾಜಕ್ಕೆ ನೀಡಿರುವ ಕೊಡುಗೆಗಳ ಕುರಿತು ಪ್ರೇರಣಾದಾಯಕವಾಗಿ ಮಾತನಾಡಿದರು. ಕಾರ್ಯಕ್ರಮದ ಆರಂಭದಲ್ಲಿ ಮಾರುತಿ ಗಾಯನ ಸಮಾಜದ ಸದಸ್ಯರಿಂದ 'ಹನುಮ ಸ್ತುತಿ' ಗಾಯನ ನಡೆಯಿತು. ತಾ. ಕಸಾಪ ಅಧ್ಯಕ್ಷ ಪಟೇಲ್ ನಾರಾಯಣಸ್ವಾಮಿ, ಸದಸ್ಯರಾದ ಟಿ.ಟಿ. ನರಸಿಂಹಪ್ಪ, ಹಿತ್ತಲಹಳ್ಳಿ ಸುರೇಶ್, ಅಂಬಾರಿ ಮಂಜುನಾಥ್, ಮುನಿರತ್ನಮಾಚಾರ್, ಸಾಹಿತ್ಯಾಭಿಮಾನಿಗಳು ಭಾಗವಹಿಸಿದ್ದರು.

# ಸಿದ್ಧರಬೆಟ್ಟಕ್ಕೆ ಮಾಜಿ ಸಚಿವ ರಘುವೀರಾ ರೆಡ್ಡಿ ಭೇಟಿ



ಕೊರಟಗೆರೆ

ಅಧ್ಯಾತ್ಮಿಕವಾಗಿ ಜಗತ್ಪ್ರಸಿದ್ಧವಾಗಿರುವ ತಾಲೂಕಿನ ಸಿದ್ಧರಬೆಟ್ಟದ ಬಾಳೆಹೊನ್ನೂರು ಖಾಸಾ ಶಾಖಾ ಮಠಕ್ಕೆ ಆಂಧ್ರ ಪ್ರದೇಶದ ಮಾಜಿ ಸಚಿವ ಹಾಗೂ ಕಾಂಗ್ರೆಸ್ ಮುಖಂಡ ಎನ್. ರಘುವೀರಾ ರೆಡ್ಡಿ ಅವರು ಇತ್ತೀಚೆಗೆ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದರು.

ಶ್ರೀಗಳೊಂದಿಗೆ ಅಧ್ಯಾತ್ಮಿಕ ಸಮಾಲೋಚನೆ: ಶ್ರೀಮಠಕ್ಕೆ ಭೇಟಿ ನೀಡಿದ ರಘುವೀರಾ ರೆಡ್ಡಿ ಅವರು, ಪೀಠಾಧ್ಯಕ್ಷರಾದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿಗಳ ಪಾದಪೂಜೆ ನೆರವೇರಿಸಿ ಆಶೀರ್ವಾದ ಪಡೆದರು. ಬಳಿಕ ಶ್ರೀಗಳೊಂದಿಗೆ ಮಠದ ಇತಿಹಾಸ, ಸಾಮಾಜಿಕ ಕಳಕಳಿ ಹಾಗೂ ಆಧ್ಯಾತ್ಮಿಕ ಬೆಳವಣಿಗೆಗಳ ಕುರಿತು ಸುದೀರ್ಘವಾಗಿ ಚರ್ಚಿಸಿದರು.

ನೀಲಕಂಠಾಪುರ ಅಭಿವೃದ್ಧಿಗೆ ಮಾರ್ಗದರ್ಶನ ಕೋರಿಕೆ: ಆಂಧ್ರ ಪ್ರದೇಶದ ನೀಲಕಂಠಾಪುರ ದೇವಸ್ಥಾನ ಅಭಿವೃದ್ಧಿ ಸಮಿತಿಯ ಅಧ್ಯಕ್ಷರೂ ಆಗಿರುವ ರಘುವೀರಾ ರೆಡ್ಡಿ ಅವರು, ಅಲ್ಲಿ ನಡೆಯುತ್ತಿರುವ ದೇವಸ್ಥಾನದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಶ್ರೀಗಳಿಗೆ ಮಾಹಿತಿ ನೀಡಿದರು. ಈ ವೇಳೆ ಅವರು, "ಆಧ್ಯಾತ್ಮಿಕವಾಗಿ ಬೆಳೆಯುತ್ತಿರುವ ನೀಲಕಂಠಾಪುರ ಕ್ಷೇತ್ರಕ್ಕೆ ಒಮ್ಮೆಯಾದರೂ ತಾವು ಭೇಟಿ ನೀಡಬೇಕು ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಅಗತ್ಯವಾದ ದಿವ್ಯ ಮಾರ್ಗದರ್ಶನವನ್ನು ನೀಡಬೇಕು," ಎಂದು ಶ್ರೀಗಳಲ್ಲಿ ಭಕ್ತಿಪೂರ್ವಕ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಆಂಧ್ರ ಪ್ರದೇಶದ ಮಡಕಶಿರಾ ವೀರಶೈವ ಲಿಂಗಾಯಿತ ಸಂಘದ ಮುಖಂಡರುಗಳು, ಕಾಂಗ್ರೆಸ್ ಪಕ್ಷದ ಮಂಡಲ ಮುಖಂಡ ಎಸ್. ಮಂಜುನಾಥ್ ಹಾಗೂ ಶ್ರೀಮಠದ ಭಕ್ತಾಧಿಗಳು ಉಪಸ್ಥಿತರಿದ್ದರು.

# ಪ್ರವಾಸಿ ತಾಣಗಳಲ್ಲಿ ಮಕ್ಕಳ ಸುರಕ್ಷತೆಗೆ ಕ್ರಮ

ರಾಮನಗರ

ಪ್ರವಾಸೋದ್ಯಮ ಕ್ಷೇತ್ರವು ಮಕ್ಕಳಿಗೆ ಶಿಕ್ಷಣ, ಮನರಂಜನೆ ಮತ್ತು ಅನುಭವ ನೀಡುವ ಪ್ರಮುಖ ವಲಯವಾಗಿದೆ. ಬೆಂಗಳೂರು ದಕ್ಷಿಣ ಜಿಲ್ಲೆಯು ಅರಣ್ಯ ಪ್ರದೇಶ, ನದಿಗಳು ಬೆಟ್ಟ ಗುಡ್ಡಗಳು, ಜಲಾಶಯಗಳು, ಸಾಹಸ ಕ್ರೀಡೆಗಳು ಒಲಗೊಂಡಿರುವ ಕಾರಣ ಅಪಾಯ ಉಂಟಾಗುವ ಸಾಧ್ಯತೆ ಇರುತ್ತದೆ. ಇತ್ತೀಚಿನ ದಿನಗಳಲ್ಲಿ ಸೆಲ್ಫಿ ತೆಗೆದುಕೊಳ್ಳುವ ಕಾರಣ ಮೃತ ಪಡುವ ಪ್ರಕರಣಗಳೂ ಹೆಚ್ಚಾಗುತ್ತಿವೆ. ಈ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಮಕ್ಕಳೊಂದಿಗೆ ಭೇಟಿ ನೀಡುವ ಪೋಷಕರು ಕಡ್ಡಾಯವಾಗಿ ಅರಣ್ಯ ಪ್ರದೇಶಗಳಲ್ಲಿ, ಜಲಾಶಯಗಳ ಬಳಿ, ಬೆಟ್ಟ ಗುಡ್ಡಗಳ ಬಳಿ ಟ್ರಕ್ಕಿಂಗ್ ಮಾಡುವ ಸಂದರ್ಭದಲ್ಲಿ ಹಾಗೂ ಇತರೆ ಅಪಾಯಕಾರಿ ಪ್ರವಾಸಿ ತಾಣಗಳಲ್ಲಿ ಜಾಗರೂಕತೆ ವಹಿಸಲು ಹಾಗೂ ಯಾವುದಾದರೂ ಅವಘಡಗಳು ಸಂಭವಿಸಿದಲ್ಲಿ ಮಕ್ಕಳ ಸಹಾಯವಾಣಿ 1098 ಸಂಖ್ಯೆಗೆ ಕರೆ ಮಾಡಬಹುದು ಹಾಗೂ ಸಂಬಂಧಪಟ್ಟ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು, ಪ್ರಾಧಿಕಾರಗಳು ಈ ಕುರಿತು ಕ್ರಮ ವಹಿಸಬೇಕು.

ಪ್ರವಾಸೋದ್ಯಮ ಇಲಾಖೆ ವತಿಯಿಂದ ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳಿಗೆ ಪ್ರವಾಸಿಗರ ಸುರಕ್ಷತಾ ದೃಷ್ಟಿಯಿಂದ 24 ಪ್ರವಾಸಿ ಮಿತ್ರರನ್ನು ನಿಯೋಜಿಸಲಾಗಿದೆ. ಮಕ್ಕಳ ಸಹಾಯವಾಣಿ 1098 ಅನ್ನು ಅಳವಡಿಸಲಾಗಿದೆ. ಅಪಾಯ ಇರುವ ಸ್ಥಳಗಳಲ್ಲಿ ಎಚ್ಚರಿಕೆ, ಅಪಾಯದ ಸೂಚನಾ ಫಲಕಗಳನ್ನು ಅಳವಡಿಸಿದೆ. ಪ್ರವಾಸೋದ್ಯಮ ಇಲಾಖೆಯಿಂದ ಅನುಮತಿ ಪಡೆದಿರುವ ಎಲ್ಲಾ ಹೋಂ ಸ್ಟೇ / ರೆಸಾರ್ಟ್‌ಗಳಿಗೆ ಮಕ್ಕಳ ಸುರಕ್ಷತೆಯ ಬಗ್ಗೆ ಕ್ರಮ ಕೈಗೊಳ್ಳಲು ಸುತ್ತೋಲೆ ಹೊರಡಿಸಲಾಗಿದೆ. ಜಿಲ್ಲೆಯಲ್ಲಿ ಜಲಸಾಹಸ ಕ್ರೀಡೆಗಳನ್ನು ಆಯೋಜಿಸಲು ಅನುಮತಿ ನೀಡಿರುವ ಸಂಸ್ಥೆಗಳಿಗೆ ಕಡ್ಡಾಯವಾಗಿ ಮಕ್ಕಳ ರಕ್ಷಣೆ ಬಗ್ಗೆ ಕ್ರಮ ವಹಿಸಲು ಸೂಚಿಸಲಾಗಿದೆ ಎಂದು ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಪ್ರಥಮ ವರ್ಷದ ವಿವಿಧ ಪದವಿಗಳಿಗೆ ಪ್ರವೇಶಾತಿ ಪ್ರಾರಂಭ

ರಾಮನಗರ

ಚನ್ನಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ (ಎನ್‌ಎಎಸಿ ಬಿ+ ಗ್ರೇಡ್ ಹಾಗೂ ರೂಸಾ ಅನುದಾನಿತ ಕಾಲೇಜು) 2026–27ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ವಿವಿಧ ಪದವಿಗಳಿಗೆ ಪ್ರವೇಶಾತಿ ಪ್ರಾರಂಭವಾಗಿದೆ. ಅರ್ಜಿಯನ್ನು ಕಾಲೇಜಿನ ಕಚೇರಿಯಲ್ಲಿ ಈಗಾಗಲೇ ನೀಡಲು ಆರಂಭಿಸಲಾಗಿದೆ.

ದ್ವಿತೀಯ ಪಿ.ಯು.ಸಿಯಲ್ಲಿ ತೇರ್ಗಡೆಗೊಂಡ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಲಭ್ಯವಿರುವ ಕೋರ್ಸ್‌ಗಳು ಕಲಾವಿಭಾಗದಲ್ಲಿ ಬಿ.ಎ.–ಎಚ್.ಇ.ಪಿ., ಎಚ್.ಎಸ್.ಕೆ., ಎಚ್.ಇ.ಕೆ., ಎಚ್.ಇ.ಜೆ., ಎಚ್.ಇ.ಇ., ಎಚ್.ಇ.ಎಸ್., ಜೆ.ಪಿ.ಕೆ., ವಾಣಿಜ್ಯಶಾಸ್ತ್ರ ಹಾಗೂ ನಿರ್ವಹಣಾ ಶಾಸ್ತ್ರ ವಿಭಾಗದಲ್ಲಿ ಬಿ.ಕಾಂ–ರೆಗ್ಯೂಲರ್, ಬಿ.ಕಾಂ–ಎಇಡಿಪಿ (ಬಿ.ಎಸ್.ಎಫ್.ಐ), ಬಿಕಾಂ–ಎಇಡಿಪಿ (ರೀಟೇಲ್ ಆಫರೇಷನ್) ಬಿಬಿಎ–(ರೆಗ್ಯೂಲರ್) ಕೋರ್ಸ್‌ಗಳಿಗೆ ವಿಶ್ವ ವಿದ್ಯಾಲಯ ನಿಗಧಿಪಡಿಸಿದ ಕಡ್ಡಾಯ ವಿಷಯಗಳು ವಿಜ್ಞಾನ ವಿಭಾಗದಲ್ಲಿ ಪಿಸಿಎಂ., ಪಿಎಂಸಿ., ಸಿಬಿಝಡ್, ಬಿಬಿಝಡ್., ಸಿಬಿಎಂ., ಬಿ.ಸಿ.ಎ. ವಿಭಾಗದಲ್ಲಿ ವಿಶ್ವವಿದ್ಯಾಲಯ ನಿಗಧಿಪಡಿಸಿದ ಕಡ್ಡಾಯ ವಿಷಯಗಳು ಲಭ್ಯವಿರುತ್ತದೆ.

ಕಾಲೇಜಿನ ಸೌಲಭ್ಯಗಳು ನುರಿತ, ಪರಿಣಿತ ಪ್ರಾಧ್ಯಾಪಕರು, 45000 ಪುಸ್ತಕಗಳನ್ನೊಳಗೊಂಡ ಗ್ರಂಥಾಲಯ, ಸುಸಜ್ಜಿತವಾದ ರಾಸಾಯನ ಶಾಸ್ತ್ರ, ಭೌತಶಾಸ್ತ್ರ, ಗಣಕಯಂತ್ರ ಪ್ರಯೋಗಾಲಯ, ಬಿಸಿನೆಸ್ ಲ್ಯಾಬ್, ಐಸಿಟಿ ತರಗತಿಗಳು, ಮಲ್ಟಿಜಿಮ್, ಒಳಾಂಗಣ ಮತ್ತು ಹೊರಾಂಗಣ ಕ್ರೀಡೆಗಳ ಸೌಲಭ್ಯಗಳು ಹಾಗೂ ವಿದ್ಯಾರ್ಥಿಗಳ ಪಠ್ಯೇತರ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಎನ್‌ಎಸ್‌ಎಸ್., ಎನ್ಸಿಸಿ, ರೇರ್ಸ್ ಮತ್ತು ರರ್ಸ್ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್‌ಳ ಮತ್ತು ಇತರೆ ಸೌಲಭ್ಯಗಳಿವೆ.

ಭಾರತ ಸಾರಥಿ
09/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಗ್ಯಾರಂಟಿ ಯೋಜನೆಗಳು ಚುನಾವಣೆಗೆ ಸಂಬಂಧಪಟ್ಟವಲ್ಲ; ಚುನಾವಣಾ ಆಯೋಗದ ನಡೆ ಅನುಮಾನಾಸ್ಪದ: ಸಿಎಂ

ಬೆಂಗಳೂರು

ದಾವಣಗೆರೆ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ನಡೆಯುತ್ತಿರುವ ಉಪಚುನಾವಣೆಗಳ ಹಿನ್ನೆಲೆಯಲ್ಲಿ ರಾಜ್ಯದ ಗ್ಯಾರಂಟಿ ಯೋಜನೆಗಳಡಿ ಬಿಡುಗಡೆಯಾದ ಹಣದ ವಿವರಗಳನ್ನು ಕೇಳಿರುವ ಭಾರತದ ಚುನಾವಣಾ ಆಯೋಗದ ಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರವಾಗಿ ಪ್ರಶ್ನಿಸಿದ್ದಾರೆ.

ರಾಜ್ಯದ ಗ್ಯಾರಂಟಿ ಯೋಜನೆಗಳು ಉಪಚುನಾವಣೆ ಹಿನ್ನೆಲೆಯಲ್ಲಿ ಜಾರಿಗೊಂಡ ಯೋಜನೆಗಳಲ್ಲ ಎಂದು ಸ್ಪಷ್ಟಪಡಿಸಿದ ಅವರು, 2023ರ ವಿಧಾನಸಭೆ ಚುನಾವಣೆಯಲ್ಲಿ ಜನತೆಗೆ ನೀಡಿದ ಭರವಸೆಗಳ ಭಾಗವಾಗಿ ಸರ್ಕಾರವು ಅವನ್ನು ಜಾರಿಗೊಳಿಸಿದೆ ಎಂದು ಹೇಳಿದ್ದಾರೆ.

ರಾಜ್ಯದ ಎಲ್ಲಾ ಫಲಾನುಭವಿಗಳ ಖಾತೆಗಳಿಗೆ ನಿಯಮಿತವಾಗಿ ಮತ್ತು ಪಾರದರ್ಶಕವಾಗಿ ಹಣ ವರ್ಗಾವಣೆಯಾಗುತ್ತಿದೆ. ಜನರು ಘನತೆಯಿಂದ ಬದುಕಲು, ಜೀವನ ನಿರ್ವಹಣೆ ಮಾಡಲು ಮತ್ತು ಆರ್ಥಿಕವಾಗಿ ಬಲಿಷ್ಠರಾಗಲು ಸರ್ಕಾರ ನೇರವಾಗಿ ನೆರವು ನೀಡುತ್ತಿದೆ. ಇವು ಆಡಳಿತದ ಭಾಗವಾಗಿದ್ದು, ಮತದಾರರನ್ನು ಸೆಳೆಯುವ ಉದ್ದೇಶದ ಯೋಜನೆಗಳಲ್ಲ ಎಂದು ಅವರು ತಿಳಿಸಿದ್ದಾರೆ.



ಗ್ಯಾರಂಟಿ ಯೋಜನೆಗಳ ವಿಚಾರದಲ್ಲಿ ಭಾರತೀಯ ಜನತಾ ಪಕ್ಷ ಇಬ್ಬಗೆ ನೀತಿಯನ್ನು ಅನುಸರಿಸುತ್ತಿದೆ ಎಂದು ಆರೋಪಿಸಿದ ಅವರು, ಕರ್ನಾಟಕದಲ್ಲಿ ಈ ಯೋಜನೆಗಳನ್ನು "ಉಚಿತ ಭಾಗ್ಯ" ಎಂದು ಟೀಕಿಸುವ ಅದೇ ಪಕ್ಷ, ತಾವು ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ಇದೇ ಮಾದರಿಯ ಯೋಜನೆಗಳನ್ನು ಜಾರಿಗೊಳಿಸುತ್ತಿದೆ ಎಂದರು.

ಕರ್ನಾಟಕದ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿಯಾಗಿವೆ ಎಂಬುದನ್ನು ಇದೇ ತೋರಿಸುತ್ತದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಅದೇ ವೇಳೆ, ಭಾರತದ ಚುನಾವಣಾ ಆಯೋಗದ ನಿಲುವಿನ ಮೇಲೂ ಅವರು ಅನುಮಾನ ವ್ಯಕ್ತಪಡಿಸಿದ್ದಾರೆ. ಮಹಾರಾಷ್ಟ್ರ ಮತ್ತು ಬಿಹಾರ ರಾಜ್ಯಗಳಲ್ಲಿ ಚುನಾವಣೆಗೂ ಮುನ್ನ ನಗದು ವರ್ಗಾವಣೆ ಯೋಜನೆಗಳನ್ನು ಘೋಷಿಸಿ, ಅವುಗಳನ್ನು ವೇಗವಾಗಿ ಜಾರಿಗೊಳಿಸಿದಾಗ ಆಯೋಗ ಮೌನವಹಿಸಿತ್ತು. ಮತದಾರರಿಗೆ ನೇರ ಹಣ ವರ್ಗಾವಣೆ ನಡೆದಿದ್ದರೂ ಯಾವುದೇ ತಡೆ ಅಥವಾ ಪರಿಶೀಲನೆ ನಡೆಸಲಿಲ್ಲ ಎಂದು ಅವರು ಆರೋಪಿಸಿದರು.

ಆದರೆ ಕರ್ನಾಟಕ ಸರ್ಕಾರ ಚುನಾವಣೆಗೂ ಮುನ್ನ ನೀಡಿದ ಭರವಸೆಗಳನ್ನು ಈಡೇರಿಸುತ್ತಿರುವಾಗ ಮಾತ್ರ ಆಯೋಗ ಪ್ರಶ್ನೆ ಕೇಳುತ್ತಿದೆ. ಇದು ನಿಷ್ಪಕ್ಷಪಾತ ನಿಲುವಲ್ಲ; ಒಂದು ಪಕ್ಷಕ್ಕೆ ಅನುಕೂಲ ಮಾಡುವ ರೀತಿಯ ನಡೆ ಎಂದು ಅವರು ಟೀಕಿಸಿದ್ದಾರೆ.

ಭಾರತೀಯ ಜನತಾ ಪಕ್ಷ ಅಥವಾ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಮೈತ್ರಿಕೂಟ ಸರ್ಕಾರಗಳು ಏನು ಮಾಡಿದರೂ ಆಯೋಗ ಕಣ್ಣುಮುಚ್ಚಿಕೊಂಡಿರುತ್ತದೆ.

ಆದರೆ ಕರ್ನಾಟಕ ಸರ್ಕಾರ ತನ್ನ ಮಾತು ಉಳಿಸಿಕೊಳ್ಳಲು ಮುಂದಾದಾಗ ಅದೇ ಆಯೋಗ ತೊಂದರೆ ನೀಡುತ್ತಿದೆ ಎಂದು ಸಿದ್ದರಾಮಯ್ಯ ಆರೋಪಿಸಿದ್ದಾರೆ.

ಕರ್ನಾಟಕದ ಗ್ಯಾರಂಟಿ ಯೋಜನೆಗಳನ್ನು ಗುರಿಯಾಗಿಸಿಕೊಂಡು ನಡೆಯುತ್ತಿರುವ ದಾಳಿ ಕೇವಲ ರಾಜಕೀಯ ದಾಳಿ ಮಾತ್ರವಲ್ಲ; ಅದು ಬಡವರ ವಿರುದ್ಧ, ಮಹಿಳೆಯರ ವಿರುದ್ಧ ಮತ್ತು ಕರ್ನಾಟಕದ ವಿರುದ್ಧದ ಪರೋಕ್ಷ ದಾಳಿ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

"ನುಡಿದಂತೆ ನಡೆವ ಸರ್ಕಾರ" ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ತಮ್ಮ ಸರ್ಕಾರ, ಚುನಾವಣಾ ಆಯೋಗದ ಇಂತಹ ಬೆದರಿಕೆಗಳಿಗೆ ಬಗ್ಗುವುದಿಲ್ಲ. ಜನತೆಗೆ ನೀಡಿದ ಭರವಸೆಗಳನ್ನು ಈಡೇರಿಸುವಲ್ಲಿ ಸರ್ಕಾರ ಬದ್ಧವಾಗಿದ್ದು, ಕನ್ನಡಿಗರ ಸೇವೆಯನ್ನು ಮುಂದುವರಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

## ಖರ್ಗೆ ವಿರುದ್ಧ ಸ್ವಯಂಪ್ರೇರಿತ ದೂರಿಗೆ ಆಗ್ರಹ

ಬೆಂಗಳೂರು

ಬಿಜೆಪಿ ಮತ್ತು ಆರ್‌ಎಸ್‌ಎಸ್ ವಿರುದ್ಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಕ್ಷೇಪಾರ್ಹ ಹೇಳಿಕೆ ನೀಡಿರುವುದು ಹತಾಶವಾದ ಮಾನಸಿಕ ಅಸ್ವಸ್ಥತೆಯನ್ನು ಪ್ರತಿಬಿಂಬಿಸುವ ರೀತಿ ಇದೆ. ಖರ್ಗೆ ಅವರ ವಿರುದ್ಧ ಸ್ವಯಂಪ್ರೇರಿತ ದೂರು ದಾಖಲಿಸಿ ಯೋಗ್ಯ ಚಿಕಿತ್ಸೆ ಕೊಡಿಸಿ. ರಾಜಕೀಯ ನಿವೃತ್ತಿ ಕೊಡಿಸಿ ಎಂದು ಮಾಜಿ ಸಚಿವ ಸಿ ಟಿ ರವಿ ಅವರು ಆಗ್ರಹಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಅವರು ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಖರ್ಗೆ ಅವರು ಆರು ದಶಕಗಳ ಕಾಲ ರಾಜಕಾರಣದಲ್ಲಿ ಹಲವಾರು ಹುದ್ದೆಗಳನ್ನು ಅನುಭವಿಸಿ ಇಂತಹ ಹೇಳಿಕೆ ನೀಡುವುದು ಒಳ್ಳೆಯದಲ್ಲ. ಹಿರಿತನದ ಹಾಗೂ ಮುತ್ಸದ್ಧಿತನದ ಹೇಳಿಕೆಗಳಾಗಿ ಕಾಣುತ್ತಿಲ್ಲ. ಇದೊಂದು ದ್ವೇಷದ ಹೇಳಿಕೆ ಎಂದರು.

ಗುಜರಾತ್ ಜನ ಅನಕ್ಷರಸ್ಥರಾಗಿರುವುದರಿಂದ ಬಿಜೆಪಿ ಗೆಲ್ಲಿಸಿದರು ಎಂದು ಖರ್ಗೆ ಅವರು ಹೇಳಿದರು. ಹೀಗೆ ಹೇಳಿ ಗುಜರಾತ್ ಜನರನ್ನು ಅವಮಾನಿಸಿದರು. ಕರ್ನಾಟಕದಲ್ಲಿ ನಿರಂತರವಾಗಿ ಲೋಕಸಭೆಗೆ ಬಿಜೆಪಿಯನ್ನು ಜನ ಬೆಂಬಲಿಸುತ್ತಿದ್ದಾರೆ, ಹಾಗಾದರೆ ಕರ್ನಾಟಕದ ಜನರೂ ಅನಕ್ಷರಸ್ಥರೇ ಎಂದು ಪ್ರಶ್ನಿಸಿದರು.

ಕರ್ನಾಟಕ ಸರ್ಕಾರವು ದ್ವೇಷ ಭಾಷಣ ನಿಷೇಧ ಮಸೂದೆ ತಂದಿದೆ. ಈಗ ಖರ್ಗೆ ಅವರ ಭಾಷಣವೂ ಇದೇ ಮಸೂದೆ ವ್ಯಾಪ್ತಿಗೆ ಬರುವುದಿಲ್ಲವೇ. ಮುಖ್ಯಮಂತ್ರಿಗಳು ಹಾಗೂ ಮರಿ ಖರ್ಗೆ ಯಾಕೆ ಮಾತನಾಡುತ್ತಿಲ್ಲ. ಪ್ರಿಯಾಂಕ್ ಅವರೂ ಸಮರ್ಥನೆ ಮಾಡುತ್ತಾರೆ ಅಂದರೆ ಅನುವಂಶೀಯವಾಗಿ ಮಾನಸಿಕ ಅಸ್ವಸ್ಥತೆ ಇದೆ ಎಂದಾಯಿತು ಎಂದರು.

## ಪಾಕಿಸ್ತಾನಕ್ಕೆ ಮುಖಭಂಗ

ಟೆಲ್ ಅವಿವ್

ಅಮೆರಿಕ ಮತ್ತು ಇರಾನ್ ನಡುವೆ ಕದನ ವಿರಾಮ ಘೋಷಣೆ ಮಾಡಿದ ಪಾಕಿಸ್ತಾನಕ್ಕೆ ಮುಖಭಂಗವಾಗಿದ್ದು ಲೆಬನಾನ್ ಮೇಲೆ ದಾಳಿ ಮುಂದುವರಿಸುವುದಾಗಿ ಇಸ್ರೇಲ್ ಹೇಳಿದೆ.

ಪಾಕ್ ಪ್ರಧಾನಿ ಷರೀಫ್ ಅವರು, ಈ ಕದನ ವಿರಾಮವು ಕೇವಲ ಅಮೆರಿಕ ಮತ್ತು ಇರಾನ್ ನಡುವೆ ಮಾತ್ರವಲ್ಲದೆ ಲೆಬನಾನ್ ಮತ್ತು ಇತರ ಸಂಘರ್ಷ ಪೀಡಿತ ಪ್ರದೇಶಗಳಿಗೂ ಅನ್ವಯಿಸಲಿದೆ ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದರು.

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಪಾಕ್ ವಿರಾಮವು ಕೇವಲ ಇರಾನ್ ಮತ್ತು ಅಮೆರಿಕದ ನಡುವಿನ ಸಂಘರ್ಷಕ್ಕೆ ಮಾತ್ರ ಸೀಮಿತವಾಗಿದ್ದು, ಲೆಬನಾನ್‌ನಲ್ಲಿರುವ ಹಿಜ್ಬುಲ್ಲಾ ವಿರುದ್ಧದ ಇಸ್ರೇಲ್‌ನ ಕಾರ್ಯಾಚರಣೆಗೆ ಅನ್ವಯಿಸುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.



ಬಸವನನಾಡು, ಸೂಫಿಸಂತರ ನೆಲೆಬೀಡು ಬೀದರನಲ್ಲಿ ಇದೇ 11 ಮತ್ತು 12 ರಂದು ಕೆಯುಡಬ್ಲ್ಯೂಜೆ ಆಯೋಜಿಸಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನ ಉದ್ಘಾಟನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ್ ಬಿ ಖಂಡ್ರೆ ಮತ್ತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಸಿಎಂ ನಿವಾಸದಲ್ಲಿ ಭೇಟಿ ಮಾಡಿ ಆಹ್ವಾನ ನೀಡಿದರು.

## ಕ್ಯಾಮರಾಮೆನ್ ಕುಟುಂಬಕ್ಕೆ 3 ಲಕ್ಷ ರೂ. ಪರಿಹಾರ

ಬೆಂಗಳೂರು



ಕೊಪ್ಪಳದ ಟಿವಿ 5 ಕ್ಯಾಮರಮೆನ್ ರಾಜು ಅಂಗಡಿ ಅವರ ಕುಟುಂಬಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 3ಲಕ್ಷ ರೂ ಪರಿಹಾರ ಬಿಡುಗಡೆ ಮಾಡಿದ್ದಾರೆ.

ಕ್ರೀಯಾಶೀಲ ರಾಜು ಅಂಗಡಿ, ತೀವ್ರ ಅನಾರೋಗ್ಯದಿಂದ ಮೃತಪಟ್ಟಿದ್ದರು. ಈ ಬಗ್ಗೆ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರು ಮತ್ತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ)ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಮುಖ್ಯಮಂತ್ರಿ ಗಮನಕ್ಕೆ ತಂದಿದ್ದು ನೆರವು ಕೋರಿದ್ದರು.

ಸಚಿವರು & ಕೆಯುಡಬ್ಲ್ಯೂಜೆ ಮನವಿ ಮೇರೆಗೆ ಪರಿಹಾರ ಮಂಜೂರು ಮಾಡಿದ ಸಿಎಂ ಸಿದ್ದರಾಮಯ್ಯಅವರಿಗೆ, ಈ ನಿಟ್ಟಿನಲ್ಲಿ ಸಹಕಾರ ನೀಡಿದ ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಧನ್ಯವಾದ ಸಲ್ಲಿಸಿದೆ.




ಬೆಂಗಳೂರಿನ ಡಾ.ಬಾಬು ಜಗಜೀವನ್ ರಾಮ್ ಭವನದಲ್ಲಿ ಬುಧವಾರ ನಡೆದ ಬಮೂಲ್ ಒಕ್ಕೂಟ ವ್ಯಾಪ್ತಿಯ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗೆ ವಿಶೇಷ ಪ್ರೋತ್ಸಾಹ ಧನದ ಚೆಕ್ ವಿತರಣಾ ಸಮಾರಂಭದಲ್ಲಿ ಒಕ್ಕೂಟದ ನಿರ್ದೇಶಕರು ಹಾಗೂ ಅಧಿಕಾರಿಗಳೊಂದಿಗೆ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಅವರು ಪಾಲ್ಗೊಂಡರು.

## 'ಖರ್ಗೆಗೆ ಅರಳು–ಮರಳು ನಾಲಿಗೆ ಹದ್ದು ಬಸ್ತಿನಲ್ಲಿಟ್ಟುಕೊಳ್ಳಲಿ'



ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ನಾಲಿಗೆಯನ್ನು ಹದ್ದುಬಸ್ತಿನಲ್ಲಿ ಇಟ್ಟುಕೊಳ್ಳಬೇಕು. ಅರಳು–ಮರಳು ರೀತಿ ಮಾತನಾಡಬಾರದು. ಇವರ ಮಾನಸಿಕ ಆರೋಗ್ಯ ಸರಿ ಇಲ್ಲ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಹೇಳಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮಲ್ಲಿಕಾರ್ಜುನ ಖರ್ಗೆ ಅವರು ಬಿಜೆಪಿ ಮತ್ತು ಆರ್‌ಎಸ್‌ಎಸ್ ವಿರುದ್ಧ ಪ್ರಚೋದನಾಕಾರಿ ಹೇಳಿಕೆ ನೀಡಿರುವುದು ಖಂಡನೀಯ. ದೇಶದಾದ್ಯಂತ ಜನರು ಇವರ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ. ಕೊಲ್ಲಲು ಪ್ರಚೋದನೆ ನೀಡುವುದು ಸರಿ ಅಲ್ಲ ಎಂದರು.

ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧ ತಡೆ ಮಸೂದೆಗೆ ಅಂಗೀಕಾರ ದೊರೆತಿದೆ. ಆ ಮಸೂದೆ ಅನ್ವಯ ಖರ್ಗೆ ಅವರ ರೀತಿ ಪ್ರಚೋದನಾಕಾರಿಯಾಗಿ ಮಾತನಾಡಿದರೆ ಪ್ರಕರಣ ದಾಖಲು ಮಾಡಬಹುದು. ಆದ್ದರಿಂದ ಬಿಜೆಪಿ ದೂರು ನೀಡಿದೆ. ಖರ್ಗೆ ಅವರ ಹೇಳಿಕೆ ಖಂಡಿಸಿ ಬಿಜೆಪಿಯ ಕಾರ್ಯಕರ್ತರು ಸಿಡಿದೆದ್ದು ಎಲ್ಲಾ ಕಡೆ ಪ್ರತಿಭಟನೆ ನಡೆಸುತ್ತಿದ್ದಾರೆ ಎಂದರು.

ರಜಾಕರಿಂದ ತಮ್ಮ ಕುಟುಂಬದ ಮೇಲೆ ದಾಳಿ ನಡೆದಿದೆ ಎಂದು ಖರ್ಗೆ ಅವರೇ ಹೇಳಿದ್ದಾರೆ. ತಮ್ಮ ಮನೆತನ ಹಾಳು ಮಾಡಿದವರ ವಿರುದ್ಧ ಮಾತನಾಡುವುದನ್ನು ಬಿಟ್ಟು ಬಿಜೆಪಿ ಮತ್ತು ಆರ್‌ಎಸ್‌ಎಸ್ ವಿರುದ್ಧ ಮಾತನಾಡುತ್ತಿದ್ದಾರೆ ಎಂದು ಹೇಳಿದರು. ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಗೆ ಮಗ ಪ್ರಿಯಾಂಕ್ ಖರ್ಗೆ ಅವರು ಬೆಂಬಲ ನೀಡಿದ್ದಾರೆ. ಇದು ಬೇವಿನ ಕಾಯಿಗೆ ಹಾಗಲಕಾಯಿ ಸಾಕ್ಷಿ ಇದ್ದಂತೆ. ಇವರಿಬ್ಬರ ಮನಸ್ಥಿತಿ ಒಂದೇ ಆಗಿದೆ ಆಗಿದೆ ಎಂದರು.

ಮಲ್ಲಿಕಾರ್ಜುನ ಖರ್ಗೆ ಅವರ ಬೆಂಬಲಕ್ಕೆ ಕಾಂಗ್ರೆಸ್‌ನಿಂದ ಯಾರೂ ಬಂದಿಲ್ಲ. ಪ್ರಿಯಾಂಕ್ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವನ್ನು ನಿರ್ಲಕ್ಷ್ಯ ಮಾಡಿದ್ದಾರೆ. ಕಾಂಗ್ರೆಸ್‌ನಿಂದ ಮೂಲೆಗುಂಪಾದ ಇವರಿಬ್ಬರು ತಮ್ಮನ್ನು ತೋರಿಸಿಕೊಳ್ಳಲು ಈ ರೀತಿಯ ಹಗೆತನದ ಹೇಳಿಕೆ ನೀಡಿದ್ದಾರೆ. ಅಪ್ಪ ಮತ್ತು ಮಗನ ತಲೆಯಲ್ಲಿ ವಿಷಕಾರಿ ಹಾವಿಗಿಂತ ಹೆಚ್ಚು ವಿಷ ಇದೆ ಎಂದು ವ್ಯಂಗ್ಯವಾಡಿದರು.

## ಹಂಸಿಕಾ ಫುಲೆಗೆ ಶೇ. 95.5 ಅಂಕ: ಗ್ರಾಮಸ್ಥರಲ್ಲಿ ಹರ್ಷ



ಕನಕಪುರ: 025-26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆ ನ್ಯಾಯಾಂಗ ಬಡಾವಣೆ ತಲಘಟ್ಟಪುರ ದೀಕ್ಷಾ ಪಿ ಯು ಪದವಿ ಪೂರ್ವ ಕಾಲೇಜಿನ ಹಂಸಿಕಾ ಫುಲೆ ಎಸ್ ವಿಜ್ಞಾನ ವಿಭಾಗದಲ್ಲಿ ಶೇ. 95.5 ಪಡೆದ ವಿದ್ಯಾರ್ಥಿನಿಯಾಗಿದ್ದಾರೆ. ಇವರು ಬೆಂಗಳೂರು ದಕ್ಷಿಣ ಜಿಲ್ಲೆ ಕನಕಪುರ ತಾಲ್ಲೂಕಿನ ಟಿ ಗೊಲ್ಲಹಳ್ಳಿ ಗ್ರಾಮದ ನಿವಾಸಿಯಾಗಿದ್ದು, ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ.



ಕರ್ನಾಟಕ ವಿಧಾನಮಂಡಲದ ಉಭಯ ಸಚಿವಾಲಯಗಳ ಸಂಪೂರ್ಣ ಡಿಜಿಟಲೀಕರಣ ಕಾರ್ಯದ ಕುರಿತು, ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್ ಫರೀದ್ ಅವರು ನ್ಯಾಷನಲ್ ಇ-ವಿಧಾನ್ ಅಪ್ಲಿಕೇಶನ್ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವಾಲಯದ ಅಧಿಕಾರಿಯಾದ ಡಾ.ಸತ್ಯಪ್ರಕಾಶ್ ಖಠಾನ, ಹೆಚ್ಚುವರಿ ಕಾರ್ಯದರ್ಶಿ ಅವರೊಂದಿಗೆ ಬುಧವಾರ ಚರ್ಚೆ ನಡೆಸಿ, ಶಾಸನ ಸಭೆಯನ್ನು ಸಂಪೂರ್ಣವಾಗಿ ಕಾಗದ ರಹಿತವಾಗಿ ನಡೆಸುವ ಕಾರ್ಯಕ್ಕೆ ಚಾಲನೆ ನೀಡಿ, ಒಪ್ಪಂದಕ್ಕೆ ಸಹಿ ಮಾಡಿದರು. ಈ ಸಂದರ್ಭದಲ್ಲಿ ವಿಧಾನಸಭೆ ಕಾರ್ಯದರ್ಶಿ ಶ್ರೀಮತಿ ವಿಶಾಲಾಕ್ಷಿ. ಎಂ.ಕೆ ಹಾಗೂ ವಿಧಾನಪರಿಷತ್ತಿನ ಕಾರ್ಯದರ್ಶಿ ಮತ್ತು ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

## ಮಕ್ಕಳಿಗೆ ವಿದ್ಯಾಭ್ಯಾಸ ಬಹಳ ಮುಖ್ಯ: ಭೈರತಿ ಬಸವರಾಜ



ಕೆ. ಆರ್. ಪುರ

ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ವಿಷಯದಲ್ಲಿ ನಾನು ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ. ಮಕ್ಕಳಿಗೆ ಗುಣಮಟ್ಟದ ವಿದ್ಯಾಭ್ಯಾಸ ಬಹಳ ಮುಖ್ಯವಾಗಿದ್ದು, ಸ್ಥಳೀಯರ ಸಹಕಾರದೊಂದಿಗೆ ಸುಸಜ್ಜಿತ ಅಂಗನವಾಡಿ ನಿರ್ಮಾಣವಾಗಿರುವುದು ಸಂತಸದ ವಿಷಯ ಎಂದು ಶಾಸಕ ಭೈರತಿ ಬಸವರಾಜ್ ತಿಳಿಸಿದರು.

ಕ್ಷೇತ್ರದ ರಾಮಮೂರ್ತಿನಗರದ ಹಳೇ ಮಂಜುನಾಥ ಬಡಾವಣೆಯಲ್ಲಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಕಾರ್ಯಕಾರಿ ಸಮಿತಿಯ ಸಹಯೋಗದಲ್ಲಿ ನಿರ್ಮಾಣಗೊಂಡ ನೂತನ ಅಂಗನವಾಡಿ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

### ಸರ್ಕಾರದ ವಿರುದ್ಧ ಅನುದಾನದ ಅಸಮಾಧಾನ

ಇದೇ ಸಂದರ್ಭದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಶಾಸಕರು, "ಈಗಿನ ಸರ್ಕಾರವು ಸರಿಯಾಗಿ ಅನುದಾನ ಬಿಡುಗಡೆ ಮಾಡದ ಕಾರಣ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುತ್ತಿದೆ. ಕ್ಷೇತ್ರದಾದ್ಯಂತ ಇರುವ ಬೀದಿ ದೀಪ, ಕಸದ ಸಮಸ್ಯೆ, ರಸ್ತೆ ಮತ್ತು ನೀರಿನ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗಿದೆ. ಪ್ರತಿ ವಾರ್ಡಿಗೂ ಅನುದಾನ ನೀಡುವುದಾಗಿ ಸರ್ಕಾರ ಭರವಸೆ ನೀಡಿದೆ. ಮೂಲಭೂತ ಸೌಕರ್ಯಗಳ ಸಮಸ್ಯೆ ಬಗೆಹರಿಸಲು ಅಧಿಕಾರಿಗಳೊಂದಿಗೆ ಚರ್ಚಿಸಿದ್ದು, ಶೀಘ್ರವೇ ಕಾಮಗಾರಿ ಆರಂಭಿಸಲು ಆದೇಶಿಸಲಾಗಿದೆ" ಎಂದರು.

### ಭೂಗಳ್ಳರ ಕೈಯಲ್ಲಿದ್ದ ಜಾಗ ಈಗ ಸಾರ್ವಜನಿಕ ಸೇವೆಗೆ ಮುಕ್ತ

ಬಿಜೆಪಿ ಮುಖಂಡ ಹಾಗೂ ಸಮಿತಿಯ ಅಧ್ಯಕ್ಷ ಶಿವಣ್ಣ ಮಾತನಾಡಿ, "ಈ ಹಿಂದೆ ಭೂಗಳ್ಳರ ಪಾಲಾಗಿದ್ದ ಸರ್ಕಾರಿ ಜಮೀನನ್ನು ಉಳಿಸಿ, ಅಲ್ಲಿ ಇಂದು ಪ್ರಾಥಮಿಕ ಆರೋಗ್ಯ ಕೇಂದ್ರ, ದೇವಸ್ಥಾನ ಹಾಗೂ ಅಂಗನವಾಡಿ ಕೇಂದ್ರ ನಿರ್ಮಾಣಗೊಳ್ಳಲು ಶಾಸಕರ ಧೈರ್ಯ ಮತ್ತು ಸಹಕಾರವೇ ಕಾರಣ. ಮುಂದಿನ ದಿನಗಳಲ್ಲಿ ಕೆರೆ ಅಭಿವೃದ್ಧಿ, ಸಂತೆ ಮೈದಾನ ಮತ್ತು ಸ್ಮಶಾನ ಅಭಿವೃದ್ಧಿಯಂತಹ ಬೇಡಿಕೆಗಳನ್ನು ಈಡೇರಿಸುವ ಭರವಸೆ ನಮಗಿದೆ" ಎಂದು ತಿಳಿಸಿದರು.

ಸಮಾರಂಭದಲ್ಲಿ ಪ್ರಮುಖ ಮುಖಂಡರಾದ ಹಾಲು ವೆಂಕಟೇಶ್, ನರೇಂದ್ರ, ಬಾಕ್ಸರ್ ನಾಗರಾಜ್, ಹಿತಾಚಿ ಮಂಜುನಾಥ್, ಆಂಜಿನಪ್ಪ, ಜೇವಿಯರ್, ಗೌರಮ್ಮ, ಪಿ.ಡಿ. ಚಂದ್ರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.ಎಂದು ಶಿವಣ್ಣ ಹೇಳಿದರು.

ಸಮಾರಂಭದಲ್ಲಿ ಹಾಲು ವೆಂಕಟೇಶ್, ನರೇಂದ್ರ, ಬಾಕ್ಸರ್ ನಾಗರಾಜ್, ಹಿಟಾಚಿ ಮಂಜುನಾಥ್, ಆಂಜಿನಪ್ಪ, ಜೇವಿಯರ್, ಗೌರಮ್ಮ, ಪಿ.ಡಿ.ಚಂದ್ರು, ಲಚ್ಚಿ, ಸುನೀಲ್, ಹರೀಶ್, ರಾಜು, ಆನಂದ್ ಮುಂತಾದವರಿದ್ದರು.

## ಆಯ್ದ ವನ್ಯಜೀವಿಗಳ ಸಂತಾನ ಶಕ್ತಿ ಹರಣಕ್ಕೆ ಚಿಂತನೆ: ಈಶ್ವರಖಂಡ್ರೆ

ಬೆಂಗಳೂರು



ಮಾನವ –ವನ್ಯಜೀವಿ ಸಂಘರ್ಷ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ಆಯ್ದ ವನ್ಯಜೀವಿಗಳ ಸಂತಾನ ಶಕ್ತಿ ಹರಣ ಅಥವಾ ಚುಚ್ಚುಮದ್ದು ನೀಡುವ ಬಗ್ಗೆ ಚಿಂತನೆ ಮಾಡುವ ಅಗತ್ಯವಿದ್ದು, ಈ ಬಗ್ಗೆ ಸಾರ್ವಜನಿಕವಾಗಿ ಚರ್ಚೆಯೂ ನಡೆಯಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿ ತಮ್ಮನ್ನು ಭೇಟಿ ಮಾಡಿದ್ದ ಸುದ್ದಿಗಾರರೊಂದಿಗೆ ಮಾತನಾಡಿ, ಕೆಲವು ಆಯ್ದ ವನ್ಯಜೀವಿಗಳ ಸಂಖ್ಯೆಯಲ್ಲಿ ಭಾರೀ ಹೆಚ್ಚಳವಾಗುತ್ತಿದೆ. ಇವುಗಳ ಸಂಖ್ಯೆಗೆ ಕಡಿವಾಣ ಹಾಕುವ ಅಗತ್ಯವೂ ಕಂಡು ಬರುತ್ತಿದೆ. ವನ್ಯಜೀವಿಗಳ ಸಂರಕ್ಷಣೆಯೂ ಆಗಬೇಕು. ಅಮೂಲ್ಯವಾದ ಜೀವಹಾನಿಯೂ ತಪ್ಪಬೇಕು. ಮಾನವರ ಜೀವ ಉಳಿಸುವ ಕೆಲಸವೂ ಆಗಬೇಕಿದೆ.

ಇದು ನಿರ್ಧಾರವಲ್ಲ, ಒಂದು ಚಿಂತನೆ ಮಾತ್ರ. ಈ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆ ಆಗುವ ಅಗತ್ಯವಿದೆ. ಜೊತೆಗೆ ತತ್ಸಂಬಂಧವಾದ ಪ್ರಕರಣ ಸರ್ವೋಚ್ಚ ನ್ಯಾಯಾಲಯದಲ್ಲಿದ್ದು, ತಜ್ಞರು, ಕಾನೂನು ಪಂಡಿತರೊಂದಿಗೆ ಚರ್ಚಿಸಿ ನ್ಯಾಯಾಲಯಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆಯೂ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಬೇಕಾಗುತ್ತದೆ ಎಂದರು.

ಜೀವನವೂ ಇರಬೇಕು, ಜೀವನೋಪಾಯವೂ ಇರಬೇಕು ಎಂದ ಅವರು, ಯಾವ ಭಾಗದಲ್ಲಿ ಯಾವ ವನ್ಯಜೀವಿಗಳ ಸಂಖ್ಯೆಯಲ್ಲಿ ಭಾರೀ ಹೆಚ್ಚಳವಾಗುತ್ತದೋ ಅಲ್ಲಿ ಒಂದೆರೆಡು ವರ್ಷ ನಿಯಂತ್ರಿಸುವ ಬಗ್ಗೆ ಚಿಂತನೆ ನಡೆಯುತ್ತಿದೆ. ಬೇರೆ ಬೇರೆ ರಾಜ್ಯಗಳಲ್ಲೂ ಇಂತಹ ಆಲೋಚನೆ, ಚಿಂತನೆ ಇದೆ. ಈ ಬಗ್ಗೆ ಸಾರ್ವಜನಿಕ ಚರ್ಚೆ ನಡೆಯುವ ಅಗತ್ಯವಿದೆ ಎಂದರು.

ಸ್ವಯಂ ಇಚ್ಛೆಯಿಂದ ಕಾಡಿನಿಂದ ಹೊರಬರಲು ಇಚ್ಛಿಸುವ ಅರಣ್ಯವಾಸಿಗಳ ಸ್ಥಳಾಂತರದ ಬಗ್ಗೆಯೂ ಸರ್ಕಾರ ಗಂಭೀರ ಚಿಂತನೆ ನಡೆಸಿದ್ದು, ಆ ರೀತಿ ಸ್ವಯಂ ಪ್ರೇರಣೆಯಿಂದ ಹೊರಬರುವವರ ಪಟ್ಟಿ ಸಿದ್ಧಪಡಿಸಲು ತಿಳಿಸಿದ್ದು, ಪಟ್ಟಿ ಸಿದ್ಧವಾದ ಬಳಿಕ ಎಷ್ಟು ಹಣದ ಅಗತ್ಯ ಬರುತ್ತದೆ. ಆಯವ್ಯಯದಲ್ಲಿ ಎಷ್ಟು ಹಣ ನೀಡಲಾಗಿದೆ. ಎಷ್ಟು ಕೊರತೆ ಆಗುತ್ತದೆ ಎಂಬ ಬಗ್ಗೆ ಹಣಕಾಸು ಸಚಿವರೂ ಆದ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ನಿರ್ಧಾರ ಕೈಗೊಳ್ಳುವುದಾಗಿ ಹೇಳಿದರು.

ಆನೆಗಳ ಸಮಸ್ಯೆ ಪರಿಹರಿಸಲು ಆನೆ ಧಾಮ ಮಾಡುವ ಬಗ್ಗೆ ಸರ್ಕಾರ ಯೋಜನೆ ರೂಪಿಸಿತ್ತು. ಅದಕ್ಕೆ ಕೇಂದ್ರ ಸರ್ಕಾರದಿಂದ ಅನುಮತಿ ಸಿಗುವಲ್ಲಿ ತೊಡಕಾಗಿದೆ. ಈ ಸಮಸ್ಯೆ ಪರಿಹರಿಸಿಕೊಂಡು ಆನೆ ಧಾಮ ನಿರ್ಮಾಣದ ಬಗ್ಗೆ ಕ್ರಮ ವಹಿಸಲಾಗುವುದು ಎಂದರು.

# ಹೆಣ್ಣು ಮಕ್ಕಳಿಗೆ ತಪ್ಪದೇ ಎಚ್‌ಪಿವಿ ಲಸಿಕೆ ಹಾಕಿಸಿ: ಡಿಸಿ ಅನುರಾಧ

ದೊಡ್ಡಬಳ್ಳಾಪುರ



ಗರ್ಭಕಂಠ ಕ್ಯಾನ್ಸರ್ ಬಾರದಂತೆ ತಡೆಯುವಲ್ಲಿ ಹ್ಯೂಮನ್ ಪ್ಯಾಪಿಲೋಮ ವೈರಸ್ (ಎಚ್.ಪಿ.ವಿ) ಲಸಿಕೆಯು ಅತ್ಯಂತ ಪರಿಣಾಮಕಾರಿಯಾಗಿದ್ದು 14 ರಿಂದ 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ತಪ್ಪದೇ ಎಚ್.ಪಿ.ವಿ ಲಸಿಕೆ ಹಾಕಿಸಿ ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಲಸಿಕಾ ಕಾರ್ಯಪಡೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 'ಹ್ಯೂಮನ್ ಪ್ಯಾಪಿಲೋಮ ವೈರಸ್ ಗರ್ಭಕಂಠ ಸೇರಿದಂತೆ ಅನೇಕ ಮಾದರಿಯ ಕ್ಯಾನ್ಸರ್ಗೆ ಕಾರಣವಾಗುತ್ತದೆ. ಲಸಿಕೆ ಹಾಕಿಸಿಕೊಳ್ಳುವುದರಿಂದ ಕ್ಯಾನ್ಸರ್ ಸೇರಿದಂತೆ ಇತರ ಗಂಭೀರ ಕಾಯಿಲೆಗಳು ಬರದಂತೆ ತಡೆಯಬಹುದು' ಎಂದರು.

ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಜಿಲ್ಲೆಯಲ್ಲಿ ಎಚ್‌ಪಿವಿ ಲಸಿಕಾಕರಣ ಕಾರ್ಯಕ್ರಮ ಕೈಗೊಳ್ಳಲಾಗಿದೆ. ಅಭಿಯಾನದಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 14ರಿಂದ 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಲಸಿಕೆ ನೀಡಲಾಗುತ್ತಿದೆ. ಜಿಲ್ಲೆಯ ಎಲ್ಲಾ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಉಚಿತವಾಗಿ ಹಾಕಲಾಗುತ್ತದೆ. ಪೋಷಕರು ತಪ್ಪದೇ ತಮ್ಮ 14 ರಿಂದ 15 ವರ್ಷ ವಯೋಮಿತಿಯೊಳಗಿರುವ ಮಕ್ಕಳಿಗೆ ಲಸಿಕೆ ಹಾಕಿಸಿ ಎಂದರು. ಜಿಲ್ಲೆಯಲ್ಲಿ ಸಮೀಕ್ಷಾ ವರದಿಯಂತೆ 14 ವರ್ಷದಿಂದ 15 ವರ್ಷದೊಳಗಿನ 12097 ಹೆಣ್ಣು ಮಕ್ಕಳಿದ್ದಾರೆ. ಇವರಿಗೆ ಲಸಿಕೆ ಹಾಕುವ ನಿಟ್ಟಿನಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ ಈಗಾಗಲೇ 1803 ಮಕ್ಕಳಿಗೆ ಲಸಿಕೆ ಹಾಕಲಾಗಿದೆ. ಇನ್ನುಳಿದ ಮಕ್ಕಳಿಗೆ ಕೂಡ ತಪ್ಪದೇ ಲಸಿಕೆ ಹಾಕಿಸಿ ಶೇಕಡ 100 ರಷ್ಟು ಪ್ರಗತಿ ಸಾಧಿಸಿ ಎಂದು ಅಧಿಕಾರಿಗಳಿಗೆ ಡಿಸಿ ಸೂಚಿಸಿದರು.

**ಎಚ್.ಪಿ.ವಿ ಲಸಿಕೆಗಳು ಸುರಕ್ಷಿತವೇ:** ಹೌದು. ಎಲ್ಲಾ ಲಸಿಕೆಗಳಂತೆ, ಲಸಿಕೆಗಳ ಸುರಕ್ಷತೆ ಮತ್ತು ಪರಿಣಾಮಕಾರಿತ್ವವನ್ನು ಬಹಳ ಎಚ್ಚರಿಕೆಯಿಂದ ಮೇಲ್ವಿಚಾರಣೆ ಮಾಡಲಾಗುತ್ತದೆ. ಅಧ್ಯಯನಗಳು HPV ಲಸಿಕೆಗಳ ಸುರಕ್ಷತೆ ಮತ್ತು ಪರಿಣಾಮಕಾರಿತ್ವವನ್ನು ಪ್ರದರ್ಶಿಸಿವೆ. 2006 ರಲ್ಲಿ ಪರವಾನಗಿ ಪಡೆದ ನಂತರ, 50 ಕೋಟಿಗೂ ಹೆಚ್ಚು ಡೋಸ್ಗಳ HPV ಲಸಿಕೆಗಳನ್ನು ವಿತರಿಸಲಾಗಿದೆ. ಪರವಾನಗಿ ನಂತರದ ಕಣ್ಗಾವಲು ಅನಾಫಿಲ್ಯಾಕ್ಸಿಸ್ನ ಅಪರೂಪದ ವರದಿಗಳನ್ನು ಹೊರತುಪಡಿಸಿ ಇಲ್ಲಿಯವರೆಗೆ ಯಾವುದೇ ಗಂಭೀರ ಸುರಕ್ಷತಾ ಸಮಸ್ಯೆಗಳನ್ನು ಪತ್ತೆಹಚ್ಚಿಲ್ಲ.

**ಎಚ್.ಪಿ.ವಿ ಲಸಿಕೆ ಹೇಗೆ ಕೆಲಸ ಮಾಡುತ್ತದೆ:** ಇತರ ಯಾವುದೇ ಲಸಿಕೆಯಂತೆ, HPV ಲಸಿಕೆ (ವೈರಸ್ ತರಹದ ಕಣಗಳು –VLP ಗಳು), ಒಮ್ಮೆ ಪರಿಚಯಿಸಲ್ಪಟ್ಟ ನಂತರ ಪ್ರತಿರಕ್ಷಣಾ ಪ್ರತಿಕ್ರಿಯೆಯನ್ನು ಪ್ರಚೋದಿಸುತ್ತದೆ, ನಿರ್ದಿಷ್ಟ ಕ್ಯಾನ್ಸರ್–ಉಂಟುಮಾಡುವ HPV ಪ್ರಕಾರಗಳಿಂದ ಭವಿಷ್ಯದ ಸೋಂಕಿನಿಂದ ರಕ್ಷಿಸುವ ಪ್ರತಿಕಾಯಗಳನ್ನು ಸೃಷ್ಟಿಸುತ್ತದೆ.

**ಎಚ್.ಪಿ.ವಿ ಲಸಿಕೆಗಳು ಎಷ್ಟು ಪರಿಣಾಮಕಾರಿ:** ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವಲ್ಲಿ 93–100% ರಷ್ಟು, HPV ಲಸಿಕೆಗಳು ಹೆಚ್ಚು ರೋಗನಿರೋಧಕ ಶಕ್ತಿಯನ್ನು ಹೊಂದಿವೆ. ಲಸಿಕೆಗೆ ಸೀರಮ್ ಶಾಸ್ತ್ರದ ಪ್ರತಿಕ್ರಿಯೆಯು ನೈಸರ್ಗಿಕ ಸೋಂಕಿನ ನಂತರದ ಪ್ರತಿಕ್ರಿಯೆಗಿಂತ ಹೆಚ್ಚು ಬಲವಾಗಿರುತ್ತದೆ.

**ಎಚ್.ಪಿ.ವಿ ಲಸಿಕೆ ಎಲ್ಲಿ ಹಾಕಿಸಬೇಕು:** ಜಿಲ್ಲೆಯ ಎಲ್ಲಾ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಉಚಿತವಾಗಿ ಹಾಕಲಾಗುತ್ತದೆ. ಪೋಷಕರು ತಪ್ಪದೇ ತಮ್ಮ 14 ರಿಂದ 15 ವರ್ಷ ವಯೋಮಿತಿಯೊಳಗಿರುವ ಮಕ್ಕಳಿಗೆ ಲಸಿಕೆ ಹಾಕಿಸಿ. ಸಭೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಲಕ್ಷ್ಮಾ ಕೃಷ್ಣ ರೆಡ್ಡಿ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ, ಸೀಮಾ ಮಾಬಳೆ, ಜಿಲ್ಲಾ ಕಾರ್ಯಕ್ರಮಾಧಿಕಾರಿ ಡಾ. ನಾಗೇಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ವಿಜಯಪುರ ಪುರಸಭೆ ಹರಾಜು ಭರ್ಜರಿ ಯಶಸ್ಸು

ವಿಜಯಪುರ

ಪಟ್ಟಣದಲ್ಲಿನ ಮರಳು, ಕಲ್ಲು, ಎಂ.ಸ್ಯಾಂಡ್, ಕಲ್ಲು ಮಾರಾಟ, ಬಸ್ ಸ್ಟ್ಯಾಂಡ್ ಶುಲ್ಕ ವಸೂಲಿ, ವಾರದ ಸಂತೆ ಶುಲ್ಕ ವಸೂಲಿಯನ್ನು ಪುರಸಭೆಯ ಆವರಣದಲ್ಲಿ, ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಅವರ ಅಧ್ಯಕ್ಷತೆಯಲ್ಲಿ ಬಹಿರಂಗ ಹರಾಜು ನಡೆಸಲಾಯಿತು.

ಮರಳು, ಕಲ್ಲು, ಎಂ.ಸ್ಯಾಂಡ್ ಮತ್ತು ಕಲ್ಲು ಮಾರಾಟದ ಹರಾಜನ್ನು 3,19,780, ಬಸ್ ಸ್ಟ್ಯಾಂಡ್ ಶುಲ್ಕ ವಸೂಲಿ 4,17,720, ವಾರದ ಸಂತೆ ಶುಲ್ಕ ವಸೂಲಾತಿಯನ್ನು 4,95,600 ಒಟ್ಟು 12 ಲಕ್ಷ 33 ಸಾವಿರದ 100 ರೂಪಾಯಿಗೆ ಹರಾಜು ಮಾಡಿದರು.

ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಮಾತನಾಡಿ, ಹರಾಜಿನಲ್ಲಿ ಪಡೆದುಕೊಂಡಿರುವವರು, ವ್ಯಾಪಾರಿಗಳಿಂದ ಸಾರ್ವಜನಿಕರಿಂದ ಬಲವಂತವಾಗಿ ವಸೂಲಿ ಮಾಡುವಂತಿಲ್ಲ. ಇದಕ್ಕೆ ಪುರಸಭೆ ಅವಕಾಶ ನೀಡುವುದಿಲ್ಲ. ಈಗಾಗಲೇ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಕೇಳಿ ಬರುತ್ತಿದ್ದ ಹಿನ್ನೆಲೆಯಲ್ಲಿ, ದಿನವಹಿ ಮಾರುಕಟ್ಟೆಯ ಸುಂಕವನ್ನು ರದ್ದುಗೊಳಿಸಿದ್ದೇವೆ. ಪುರಸಭೆಯಿಂದ ನಿಗದಿಗೊಳಿಸಿರುವ ದರಕ್ಕಿಂತ ಹೆಚ್ಚಿನ ದರವನ್ನು ಪಡೆಯುವಂತಿಲ್ಲ. ಹಾಗೇನಾದರೂ ಪಡೆದುಕೊಳ್ಳುವುದು ಕಂಡು ಬಂದರೆ, ಅಂತಹ ಗುತ್ತಿಗೆದಾರರ ಹಣವನ್ನು ಮುಟ್ಟುಗೋಲು ಹಾಕಿಕೊಂಡು ಟೆಂಡರ್ ರದ್ದುಗೊಳಿಸಲಾಗುತ್ತದೆ. ಪುರಸಭೆಗೆ ಆದಾಯದ ಜೊತೆಗೆ ಸಾರ್ವಜನಿಕರ ಹಿತ ಕಾಪಾಡುವುದು ಮುಖ್ಯವಾಗಿದೆ ಎಂದು ಸೂಚನೆ ನೀಡಿದರು.

ಮುಖ್ಯಾಧಿಕಾರಿ ವೈ.ಎನ್. ಸತ್ಯನಾರಾಯಣ, ಪುರಸಭೆ ಸದಸ್ಯ ವಿ.ನಂದಕುಮಾರ್, ಶಿಲ್ಪಾಅಜಿತ್, ಸೇರಿದಂತೆ ಅಧಿಕಾರಿಗಳು ಹಾಜರಿದ್ದರು.

# ಬೌದ್ಧ ಭಿಕ್ಕು ಆನಂದ ಥೇರರಿಗೆ ಗೌರವ ಡಾಕ್ಟರೇಟ್



ಕೆಜಿಎಫ್

ಬೆಂಗಳೂರು ಮಹಾಬೋಧಿ ಸಮಾಜದ ಕಾರ್ಯದರ್ಶಿ ಪೂಜ್ಯ ಬೌದ್ಧ ಭಿಕ್ಕು ಆನಂದ ಥೇರ ಅವರಿಗೆ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು ಪ್ರತಿಷ್ಠಿತ "ಸಾಹಿತ್ಯ ವಾರಿಧಿ" (ಡಿ.ಲಿಟ್) ಗೌರವ ಡಾಕ್ಟರೇಟ್ ಪದವಿಯನ್ನು ನೀಡಿ ಗೌರವಿಸಿದೆ.

ನಗರದ ಜ್ಞಾನಜ್ಯೋತಿ ಸಭಾಂಗಣದಲ್ಲಿ ನಡೆದ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಭಿಕ್ಕು ಆನಂದ ಥೇರ ಅವರಿಗೆ ಈ ಅತ್ಯುನ್ನತ ಪದವಿಯನ್ನು ಪ್ರದಾನ ಮಾಡಿದರು.

**ಅಸಾಧಾರಣ ಸಾಧನೆಗೆ ಸಂದ ಗೌರವ:** ಸಾಹಿತ್ಯ, ಕಲೆ ಹಾಗೂ ಮಾನವಿಕ ಶಾಸ್ತ್ರಗಳಲ್ಲಿ ಭಿಕ್ಕು ಆನಂದ ಥೇರ ಅವರು ಮಾಡಿರುವ ಅಸಾಧಾರಣ ಸಾಧನೆಯನ್ನು ಗುರುತಿಸಿ ಈ ಪದವಿ ನೀಡಲಾಗಿದೆ. ಬೆಳಗಾವಿ ಮೂಲದವರಾದ ಇವರು ಪಾಲಿ, ಪ್ರಾಕೃತ ಹಾಗೂ ಸಂಸ್ಕೃತ ಭಾಷೆಗಳಲ್ಲಿ ಅಪ್ರತಿಮ ಪಾಂಡಿತ್ಯ ಹೊಂದಿದ್ದಾರೆ. ಮೈಸೂರು ವಿಶ್ವವಿದ್ಯಾಲಯದಲ್ಲಿ ಸ್ನಾತಕೋತ್ತರ ಪದವಿ ಪಡೆದ ನಂತರ, ಬೌದ್ಧ ದೀಕ್ಷೆ ಸ್ವೀಕರಿಸಿ ಕಳೆದ ನಾಲ್ಕು ದಶಕಗಳಿಂದ ಮಹಾಬೋಧಿ ಸಮಾಜದ ಮೂಲಕ ಶಿಕ್ಷಣ ಮತ್ತು ಸಮಾಜ ಸೇವೆಯಲ್ಲಿ ನಿರಂತರವಾಗಿ ತೊಡಗಿಸಿಕೊಂಡಿದ್ದಾರೆ.

**ಜಾಗತಿಕ ಮಟ್ಟದಲ್ಲಿ ಜ್ಞಾನ ಪ್ರಸಾರ:**

**ತ್ರಿಪಿಟಕ ಅನುವಾದ:** ಪ್ರಸ್ತುತ 32 ಸಂಪುಟಗಳ ಬೃಹತ್ 'ತ್ರಿಪಿಟಕ'ವನ್ನು ಕನ್ನಡಕ್ಕೆ ಅನುವಾದಿಸುವ ಮಹತ್ಕಾರ್ಯದಲ್ಲಿ ಅವರು ನಿರತರಾಗಿದ್ದಾರೆ.

**ಅಂತರರಾಷ್ಟ್ರೀಯ ಸೇವೆ:** ಜರ್ಮನಿ, ಫ್ರಾನ್ಸ್, ಆಸ್ಟ್ರೇಲಿಯಾ ಸೇರಿದಂತೆ 20ಕ್ಕೂ ಹೆಚ್ಚು ದೇಶಗಳಲ್ಲಿ ಪಾಲಿ ಮತ್ತು ಸಂಸ್ಕೃತ ಭಾಷೆಗಳ ಪ್ರಸರಣಕ್ಕಾಗಿ ಕೆಲಸ ಮಾಡಿದ್ದಾರೆ.

**ಯೋಗ ಜ್ಞಾನ:** ಯೋಗದಲ್ಲಿ ವಿಶೇಷ ಜ್ಞಾನ ಹೊಂದಿರುವ ಅವರು ಸಾವಿರಾರು ವಿದ್ಯಾರ್ಥಿಗಳನ್ನು ಯೋಗ ಪ್ರವೀಣರನ್ನಾಗಿ ರೂಪಿಸಿದ್ದಾರೆ.

ಗೌರವ ಡಾಕ್ಟರೇಟ್ ಪಡೆದ ಭಿಕ್ಕು ಆನಂದ ಥೇರರನ್ನು ಕೆಜಿಎಫ್‌ನ ಅಶೋಕ ದಮ್ಮ ಧೂತ ಬುದ್ಧ ಸಂಘದ ಅಧ್ಯಕ್ಷ ಡಾ. ಪೂರ್ಣೇಶನ್ ರಾಜು, ಉಪಾಸಕ ಡಾ. ಆರ್. ಪ್ರಭುರಾಂ ಹಾಗೂ ವಿವಿಧ ಸಂಘ–ಸಂಸ್ಥೆಗಳ ಮುಖಂಡರು ಅಭಿನಂದಿಸಿ, ಗೌರವ ಸಲ್ಲಿಸಿದ್ದಾರೆ.

# ಸರ್ಕಾರಿ ಶಾಲೆಯಲ್ಲಿ ಎರಡು ಹೆಚ್ಚುವರಿ ಕೊಠಡಿಗಳ ಉದ್ಘಾಟನೆ



ಕೆ.ಆರ್.ಪುರ

ಶಿಕ್ಷಣ ಕ್ಷೇತ್ರದಲ್ಲಿ ಮೂಲಸೌಕರ್ಯವನ್ನು ಸುಧಾರಿಸುವ ಮಹತ್ವದ ಹೆಜ್ಜೆಯಾಗಿ ಬೆಂಗಳೂರು ಪೂರ್ವ ತಾಲೂಕಿನ ಕೆ ಆರ್ ಪುರಂ ಹೋಬಳಿ ವ್ಯಾಪ್ತಿಯ ಕೊಡಿಗೇಹಳ್ಳಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಎರಡು ಹೆಚ್ಚುವರಿ ತರಗತಿ ಕೊಠಡಿಗಳನ್ನು ಉದ್ಘಾಟಿಸಲಾಯಿತು.

ಕೊಠಡಿ ಉದ್ಘಾಟನೆ ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದ ಶಾಲಾಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿ ಅಧ್ಯಕ್ಷರು–ಡೆಂಟ್ ಮತ್ತು ಕೊಡಿಗೇಹಳ್ಳಿ ಮತ್ತು ಲೇಔಟ್‌ಗಳ ಸಂಘದ ಅಧ್ಯಕ್ಷ ಎಚ್ ವೆಂಕಟೇಶ್ ರವರು ಶಾಲೆಯಲ್ಲಿ ಹೆಚ್ಚುವರಿ ತರಗತಿ ಕೊಠಡಿಗಳ ಅಗತ್ಯವನ್ನು ತಿಳಿಸಿದರು.

ಪ್ರಸ್ತುತ ಸುಮಾರು 220 ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ ಮತ್ತು ಶಾಲೆಯು ಇತ್ತೀಚೆಗೆ ಕೆಳ ಪ್ರಾಥಮಿಕದಿಂದ ಉನ್ನತ ಪ್ರಾಥಮಿಕಕ್ಕೆ ಮೇಲ್ದರ್ಜೆಗೇರಿದೆ, ತರಗತಿ ಕೊಠಡಿಗಳ ಕೊರತೆಯಿದೆ. ಇನ್ನೂ ಮೂರು ತರಗತಿ ಕೊಠಡಿಗಳನ್ನು ಮಂಜೂರು ಮಾಡುವಂತೆ ಸರ್ಕಾರವನ್ನು ಒತ್ತಾಯಿಸುತ್ತೇವೆ ಎಂದು ಅವರು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಹಿರಿಯ ನ್ಯಾಯವಾದಿ ಪ್ರಭಾಕರ್, ರಾಜ್ಯ ಯುವ ಕಾಂಗ್ರೆಸ್ ಮಾಜಿ ಕಾರ್ಯದರ್ಶಿ ಹಾಗೂ ಬೆಂಗಳೂರು ಸೆಂಟ್ರಲ್ ಕಾಂಗ್ರೆಸ್ ಅಸಂಘಟಿತ ಕಾರ್ಮಿಕರ ಘಟಕದ ಮಾಜಿ ಅಧ್ಯಕ್ಷ ವಿವೇಕ್ ಅವರು ನೀಡಿದ ಕೊಡುಗೆಯನ್ನು ಶ್ಲಾಘಿಸಿದರು.

# ಗಡಿಪಾರಾಗಿದ್ದ ಆರೋಪಿ ಮತ್ತೆ ಪೊಲೀಸರ ವಶಕ್ಕೆ



ಕೆಜಿಎಫ್

ಜಿಲ್ಲೆಯಿಂದ ಗಡಿಪಾರು ಮಾಡಲಾಗಿದ್ದರೂ ನಿಯಮ ಉಲ್ಲಂಘಿಸಿ ಕಾನೂನು ಬಾಹಿರವಾಗಿ ನಗರದಲ್ಲಿ ಸಂಚರಿಸುತ್ತಿದ್ದ ರೌಡಿ ಆಸಾಮಿಯೊಬ್ಬನನ್ನು ಆಂಡ್ರಸನ್‌ಪೇಟೆ ಪೊಲೀಸರು ಬಂಧಿಸಿದ್ದಾರೆ.

ಲೂರ್ದನಗರದ ನಿವಾಸಿ ವೈ. ವಿಕ್ರಮ್ ಅಲಿಯಾಸ್ ಕಾಣಿಕ್ ರಾಜ್ (39) ಬಂಧಿತ ರೌಡಿ ಆಸಾಮಿ. ಈತನ ಮೇಲೆ ಕೊಲೆ, ಕೊಲೆ ಯತ್ನ ಹಾಗೂ ಹಲ್ಲೆ ಸೇರಿದಂತೆ ಒಟ್ಟು ಮೂರು ಗಂಭೀರ ಪ್ರಕರಣಗಳು ದಾಖಲಾಗಿದ್ದವು.

**ಘಟನೆಯ ಹಿನ್ನೆಲೆ:** ನಿರಂತರವಾಗಿ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗುತ್ತಿದ್ದ ವಿಕ್ರಮ್‌ನನ್ನು ರೌಡಿ ಚಟುವಟಿಕೆ ನಿಯಂತ್ರಿಸುವ ಸಲುವಾಗಿ ಕರ್ನಾಟಕ ಪೊಲೀಸ್ ಅಧಿನಿಯಮ 1963 ಕಲಂ 55(ಎ) ಅಡಿಯಲ್ಲಿ ಕೆಜಿಎಫ್ ಜಿಲ್ಲೆಯಿಂದ ಯಾದಗಿರಿ ಜಿಲ್ಲೆಗೆ 6 ತಿಂಗಳ ಕಾಲ ಗಡಿಪಾರು ಮಾಡಿ ಆದೇಶಿಸಲಾಗಿತ್ತು. ಆದರೆ, ಈತನು ಆದೇಶ ಉಲ್ಲಂಘಿಸಿ ಯಾದಗಿರಿಯಿಂದ ನಾಪತ್ತೆಯಾಗಿದ್ದ ಬಗ್ಗೆ ಅಲ್ಲಿನ ಪೊಲೀಸರು ಮಾಹಿತಿ ನೀಡಿದ್ದರು.

**ಪೊಲೀಸ್ ಕಾರ್ಯಾಚರಣೆ:** ಯಾದಗಿರಿ ಪೊಲೀಸರ ಮಾಹಿತಿಯ ಮೇರೆಗೆ ತಕ್ಷಣ ಕಾರ್ಯಪ್ರವೃತ್ತರಾದ ಆಂಡ್ರಸನ್‌ಪೇಟೆ ಪೊಲೀಸರು, ರೌಡಿ ಆಸಾಮಿ ವಿಕ್ರಮ್ ತನ್ನ ವಾಸದ ಮನೆಯ ಬಳಿ ಇರುವುದನ್ನು ಪತ್ತೆ ಹಚ್ಚಿ ವಶಕ್ಕೆ ಪಡೆದಿದ್ದಾರೆ. ಈತನ ವಿರುದ್ಧ ಗಡಿಪಾರು ಆದೇಶ ಉಲ್ಲಂಘಿಸಿದ್ದಕ್ಕಾಗಿ ಕರ್ನಾಟಕ ಪೊಲೀಸ್ ಅಧಿನಿಯಮ ತಿದ್ದುಪಡಿ ಕಾಯ್ದೆಯಡಿ ಹೊಸ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಲಾಗಿದೆ.

**ತಂಡಕ್ಕೆ ಶ್ಲಾಘನೆ:** ಡಿವೈಎಸ್‌ಪಿ ವಿ. ಲಕ್ಷ್ಮಯ್ಯ ಹಾಗೂ ಸಿಪಿಐ ಅನಿಲ್ ಕುಮಾರ್ ಎಂ.ಎಸ್. ಅವರ ಮಾರ್ಗದರ್ಶನದಲ್ಲಿ ಪಿಎಸ್‌ಐ ಮಂಜುನಾಥ ಬಿ., ಸಿಬ್ಬಂದಿಗಳಾದ ರಮೇಶ್ ಜಂಬಗಿ ಮತ್ತು ಲೋಕೇಶ್ ಒಳಗೊಂಡ ತಂಡವು ಈ ಕಾರ್ಯಾಚರಣೆ ನಡೆಸಿದೆ. ತಂಡದ ಈ ಕ್ಷಿಪ್ರ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಶ್ಲಾಘಿಸಿದ್ದಾರೆ.

# ಅದ್ದೂರಿ ಅಗ್ನಿ ಕೊಂಡೋತ್ಸವ

ಕನಕಪುರ

ನಗರದ ಆರಾಧ್ಯ ಶಕ್ತಿ ದೇವತೆಗಳಾದ ಶ್ರೀ ಕೆಂಕೇರಮ್ಮ ಹಾಗೂ ಶ್ರೀ ಬಾಣಂತ ಮಾರಮ್ಮ ದೇವಿಯ ಅಗ್ನಿ ಕೊಂಡೋತ್ಸವವು ಬುಧವಾರ ಬೆಳಿಗ್ಗೆ ಸಾವಿರಾರು ಭಕ್ತಾದಿಗಳ ಸಮ್ಮುಖದಲ್ಲಿ ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ನೇರವೇರಿತು.

ಕೊಂಡೋತ್ಸವದ ಅಂಗವಾಗಿ ಮಂಗಳವಾರ ಸಂಜೆ ನಗರದ ಹಲಸಿನ ಮರದ ದೊಡ್ಡಿಯಲ್ಲಿ ನೆಲಸಿರುವ ಶ್ರೀ ಕೆಂಕೇರಮ್ಮ ಹಾಗೂ ಮೇಗಳಬೀದಿಯ ಶ್ರೀ ಬಾಣಂತ ಮಾರಮ್ಮ ದೇವಾಲಯಗಳ ವ್ಯಾಪ್ತಿಯಲ್ಲಿ 'ಎಳವಾರ' ಕಾರ್ಯಕ್ರಮ ನಡೆಯಿತು. ಕೊಂಡಕ್ಕೆ ಬೇಕಾದ ಕಟ್ಟಿಗೆಗಳನ್ನು ಹೊತ್ತ ಬಂಡಿಗಳನ್ನು ವಿವಿಧ ಪೂಜಾ ಕುಣಿತ ಹಾಗೂ ವಾದ್ಯಗೋಷ್ಠಿಗಳೊಂದಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಮಾಡಲಾಯಿತು. ಹಾದಿಯುದ್ದಕ್ಕೂ ಭಕ್ತರು ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು.

ಬುಧವಾರ ಬೆಳಿಗ್ಗೆ ಸಂಪ್ರದಾಯದಂತೆ ಮಳಗಾಳಿನ ಸೋಪಾನ ಕಟ್ಟೆಯಿಂದ ಶ್ರೀ ಕೆಂಕೇರಮ್ಮ ದೇವರಿಗೆ ಹಾಗೂ ಸ್ಲೀಪರ್ ಕಾಲೋನಿಯಿಂದ ಬಾಣಂತ ಮಾರಮ್ಮ ದೇವರಿಗೆ ಗಂಗಾ ಪೂಜೆ ನೆರವೇರಿಸಲಾಯಿತು. ಬಳಿಕ ದೇವತೆಗಳ ಉತ್ಸವ ಮೂರ್ತಿಗಳನ್ನು ಮಂಗಳವಾದ್ಯಗಳೊಂದಿಗೆ ಮೆರವಣಿಗೆಯ ಮೂಲಕ ದೇವಾಲಯದ ಆವರಣಕ್ಕೆ ಕರೆತರಲಾಯಿತು.

ಸಾವಿರಾರು ಭಕ್ತರ 'ಗೋವಿಂದ... ಗೋವಿಂದ...' ನಾಮಸ್ಮರಣೆಯ ನಡುವೆ ದೇವಾಲಯದ ಪ್ರಧಾನ ಅರ್ಚಕರು ಅತ್ಯಂತ ನಿಷ್ಠೆಯಿಂದ ಅಗ್ನಿ ಕೊಂಡವನ್ನು ಹಾಯುವ ಮೂಲಕ ಕೊಂಡೋತ್ಸವಕ್ಕೆ ಚಾಲನೆ ನೀಡಿದರು. ಅವರ ಬೆನ್ನಲ್ಲೇ ನೂರಾರು ಭಕ್ತರು ಕೊಂಡ ಹಾಯ್ದು ತಮ್ಮ ಹರಕೆ ತೀರಿಸಿದರು.

ಜಾತ್ರೆಯ ಪ್ರಯುಕ್ತ ನಗರದಾದ್ಯಂತ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ಭಕ್ತಾದಿಗಳಿಗೆ ಅನ್ನದಾನ ಹಾಗೂ ತಂಪು ಪಾನೀಯದ ವ್ಯವಸ್ಥೆ ಮಾಡಲಾಗಿತ್ತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆಯಿಂದ ಬಿಗಿ ಬಂದೋಬಸ್ತ್ ಕಲ್ಪಿಸಲಾಗಿತ್ತು.



# 23ರಿಂದ ಜಾನುವಾರುಗಳಿಗೆ ಉಚಿತ ಕಾಲುಬಾಯಿ ಲಸಿಕೆ ಅಭಿಯಾನ

ದೇವನಹಳ್ಳಿ

"ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಜಾನುವಾರುಗಳ ಆರೋಗ್ಯ ರಕ್ಷಣೆಗಾಗಿ ಇದೇ 23 ರಿಂದ ಒಂದು ತಿಂಗಳ ಕಾಲ ಉಚಿತ ಕಾಲುಬಾಯಿ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ರೈತರು ತಮ್ಮ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕಿಸುವ ಮೂಲಕ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು," ಎಂದು ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಅವರು ತಿಳಿಸಿದರು.

ಜಿಲ್ಲಾಡಳಿತ ಭವನದಲ್ಲಿ ನಡೆದ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 9ನೇ ಸುತ್ತಿನ ಲಸಿಕಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪ್ರಸ್ತುತ ಗಣತಿಯಂತೆ 1,31,986 ದನಗಳು ಹಾಗೂ 9,090 ಎಮ್ಮೆಗಳು ಸೇರಿ ಒಟ್ಟು 1,41,076 ಜಾನುವಾರುಗಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಏಪ್ರಿಲ್ 23 ರಿಂದ ಮೇ 22 ರವರೆಗೆ ನಡೆಯಲಿರುವ ಈ ಅಭಿಯಾನದಲ್ಲಿ ಶೇ. 100 ರಷ್ಟು ಪ್ರಗತಿ ಸಾಧಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ತಂಡಗಳ ರಚನೆ:** ಜಿಲ್ಲೆಯನ್ನು ಒಟ್ಟು 1,687 ಬ್ಲಾಕ್‌ಗಳನ್ನಾಗಿ ವಿಂಗಡಿಸಲಾಗಿದ್ದು, 199 ತಂಡಗಳಲ್ಲಿ ಒಟ್ಟು 333 ಲಸಿಕೆದಾರರು ಕಾರ್ಯನಿರ್ವಹಿಸಲಿದ್ದಾರೆ.

**ಸಮಯ:** ಪ್ರತಿದಿನ ಬೆಳಿಗ್ಗೆ 5.30 ರಿಂದ 11.00 ಗಂಟೆಯವರೆಗೆ ಸಿಬ್ಬಂದಿಗಳು ರೈತರ ಮನೆ ಬಾಗಿಲಿಗೆ ಅಥವಾ ಗ್ರಾಮಗಳಿಗೆ ಭೇಟಿ ನೀಡಲಿದ್ದಾರೆ.

**ಪಾರದರ್ಶಕತೆ:**

ಪ್ರತಿ ರಾಸಿಗೆ ಪ್ರತ್ಯೇಕವಾದ ಸಿರಿಂಜ್ ಮತ್ತು ನೀಡಲ್ ಬಳಸಿ ಲಸಿಕೆ ಹಾಕಲು ಕ್ರಮ ವಹಿಸಲಾಗಿದೆ. ಈಗಾಗಲೇ ಜಿಲ್ಲೆಗೆ 1,53,500 ಡೋಸ್ ಲಸಿಕೆ ಲಭ್ಯವಿದೆ.

**ರೈತರಿಗೆ ಸಲಹೆ ಮತ್ತು ಮನವಿ:**

ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ. ಜಗದೀಶ್ ಕುಮಾರ್ ಮಾತನಾಡಿ, "3 ತಿಂಗಳ ಮೇಲ್ಪಟ್ಟ ಎಲ್ಲಾ ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸಬೇಕು. ಕರುಗಳಿಗೆ ಮೊದಲ ಲಸಿಕೆಯ 21 ದಿನಗಳ ನಂತರ ಬೂಸ್ಟರ್ ಡೋಸ್ ಕೊಡಿಸುವುದು ಅವಶ್ಯಕ. ಅಭಿಯಾನದ ಕುರಿತು ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಈಗಾಗಲೇ ಜಾಗೃತಿ ಮೂಡಿಸಲಾಗಿದೆ," ಎಂದರು. ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರಮೇಶ್, ಮುಖ್ಯ ಪಶುವೈದ್ಯಾಧಿಕಾರಿಗಳಾದ ಡಾ. ನಾರಾಯಣಸ್ವಾಮಿ, ಡಾ. ಸದಾಶಿವಮೂರ್ತಿ, ಡಾ. ಮಂಜುನಾಥ್ ಎಂ.ಕೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿನಿಯರಿಗೆ ಪೋಕ್ಸೋ ಕಾಯಿದೆ ಅರಿವು ಕಾರ್ಯಕ್ರಮ

ವಿಜಯಪುರ

18 ವರ್ಷದೊಳಗಿನ ಮಕ್ಕಳ ಮೇಲೆ, ಲೈಂಗಿಕ ದೌರ್ಜನ್ಯಗಳು, ಕಿರುಕುಳ, ಅತ್ಯಾಚಾರಗಳಂತಹ ದುರ್ಘಟನೆಗಳು ನಡೆಯುತ್ತಿದ್ದು, ಇವುಗಳನ್ನು ಸಂಪೂರ್ಣವಾಗಿ ತಡೆಗಟ್ಟಬೇಕಾದರೆ, ಮಕ್ಕಳಿಗೆ ಪೋಕ್ಸೋ ಕಾಯಿದೆಯ ಕುರಿತು ಪರಿಚಯಿಸಬೇಕಾಗಿರುವ ಅನಿವಾರ್ಯತೆ ಇದೆ ಎಂದು ಸಬ್ ಇನ್ ಸ್ಪೆಕ್ಟರ್ ಸುನೀಲ್ ಹೇಳಿದರು.



ಪಟ್ಟಣದ ಪೊಲೀಸ್ ಠಾಣೆಯಲ್ಲಿ, ಪಿ.ಎಂ.ಶ್ರೀ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ 'ತೆರೆದ ಮನೆ'ಯ ಕುರಿತ ಮಾಹಿತಿಯನ್ನು ಒದಗಿಸುತ್ತಾ ಮಾತನಾಡಿದರು.

ಮಕ್ಕಳಿಗೆ ರಕ್ಷಣೆ, ಭದ್ರತೆ, ಹಾಗೂ ನ್ಯಾಯ ಒದಗಿಸುವುದರ ಜೊತೆಗೆ ಅವರಲ್ಲಿನ ಆಸಕ್ತಿ ಮತ್ತು ಹಿತ ಕಾಪಾಡುವ ಉದ್ದೇಶದಿಂದ ಪೋಕ್ಸೋ ಕಾಯಿದೆ–2012 ನ್ನು ಭಾರತ ಸರಕಾರ ಜಾರಿಗೆ ತಂದಿದೆ. ವಿದ್ಯಾರ್ಥಿಗಳಿಗೆ ಈ ಕಾಯ್ದೆಯ ಬಗ್ಗೆ 'ತೆರೆದ ಮನೆ' ಕಾರ್ಯಕ್ರಮದಡಿ ಜಾಗೃತಿ ಮೂಡಿಸಲಾಗುತ್ತಿದ್ದು, ಶಿಕ್ಷಕರು ಹಾಗೂ ಪೋಷಕರು ಹೆಚ್ಚಿನ ಕಾಳಜಿ ವಹಿಸಿ ಅವರಿಗೆ ತಿಳುವಳಿಕೆ ಮೂಡಿಸಲು ಸಹಕಾರ ನೀಡಬೇಕಿದೆ.

ಸರಕಾರಿ ಅನುದಾನಿತ ಮತ್ತು ಖಾಸಗಿ ಶಾಲೆಗಳಲ್ಲಿ ಪೋಕ್ಸೋ ಕಾಯಿದೆ ಬಗ್ಗೆ ತೆರೆದ ಮನೆ ಕಾರ್ಯಕ್ರಮದಡಿ ಜಾಗೃತಿ ಮೂಡಿಸಲಾಗುತ್ತಿದೆ. ಪೋಕ್ಸೋ ಕಾಯ್ದೆ–2012, ಮಕ್ಕಳ ರಕ್ಷಣಾ ನೀತಿ–2016 ಹಾಗೂ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾರ್ಗಸೂಚಿ ಹಾಗೂ ಇಲಾಖೆಯಿಂದ ಕಾಲಕಾಲಕ್ಕೆ ನೀಡಲಾಗಿರುವ ಪೋಕ್ಸೋ ಕಾಯ್ದೆಯ ಕುರಿತಾದ ಎಲ್ಲ ಅಂಶಗಳ ಕುರಿತು ಶಾಲೆಗಳಲ್ಲಿ ಪ್ರಾರ್ಥನಾ ಸಮಯದಲ್ಲಿ, ಬಿಡುವಿನ ವೇಳೆಯಲ್ಲಿ, ಸಂಧರ್ಭಾನುಸಾರ ಬೋಧನಾ ಅವಧಿಗಳಲ್ಲಿ, ನಾನಾ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ, ರಾಷ್ಟ್ರೀಯ ಹಬ್ಬಗಳ ಸಂಧರ್ಭಗಳಲ್ಲಿ ವಿದ್ಯಾರ್ಥಿಗಳಿಗೆ, ಪೋಷಕರ ಸಭೆಗಳಲ್ಲಿ, ತಾಯಂದಿರ ಸಭೆಗಳಲ್ಲಿ, ಸಮುದಾಯದತ್ತ ಶಾಲೆ ಕಾರ್ಯಕ್ರಮಗಳಲ್ಲಿ ಅವರಿಗೆ ತಿಳಿಸಿಕೊಡುವ ಕೆಲಸವಾಗಬೇಕು ಎಂದರು.

ಶಾಲೆಯ ಮುಖ್ಯಶಿಕ್ಷಕಿ ಎನ್.ಸುಜಾತಮ್ಮ ಮಾತನಾಡಿ, ಮಕ್ಕಳ ಹಕ್ಕುಗಳ ಬಗ್ಗೆ, ಗುಡ್ ಟಚ್, ಬ್ಯಾಡ್ ಟಚ್ ನ ಕುರಿತು, ದಿನನಿತ್ಯ ಅವರಿಗೆ ತಿಳುವಳಿಕೆ ನೀಡಲಾಗುತ್ತಿದೆ. ವಿಶೇಷವಾಗಿ ಹೆಣ್ಣು ಮಕ್ಕಳು ತಮ್ಮ ಸ್ವಯಂ ರಕ್ಷಣೆಯ ಕುರಿತಾಗಿ ತೆಗೆದುಕೊಳ್ಳಬೇಕಾಗಿರುವ ಮುಂಜಾಗ್ರತಾ ಕ್ರಮಗಳ ಬಗ್ಗೆ ಅವರಿಗೆ ಅರಿವು ಮೂಡಿಸಲಾಗುತ್ತಿದೆ. ಪೊಲೀಸ್ ಠಾಣೆಯಲ್ಲೂ ವಿದ್ಯಾರ್ಥಿಗಳಿಗೆ ಅಗತ್ಯವಾಗಿರುವ ಮಾರ್ಗದರ್ಶನ ಕೊಡಿಸಲಾಗುತ್ತಿದೆ ಎಂದರು.

ಕಾನ್‌ಸ್ಟೆಬಲ್ ರಮೇಶ್, ಎಸ್.ಡಿ.ಎಂ.ಸಿ ಅಧ್ಯಕ್ಷ ಮಂಜುನಾಥ್, ಶಿಕ್ಷಕರಾದ ಮಂಜುಳಾ.ಎಂ, ಕುಮಾರಿ.ಎನ್, ಜಲಜಾಕ್ಷಿ, ಸೋಮಶೇಖರ್, ರಾಮರತ್ನಮ್ಮ, ಸೂರ್ಯಪ್ರಭಾ, ರಾಮಲಕ್ಷ್ಮಮ್ಮ, ವಿಜಯಲಕ್ಷ್ಮೀಕುಲಕರ್ಣಿ ಮುಂತಾದವರು ಹಾಜರಿದ್ದರು.



ದೊಡ್ಡಬಳ್ಳಾಪುರ- ಯಲಹಂಕ ಮುಖ್ಯರಸ್ತೆಯಲ್ಲಿರುವ ಸಿಎನ್‌ಜಿ ಗ್ಯಾಸ್ ಘಟಕಕ್ಕೆ ಚಿಕ್ಕಬಳ್ಳಾಪುರ ಲೋಕಸಭಾ ಸಂಸದ ಸುಧಾಕರ್ ಅವರು ಭೇಟಿ ನೀಡಿದ್ದರು. ಕೆಲವು ದಿನಗಳ ಹಿಂದೆಯಷ್ಟೇ ಇಲ್ಲಿರುವ ಗ್ಯಾಸ್ ಬಂಕ್ ಉದ್ಘಾಟನಾ ಕಾರ್ಯಕ್ರಮ ನಡೆದಿದ್ದು ಅಂದು ನಡೆದ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಲು ಕಾರ್ಯನಿಮಿತ್ತ ಸಾಧ್ಯವಾಗದ ಕಾರಣ ಇಂದು ಗ್ಯಾಸ್ ಘಟಕದ ಮಾಲೀಕರಾದ ನಾರಾಯಣಸ್ವಾಮಿ ಬಿ ಕೆ ಅವರ ಆಹ್ವಾನದ ಮೇರೆಗೆ ಭೇಟಿಕೊಟ್ಟು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಲೋಕಾಯುಕ್ತ ಪೊಲೀಸರಿಂದ ಅಕ್ರಮ ಆಸ್ತಿ ಪರಿಶೀಲನೆ



ಬಾಗೇಪಲ್ಲಿ

ಮಂಗಳೂರಿನಲ್ಲಿ ಔಷಧ ನಿಯಂತ್ರಣಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಬಿ.ಎನ್. ಬಾಬು ಅವರಿಗೆ ಸೇರಿದ ಎನ್ನಲಾದ ಬಾಗೇಪಲ್ಲಿ ಪಟ್ಟಣದ ಹೃದಯಭಾಗದಲ್ಲಿರುವ ವಾಣಿಜ್ಯ ಕಟ್ಟಡದ ಮೇಲೆ ಇಂದು ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ, ದಾಖಲೆಗಳನ್ನು ಪರಿಶೀಲಿಸಿದರು.

ಆದಾಯಕ್ಕಿಂತ ಹೆಚ್ಚಿನ ಆಸ್ತಿ ಗಳಿಕೆ ಆರೋಪದ ಮೇಲೆ ಬಿ.ಎನ್. ಬಾಬು ಅವರ ವಿರುದ್ಧ ಲೋಕಾಯುಕ್ತದಲ್ಲಿ ದೂರು ದಾಖಲಾಗಿತ್ತು. ಈ ಹಿನ್ನೆಲೆಯಲ್ಲಿ ರಾಜ್ಯದಾದ್ಯಂತ ಅವರಿಗೆ ಸೇರಿದ ವಿವಿಧ ಆಸ್ತಿಪಾಸ್ತಿಗಳ ಮೇಲೆ ಅಧಿಕಾರಿಗಳು ಏಕಕಾಲಕ್ಕೆ ದಾಳಿ ನಡೆಸುತ್ತಿದ್ದಾರೆ.

ಪಟ್ಟಣದ ಗಂಗಮ್ಮ ಗುಡಿ ರಸ್ತೆಯಲ್ಲಿರುವ ಅಂಚೆ ಕಚೇರಿ ಮುಂಭಾಗದಲ್ಲಿರುವ ಬಾಬು ಅವರಿಗೆ ಸೇರಿದ ಕಟ್ಟಡಕ್ಕೆ ಬೆಳ್ಳಂಬೆಳಗ್ಗೆ ಭೇಟಿ ನೀಡಿದ ಲೋಕಾಯುಕ್ತ ಪೊಲೀಸ್ ನಿರೀಕ್ಷಕರಾದ ಶಿವರಾಜಕುಮಾರ್ ಮತ್ತು ನಿರ್ಮಲ ವಿ. ಅವರ ನೇತೃತ್ವದ ತಂಡ, ಕಟ್ಟಡದ ಮೌಲ್ಯಮಾಪನ ಮಾಡಿತು.

ಕಟ್ಟಡದ ಬಾಡಿಗೆ ಹಾಗೂ ಅದರಿಂದ ಬರುವ ವರಮಾನದ ಬಗ್ಗೆ ಅಧಿಕಾರಿಗಳು ಮಾಹಿತಿ ಸಂಗ್ರಹಿಸಿದರು.

ಕಟ್ಟಡದ ವಿಸ್ತೀರ್ಣ ಹಾಗೂ ನಿರ್ಮಾಣ ವೆಚ್ಚಕ್ಕೆ ಸಂಬಂಧಿಸಿದ ಮಹತ್ವದ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ.

ಲಂಚ ಮತ್ತು ಭ್ರಷ್ಟಾಚಾರದ ಮೂಲಕ ಅಕ್ರಮ ಆಸ್ತಿ ಸಂಪಾದಿಸಿರುವ ದೂರಿನ ಅನ್ವಯ ಈ ಕಾರ್ಯಾಚರಣೆ ನಡೆದಿದ್ದು, ಇಡೀ ಪಟ್ಟಣದಲ್ಲಿ ಈ ಘಟನೆ ಚರ್ಚೆಗೆ ಕಾರಣವಾಗಿದೆ.

## ಉಚಿತ ಕಣ್ಣಿನ ಪೊರೆ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರ

ಸೊರಬ

ತಾಲ್ಲೂಕಿನ ಉಳವಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಏಪ್ರಿಲ್ 10 ರ ಬೆಳಿಗ್ಗೆ 10 ಗಂಟೆಯಿಂದ 1 ಗಂಟೆಯವರೆಗೆ ಲಯನ್ಸ್ ಕ್ಲಬ್, ಭಾರತೀಯ ವೈದ್ಯಕೀಯ ಸಂಘ ತಾಲ್ಲೂಕು ಆರೋಗ್ಯಾಧಿಕಾರಿಗಳ ಕೇಂದ್ರ ಸೊರಬ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಅಂಧತ್ವ ನಿವಾರಣ ಸಂಸ್ಥೆ ಶಿವಮೊಗ್ಗ ಮತ್ತು ರೋ ಸುಬ್ರರಾವ್ ಕಾಸರಕೋಡ್ ಮೆಮೋರಿಯಲ್ ರೋಟರಿ ಚಾರಿಟೇಬಲ್ ಆಸ್ಪತ್ರೆ ಶಿರಸಿ ಇವರುಗಳ ಸಂಯುಕ್ತಾಶ್ರಯದಲ್ಲಿ ಉಚಿತ ಕಣ್ಣಿನ ಪೊರೆ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಇದರ ಪ್ರಯೋಜನವನ್ನು ಕಣ್ಣಿನ ತೊಂದರೆಯುಳ್ಳವರು ಪಡೆದುಕೊಳ್ಳಬೇಕೆಂದು ಲಯನ್ಸ್ ಕ್ಲಬ್ ಸೊರಬ ಕೋರಿದ್ದಾರೆ. ಶಿಬಿರಕ್ಕೆ ಬರುವವರು ಆಧಾರ್, ಬಿಪಿಎಲ್, ಓಟರ್ ಐಡಿ ಜೆರಾಕ್ಸ್ ಪ್ರತಿಗಳನ್ನು ಕಡ್ಡಾಯವಾಗಿ ತರಬೇಕು. ಶಿಬಿರದಲ್ಲಿ ಶಸ್ತ್ರ ಚಿಕಿತ್ಸೆಗೆ ಆಯ್ಕೆಯಾದವರು ಮುಖ ಕ್ಷೌರ ಮಾಡಿಕೊಂಡು ಸ್ವಚ್ಛವಾದ ಬಟ್ಟೆಗಳನ್ನು ಧರಿಸಿಕೊಂಡು, ದಿನ ಬಳಕೆಯ ವಸ್ತುಗಳು, ಮೊಬೈಲ್ ಸಂಖ್ಯೆಯೊಂದಿಗೆ ಬರಬೇಕು. ಊಟ ವಸತಿ ಸಾರಿಗೆ ವ್ಯವಸ್ಥೆ ತಜ್ಞಾ ವೈದ್ಯರ ಸಲಹೆಯಂತೆ ಉಚಿತ ಲೆನ್ಸ್ ಅನ್ನು ಅಳವಡಿಸಲಾಗುತ್ತದೆ. ಕಣ್ಣಿನ ಚಿಕಿತ್ಸೆಯನ್ನು ಶಿರಸಿ ರೋಟರಿ ಚಾರಿಟೇಬಲ್ ಆಸ್ಪತ್ರೆಯಲ್ಲಿ

09/04/2026

ಭಾರತ ಸಾರಥಿ

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ನಮಗೆ ಕೊಳಚೆ ನೀರು ಬೇಡ, ಶುದ್ಧ ನೀರು ಬೇಕು: ಖಾಲಿ ಬಿಂದಿಗೆಗಳೊಂದಿಗೆ ಬೃಹತ್ ಪಾದಯಾತ್ರೆ

ಚಿಕ್ಕಬಳ್ಳಾಪುರ

"ಬೆಂಗಳೂರಿನ ಹೆಬ್ಬಾಳ-ನಾಗವಾರ ಕೆರೆಗಳಿಂದ (ಹೆಚ್.ಎನ್. ವ್ಯಾಲಿ) ಜಿಲ್ಲೆಯ ಕೆರೆಗಳಿಗೆ ಹರಿಸಲಾಗುತ್ತಿರುವ ನೀರು ವಿಷಕಾರಿಯಾಗಿದ್ದು, ಕೂಡಲೇ ಈ ನೀರನ್ನು ಮೂರನೇ ಹಂತದ ಶುದ್ಧೀಕರಣಕ್ಕೆ ಒಳಪಡಿಸಬೇಕು," ಎಂದು ಆಗ್ರಹಿಸಿ ಸಹಸ್ರಾರು ಮಂದಿ ಖಾಲಿ ಬಿಂದಿಗೆಗಳೊಂದಿಗೆ ಬೃಹತ್ ಪಾದಯಾತ್ರೆ ನಡೆಸಿದರು.

ಶ್ರೀ ಹರಿಕೃಷ್ಣ ಚಾರಿಟಬಲ್ ಟ್ರಸ್ಟ್ ಹಾಗೂ ಜೀವಜಲ ಜಾಗೃತಿ ವೇದಿಕೆಯ ಸಂಚಾಲಕ ಹರೀಶ್ ಕೆ. ರೆಡ್ಡಿ ನೇತೃತ್ವದಲ್ಲಿ ನಡೆದ ಈ



ಪಾದಯಾತ್ರೆಯಲ್ಲಿ ಸಾವಿರಾರು ರೈತರು, ಮಹಿಳೆಯರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಪಾಲ್ಗೊಂಡು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪಾದಯಾತ್ರೆಯ ನೇತೃತ್ವ ವಹಿಸಿ ಮಾತನಾಡಿದ ಹರೀಶ್ ರೆಡ್ಡಿ, "ಪ್ರಸ್ತುತ ಎರಡನೇ ಹಂತದ ಸಂಸ್ಕರಣೆಯಾಗಿ ಹರಿಯುತ್ತಿರುವ ನೀರು ಕೃಷಿಗಾಗಲಿ ಅಥವಾ ಕುಡಿಯುವುದಕ್ಕಾಗಲಿ ಯೋಗ್ಯವಲ್ಲ ಎಂದು ವಿಜ್ಞಾನಿಗಳೇ ದೃಢಪಡಿಸಿದ್ದಾರೆ. ಈ ನೀರಿನಿಂದ ಬೆಳೆದ ತರಕಾರಿಗಳು ವಿಷಕಾರಿಯಾಗುತ್ತಿವೆ. ಜಿಲ್ಲೆಯಾದ್ಯಂತ ಕಲುಷಿತ ನೀರಿನಿಂದ ಅನೇಕರು ರೋಗಗಳಿಗೆ ತುತ್ತಾಗಿ ಸಾವಿನೊಂದಿಗೆ ಹೋರಾಡುತ್ತಿದ್ದಾರೆ. ರಾಜ್ಯ ಬಜೆಟ್‌ನಲ್ಲಿ ಮೂರನೇ ಹಂತದ ಶುದ್ಧೀಕರಣ ಯೋಜನೆಯನ್ನು ಘೋಷಿಸುವಂತೆ ಒತ್ತಾಯಿಸಿದ್ದರೂ ಸರ್ಕಾರ ನಿರ್ಲಕ್ಷ್ಯ ವಹಿಸಿದೆ," ಎಂದು ಕಿಡಿಕಾರಿದರು. "ನಾವು ಈಗಾಗಲೇ ಈ ನೀರಿನ ಮಾದರಿಯನ್ನು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳಿಗೆ ಕಳುಹಿಸಿದ್ದೇವೆ. ಆದರೆ ಇದುವರೆಗೂ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಸರ್ಕಾರ ಕೂಡಲೇ 3ನೇ ಹಂತದ ಶುದ್ಧೀಕರಣ ಘಟಕ ಸ್ಥಾಪಿಸಬೇಕು ಮತ್ತು ಜಿಲ್ಲೆಗೆ ಕೃಷ್ಣಾ-ಕಾವೇರಿ ನೀರನ್ನು ನೀಡಬೇಕು. ಇಲ್ಲವಾದಲ್ಲಿ ಚಿಕ್ಕಬಳ್ಳಾಪುರ, ಕೋಲಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜನರನ್ನು ಒಗ್ಗೂಡಿಸಿ ವಿಧಾನಸೌಧಕ್ಕೆ ಮುತ್ತಿಗೆ ಹಾಕಲಾಗುವುದು," ಎಂದು ಎಚ್ಚರಿಸಿದರು.

ಪರಿಸರವಾದಿ ಚೌಡಪ್ಪ, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಜಗದೀಶಗೌಡ, ಹಳ್ಳಿ ಮಕ್ಕಳ ಸಂಘದ ರಾಜ್ಯಾಧ್ಯಕ್ಷ ವೆಂಕಟರೋಣಪ್ಪ, ದಲಿತ ಮುಖಂಡರಾದ ಡಿ.ವಿ. ನಾರಾಯಣಸ್ವಾಮಿ, ದೇವದಾಸ್, ಸುರೇಶ್ ಹಾಗೂ ಕನ್ನಡಪರ, ರೈತಪರ ಸಂಘಟನೆಗಳ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# 'ಜಿಮ್‌ಗಳು ಮತಾಂತರ ಹಾಗೂ ಲೈಂಗಿಕ ಶೋಷಣೆಯ ಕೇಂದ್ರಗಳಾಗುತ್ತಿವೆ'

ಬೆಂಗಳೂರು

ಹಿಂದೂ ಜನಜಾಗೃತಿ ಸಮಿತಿಯ ರಣರಾಗಿಣಿ ಮಹಿಳಾ ವಿಭಾಗವು ಹುಬ್ಬಳ್ಳಿಯ ಫಿಟ್ನೆಸ್ ಜಿಮ್‌ನಲ್ಲಿ ನಿರಂತರವಾಗಿ ನಡೆಯುತ್ತಿರುವ ಮಹಿಳೆಯರ ಅತ್ಯಾಚಾರ, ಮತಾಂತರ ಮತ್ತು ಲೈಂಗಿಕ ಶೋಷಣೆಯ ಆಘಾತಕಾರಿ ಪ್ರಕರಣದ ಜಿಮ್‌ಗಳಲ್ಲಿ ಮಹಿಳೆಯರ ಮೇಲಿನ ಶೋಷಣೆ, ಅತ್ಯಾಚಾರ ಹಾಗೂ ಮತಾಂತರ ಕುರಿತು ತನಿಖೆಗೆ ಅಗ್ರಹಿಸಿ ಕರ್ನಾಟಕ ರಾಜ್ಯ ಮಹಿಳಾ ಆಯೋಗಕ್ಕೆ ಮನವಿ ಸಲ್ಲಿಸಲಾಯಿತು.

ಈ ಸಂಧರ್ಭದಲ್ಲಿ ಮಾತನಾಡಿದ ರಣರಾಗಿಣಿ ಶಾಖೆಯ ಸೌ. ಭವ್ಯ ಗೌಡ ಜಿಮ್ ನಡೆಸುತ್ತಿರುವ ಸಮೀರ್ ಮುಲ್ಲಾ ಎಂಬ ಮುಸ್ಲಿಂ ಯುವಕನು ಹಿಂದೂ ಯುವತಿಯರೊಂದಿಗೆ ಸ್ನೇಹ ಬೆಳೆಸಿ, ಅವರಿಗೆ ಮದ್ಯಪಾನ ಅಥವಾ ಪಾನೀಯಗಳಲ್ಲಿ ಮದ್ದು ಬೆರಸಿ, ಅತ್ಯಾಚಾರ ನಡೆಸಿ, ಅವರ ನಗ್ನ ಫೋಟೋಗಳು, ವೀಡಿಯೊಗಳನ್ನು ತೆಗೆದು ಬ್ಲಾಕ್‌ಮೇಲ್ ಮಾಡುತ್ತಾ, ಇಸ್ಲಾಂಗೆ ಮತಾಂತರಕ್ಕೆ ಒತ್ತಾಯ ಮಾಡುತ್ತಿದ್ದಾನೆ. ತೈಸೀಮ್ ಮುಲ್ಲಾ ಈ ಘಟನೆಯ ಪ್ರಮುಖ ಸಂಚಾಲಕಿಯಾಗಿ ಕಾರ್ಯನಿರ್ವಹಿಸಿ, ಹಿಂದೂ ಯುವತಿಯರನ್ನು ತನ್ನ ಸಹೋದರನಿಗೆ ಪರಿಚಯಿಸಿ, ಅವರನ್ನು ಮೋಸದಿಂದ ಪ್ರಭಾವಿಸಿ, ಹೋಟೆಲ್ ಪಾರ್ಟಿಗಳಿಗೆ ಸೆಳೆದು ಈ ಜಾಲದಲ್ಲಿ ಸಿಲುಕಿಸುತ್ತಿದ್ದಾಳೆ ಎಂದರು.

ಪೊಲೀಸರ ತನಿಖೆಯಲ್ಲಿ ಸಮೀರ್ ಮುಲ್ಲಾನ ಮೊಬೈಲ್‌ನಲ್ಲಿ ಹಲವು ಹಿಂದೂ ಯುವತಿಯರ ಅರೆನಗ್ನ ಚಿತ್ರಗಳು ಪತ್ತೆಯಾಗಿದ್ದು, ಸದ್ಯ ಅನೇಕ



ಪೀಡಿತರು ಮುಂದೆ ಬರುತ್ತಿದ್ದಾರೆ. ಇದೇ ಜಿಮ್‌ನಲ್ಲಿ ಮತ್ತೊಬ್ಬ ಮುಸ್ಲಿಂ ಯುವಕನು ಸಹ ಇದೇ ರೀತಿಯ ವಿಧಾನವನ್ನು ಬಳಸಿಕೊಂಡು ಹಿಂದೂ ಯುವತಿಯ ಅತ್ಯಾಚಾರ ಮಾಡಿ, ಆಕೆಯ ನಗ್ನ ವಿಡಿಯೋ ಇಟ್ಟುಕೊಂಡು ನಿಖಾಹ ಮಾಡಿಕೊಳ್ಳಲು ಬಲವಂತ ಮಾಡಿದ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವುದು ಗಂಭೀರ ವಿಷಯವಾಗಿದೆ. ಅದಲ್ಲದೇ ಸಮೀರ್ ಮುಲ್ಲ ಮತ್ತೋರ್ವ ಹಿಂದೂ ಮಹಿಳೆಯ ನಗ್ನ ವಿಡಿಯೋ ಇಟ್ಟುಕೊಂಡು ಆಕೆಯಿಂದ ಸಾವಿರಾರು ಹಣ ವಸೂಲಿ ಮಾಡಿ, ಹಿಂದೂ ಮಹಿಳೆಯರನ್ನು ಹಣ ಪಡೆಯುವ ಯಂತ್ರದಂತೆ ಬಳಕೆ ಮಾಡಿ, ಐಷಾರಾಮಿ ಜೀವನ ಮಾಡುತ್ತಿದ್ದ ಎಂದು ಹೇಳಿದ್ದಾಳೆ. ಈ ಎಲ್ಲ ಪ್ರಕರಣಗಳು ಅತ್ಯಂತ ಗಂಬೀರವಾಗಿದೆ.

ಇಂತಹ ಘಟನೆಗಳು ಹಿಂದೆಯೂ ಕಂಡುಬಂದಿವೆ.

ಬೆಂಗಳೂರಿನಲ್ಲಿ ಜಿಮ್ ಟ್ರೈನರ್ ಒಬ್ಬನು ಮಹಿಳೆಯ ನಗ್ನ ಚಿತ್ರಗಳನ್ನು ಬಳಸಿಕೊಂಡು ಹಿಂದೂ ಯುವತಿಯನ್ನು ಮತಾಂತರಕ್ಕೆ ಬ್ಲ್ಯಾಕ್‌ಮೇಲ್ ಮಾಡಿದ ಘಟನೆ ನಡೆದಿದೆ. ರಾಷ್ಟ್ರಮಟ್ಟದಲ್ಲಿ ಉತ್ತರ ಪ್ರದೇಶದ ಮಿರ್ಜಾಪುರದಲ್ಲಿ ಜಿಮ್ ಜಾಲವನ್ನು ಪೊಲೀಸರು ಭೇದಿಸಿ, ಅನೇಕ ಜಿಮ್‌ಗಳನ್ನು ಸೀಲ್ ಮಾಡಿ ಆರೋಪಿಗಳನ್ನು ಬಂಧಿಸಿದ್ದಾರೆ. ಇದೇ ರೀತಿಯ ಪ್ರಕರಣಗಳು ಮಧ್ಯ ಪ್ರದೇಶ, ಗುಜರಾತ್, ಮಹಾರಾಷ್ಟ್ರ ಮತ್ತು ಪಶ್ಚಿಮ ಬಂಗಾಳದಲ್ಲಿಯೂ ವರದಿಯಾಗಿವೆ. ಸ್ಥಳೀಯವಾಗಿ ಮಂಗಳೂರು, ಉಡುಪಿ, ಶಿವಮೊಗ್ಗ ಮತ್ತು ಚಿಕ್ಕಮಗಳೂರು ಪ್ರದೇಶಗಳಲ್ಲಿ ನಿಷೇಧಿತ ಪಿಎಫ್‌ಐಗೆ ಸಂಬಂಧಿಸಿದ ಶಾಹಿನ್ ಗ್ಯಾಂಗ್ ಎಂಬ ಜಾಲವು ಇಂತಹ ಕೃತ್ಯಗಳಲ್ಲಿ ತೊಡಗಿಕೊಂಡಿರುವ ಶಂಕೆಗಳೂ ಇವೆ.

ಇದರಿಂದ ಜಿಮ್‌ಗಳು ಫಿಟ್ನೆಸ್ ಕೇಂದ್ರಗಳ ಹೆಸರಿನಲ್ಲಿ ಮಹಿಳೆಯರ ಲೈಂಗಿಕ ಶೋಷಣೆ, ಕಿರುಕುಳ, ಮತಾಂತರದ ಕೇಂದ್ರಗಳಾಗಿ ಮಾರ್ಪಟ್ಟಿರುವ ಸಮಾಜ ಘಾತಕವಾಗಿದೆ. ಟ್ರೈನರ್‌ಗಳಿಂದ ಅಸಭ್ಯ ವರ್ತನೆ, ವ್ಯಾಯಾಮದ ಸಮಯದಲ್ಲಿ ಲೈಂಗಿಕ ಕಿರುಕುಳ, ನಿರಂತರ ಅತ್ಯಾಚಾರ, ಲಕ್ಷಾಂತರ ರೂಪಾಯಿ ಹಾಗೂ ಮಹಿಳೆಯರ ಚಿನ್ನ ದೋಚುವುದು ಮತ್ತು ಮೋಸದಿಂದ ಮತಾಂತರ ಮಾಡುವಂತಹ ಘಟನೆಗಳು ನಡೆಯುತ್ತಿದೆ. ಇದು ವಿಶೇಷವಾಗಿ ಹಿಂದೂ ಯುವತಿಯರನ್ನು ಗುರಿಯಾಗಿಸಿಕೊಂಡ ಸಂಘಟಿತ ಸಂಚು ನಡೆಯುತ್ತಿದೆ. ಅದಕ್ಕಾಗಿ ನಾವು ಕೆಳಗಿನ ಬೇಡಿಕೆಗಳನ್ನು ಇಡುತ್ತಿದ್ದೇವೆ.

ಈ ಗಂಭೀರ ವಿಷಯವು ಮಹಿಳೆಯರ ಸುರಕ್ಷತೆಗೆ ಅತ್ಯಂತ ಅಪಾಯಕಾರಿಯಾಗಿದೆ. ಆದ್ದರಿಂದ ಈ ಕುರಿತು ತುರ್ತು ಕ್ರಮ ಕೈಗೊಂಡು, 7 ದಿನಗಳ ಒಳಗಾಗಿ ತೆಗುದುಕೊಂಡ ಕ್ರಮಗಳ ವರದಿ ನೀಡುವಂತೆ ಮನವಿ ಸಲ್ಲಿಸಲಾಯಿತು. ಈ ಸಂಧರ್ಭದಲ್ಲಿ ರಣರಾಗಿಣಿ ಶಾಖೆಯ ಸೌ. ಭವ್ಯ ಗೌಡ,ಅಡ್ವೋಕೇಟ್ ವೀಣಾ ಅರುಣ್, ಗೋ ರಕ್ಷಕಿ ಸೌ. ಜ್ಯೋತಿ ಟಿ ನರಸೀಪುರ, ಶ್ರೀರಾಮ ಸೇನೆ ಮಹಿಳಾ ಶಾಖೆಯ ಸೌ ಅನುಪಮ, ದುರ್ಗಾ ವಾಹಿನಿಯ ಸೌ. ಜ್ಯೋತಿ, ನಿವೇದಿತಾ ಪ್ರತಿಷ್ಠಾನದ ಸದಸ್ಯರು, ಅಡ್ವೋಕೇಟ್ ಶಕುಂತಲಾ ಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

## ರಣರಾಗಿಣಿ ಪಡೆ ಬೇಡಿಕೆಗಳು:

1.ಸಮೀರ್ ಮುಲ್ಲಾ, ತೈಸೀಮ್ ಮುಲ್ಲಾ ಮತ್ತು ಸಂಬಂಧಿತ ಜಿಮ್ ಜಾಲದ ಕುರಿತು ಸಮಗ್ರ ತನಿಖೆ ನಡೆಸಿ, ಎಲ್ಲಾ ಮೊಬೈಲ್/ ಡಿಜಿಟಲ್ ಸಾಧನಗಳನ್ನು ಪರಿಶೀಲಿಸಿ, ಇತರ ಪೀಡಿತರ ಹಾಗೂ ಶಾಹಿನ್ ಗ್ಯಾಂಗ್ ಸಂಪರ್ಕಗಳ ಬಗ್ಗೆ ಮಾಹಿತಿ ಸಂಗ್ರಹಿಸಬೇಕು.

2.ಈ ಪ್ರಕರಣಕ್ಕೆ ವಿಶೇಷ ತನಿಖಾ ದಳವನ್ನು ರಚನೆ ಮಾಡಿ, ಕೋಕಾ ಕಾಯ್ದೆ, ಪೋಸ್ಕೋ ಕಾಯ್ದೆ ಅತ್ಯಾಚಾರ, ವಸೂಲಿ, ಐಟಿ ಕಾಯ್ದೆ ಮತ್ತು ಕರ್ನಾಟಕದ ಮತಾಂತರ ವಿರೋಧಿ ಕಾಯ್ದೆಗಳಡಿ ಈಖುಖ ದಾಖಲಿಸಿ, ಆರೋಪಿಗಳನ್ನು ಕಸ್ಟಡಿಗೆ ಪಡೆದು ತ್ವರಿತ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಬೇಕು.

3.ಸಂಬಂಧಿತ ಜಿಮ್ ಅನ್ನು ಸೀಲ್ ಮಾಡಿ, ಹುಬ್ಬಳ್ಳಿ-ಧಾರವಾಡದ ಸೇರಿದಂತೆ ರಾಜ್ಯದ ಎಲ್ಲಾ ಜಿಮ್‌ಗಳಲ್ಲಿ ಟ್ರೈನರ್‌ಗಳ ಪರಿಶೀಲನೆ, ಸಿಸಿಟಿವಿ ವ್ಯವಸ್ಥೆ ಮತ್ತು ಮಹಿಳೆಯರಿಗಾಗಿ ಪ್ರತ್ಯೇಕ ವ್ಯವಸ್ಥೆಗಳಿರುವುದನ್ನು ಖಚಿತಪಡಿಸಬೇಕು.

4.ಎಲ್ಲಾ ಜಿಮ್ ಸಿಬ್ಬಂದಿಗೆ ಪೊಲೀಸ್ ಪರಿಶೀಲನೆ ಕಡ್ಡಾಯಗೊಳಿಸಿ, ಮಹಿಳಾ ವಿಭಾಗಗಳಿಗೆ ಮಹಿಳಾ ತರಬೇತುದಾರರನ್ನು ನೇಮಕ ಮಾಡಬೇಕು ಹಾಗೂ ಸಾರ್ವಜನಿಕ ಜಾಗೃತಿ ಅಭಿಯಾನಗಳನ್ನು ನಡೆಸಬೇಕು.

5.ಉತ್ತರ ಪ್ರದೇಶದಲ್ಲಿ ಕೈಗೊಂಡಿರುವಂತೆ ಶೂನ್ಯ ಸಹಿಷ್ಣುತೆ ನೀತಿಯನ್ನು ಅನುಸರಿಸಿ, ಇಂತಹ ಘಟನೆಗಳು ಮರುಕಳಿಸದಂತೆ ಕಠಿಣ ಕ್ರಮ ಕೈಗೊಳ್ಳಬೇಕು.

6.ಶೋಷಣೆಗೆ ಒಳಗಾದ ಹಿಂದೂ ಯುವತಿಯ ಗೌಪ್ಯತೆಯನ್ನು ಕಾಪಾಡಬೇಕು. ಆಕೆಗೆ ಸಂಬಂದಿತ ವಿಡಿಯೋ ಎಲ್ಲಿಯೂ ಪ್ರಚಾರವಾಗಬಾರದು. ಪ್ರಚಾರ ಮಾಡಿದವರ ಮೇಲೆ ಕಾನೂನು ಕ್ರಮ ಜರುಗಿಸಬೇಕು.

# 'ಪ್ರಜ್ಞೆಯ ಕೊರತೆಯೇ ಎಲ್ಲ ಸಮಸ್ಯೆಗೆ ಕಾರಣ'



ಬಳ್ಳಾರಿ

ಪ್ರಜ್ಞೆಯ ಕೊರತೆಯೇ ಮನುಷ್ಯನ ಎಲ್ಲಾ ಸಮಸ್ಯೆಗಳ ಮೂಲಕಾರಣ. ಸಮಾಜದಲ್ಲಿ ಪ್ರಜ್ಞಾವಂತಿಕೆ ಹಾಗೂ ಜಾಗೃತಿ ಮೂಡಿಸಲು ಗೌತಮಬುದ್ಧ ವಿವೇಕಾನಂದರಾದಿಯಾಗಿ ಎಲ್ಲಾ ಮಹಾತ್ಮರು ಶ್ರಮಿಸಿದರು ಎಂದು ಗದಗ-ವಿಜಯಪುರದ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ಸ್ವಾಮಿ ನಿರ್ಭಯಾನಂದ ಸರಸ್ವತಿಯವರು ತಿಳಿಸಿದರು.

ಇಲ್ಲಿನ ಡಾ. ರಾಜ್‌ಕುಮಾರ ರಸ್ತೆಯ ಪಾಂಚಜನ್ಯ ಸಭಾಂಗಣದಲ್ಲಿ ಆಯೋಜಿಸಿದ್ದ ವಿವೇಕ ಮಂಟಪ ಉಪನ್ಯಾಸ ಮಾಲಿಕೆಯಲ್ಲಿ ಪಾಲ್ಗೊಂಡು ಮಾತನಾಡಿ, ಮನುಷ್ಯನು ಸಮ್ಯಕ್ ಜೀವನ ನಡೆಸುವ ಸಲುವಾಗಿ ಬುದ್ಧನು ಅಷ್ಟಾಂಗ ಮಾರ್ಗವನ್ನು ಬೋಧಿಸಿದನು, ಸ್ವಾಮಿ ವಿವೇಕಾನಂದರು ಧಾರ್ಮಿಕತೆ ಹೆಸರಿನಲ್ಲಿ ನಡೆದಿರುವ ಮೌಢ್ಯತೆ ವಿರುದ್ಧ ಸಮರವನ್ನೆ ಸಾರಿದರು, ವೈಜ್ಞಾನಿಕತೆಯನ್ನು, ಪ್ರಜ್ಞಾವಂತಿಕೆಯನ್ನು ಬೆಳೆಸಿಕೊಂಡು ಶಿಸ್ತಿನ ಹಾಗೂ ವ್ಯವಸ್ಥಿತ ಜೀವನ ನಡೆಸಲು ಜನರಿಗೆ ಕರೆ ನೀಡಿದರು.

ಜಗತ್ತಿನ ಎಲ್ಲಾ ಮಹಾತ್ಮರು, ತಮ್ಮ ಬೋಧನೆಗಳನ್ನು ಕೇಳಿ ತಮಗೆ ಹೂವು ಹಣ್ಣು ನೀಡಿ ಪೂಜಿಸುವುದನ್ನು ಇಷ್ಟಪಡುವುದಿಲ್ಲ. ತಾವು ಹೇಳಿದ ಮಾರ್ಗವನ್ನು ಅನುಸರಿಸಿದಾಗ ಮಾತ್ರ ಅವರು ಸಂತೋಷಗೊಳ್ಳುತ್ತಾರೆ ಎಂದು ಸ್ವಾಮಿಜಿಯವರು ತಿಳಿಸಿದರು.

ವೀರಶೈವ ಲಿಂಗಾಯತ ಸಮಾಜದ ಹಿರಿಯ ಮುಖಂಡ ಜಗ್ರ ಗುರುಮೂರ್ತಿ ಹಾಗೂ ರಾಮಧೂತ ಕಂಪ್ಯೂರ್ಸ್ನ ಕೆ.ಎಸ್.ಬಾಬು ಅವರು ಶ್ರೀ ರಾಮಕೃಷ್ಣ ಪರಮಹಂಸ ಶ್ರೀ ಶಾರದಾ ಮಾತೆ ಹಾಗೂ ಶ್ರೀ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.



ಕಾರ್ಯಕ್ರಮಕ್ಕೆ ಮುನ್ನ ಸಂಗೀತ ಶಿಕ್ಷಕರಾದ ಬೆಳಗಲ್ಲು ಹನುಮಂತ ಹಾಗೂ ಬೆಳಗಲ್ಲು ರೇಖಾ, ಕುಮಾರಿ ಶಾರದ, ಕುಮಾರ ದಿನಕರ್ ಅವರುಗಳು ಸುಮಧುರ ಭಕ್ತಿಗೀತೆಗಳನ್ನು ಪ್ರಸ್ತುತ ಪಡಿಸಿದರು. ಹಾರ್ಮೋನಿಯಂನಲ್ಲಿ ಹೆಚ್.ತಿಪ್ಪೇಸ್ವಾಮಿ ಮುದ್ದಟನೂರು, ತಬಲಾದಲ್ಲಿ ಯೋಗೇಶ್ ಸಂಗನಕಲ್ಲು ಸಾಥ್ ನೀಡಿದರು. ಚಿಲಕರಾಯ ರ್ರಿಸ್ವಾಮಿ ಯವರು ಕಾರ್ಯಕ್ರಮ ನಿರ್ವಹಿಸಿದರು. ವಿವೇಕ ಮಂಟಪದ ಸಂಯೋಜಕರಾದ

# ಖರ್ಗೆ ವಿರುದ್ಧ ಬಿಜೆಪಿ ಯುವ ಮೋರ್ಚಾ ರಣಕಹಳೆ

ಬೆಂಗಳೂರು

ಪಂಚ ರಾಜ್ಯಗಳ ಚುನಾವಣೆಯಲ್ಲಿ ಕಾಂಗ್ರೆಸ್ ಸೋಲನ್ನು ಅರಿತು ಅದನ್ನು ಅರಗಿಸಿಕೊಳ್ಳಲಾರದೆ ಹರಾಶೆಯಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಆರ್‌ಎಸ್‌ಎಸ್ ಮತ್ತು ಬಿಜೆಪಿ ವಿರುದ್ಧ ಹೇಳಿಕೆ ನೀಡಿದ್ದಾರೆ ಎಂದು ಯುವ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಸಂದೀಪ್ ರವಿ ಆರೋಪಿಸಿದ್ದಾರೆ.

ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ತಮ್ಮ ಪಕ್ಷದ ಸೋಲನ್ನು ಸಹಿಸದೆ ಅಸ್ಸಾಂನಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಖರ್ಗೆ ಪ್ರಚೋದನಾಕಾರಿಯಾಗಿ ಮಾತನಾಡಿದ್ದಾರೆ. ಇದನ್ನು ಖಂಡಿಸಿ ಪ್ರತಿಭಟನೆ ನಡೆಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಕಡೆಗಳಲ್ಲಿ, ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದರು.

ಸ್ವಾತಂತ್ರ್ಯ ಬಂದ ನಂತರ ಹೈದರಾಬಾದ್ ನ ನಿಜಾಮರು ಭಾರತಕ್ಕೆ ಸೇರುವುದಿಲ್ಲ, ಪಾಕಿಸ್ತಾನಕ್ಕೆ ಸೇರುತ್ತೇವೆ ಎಂದು ಹೇಳಿದ್ದರು. ಆಗ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರು ದೇಶದ ಏಕೀಕರಣಕ್ಕೆ ಹೋರಾಡಿದ್ದರು. ನಿಜಾಮರ ಆಡಳಿತ ಮುಗಿಸಿ ಹೈದರಾಬಾದ್ ಪ್ರಾಂತ್ಯವನ್ನು ಭಾರತಕ್ಕೆ ಸೇರಿಸುವ ಘೋಷಣೆ ಮಾಡಿದ್ದರು. ಈ ನಡುವೆ ಭಾರತಕ್ಕೆ ಸೇರಲು ಇಚ್ಛೆಪಟ್ಟ ಗ್ರಾಮಗಳ ಜನರನ್ನು ನಿಜಾಮರು ರಜಾಕರ ಮೂಲಕ ಹಳ್ಳಿಗೆ ನುಗ್ಗಿಸಿ ಕೊಂದರು.

ಮಲ್ಲಿಕಾರ್ಜುನ ಖರ್ಗೆ ಅವರ ಪೂರ್ವಜರೂ ರಜಾಕರ ದಾಳಿಯಲ್ಲಿ ತೊಂದರೆಗೊಳಗಾದರು. ಅನೇಕ ಹಿಂದೂ ಕುಟುಂಬಗಳನ್ನು ಸಾಯಿಸಿದರು, ಮನೆಗಳಿಗೆ ಬೆಂಕಿ ಹಚ್ಚಿದರು. ಹಿಂದೂ ತಾಯಂದಿರನ್ನು ಅತ್ಯಾಚಾರ ಮಾಡಿದರು. ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ತಾಯಿ ಮತ್ತು ಸಹೋದರಿಯನ್ನು ರಜಾಕರ ದಾಳಿಯಲ್ಲಿ ಕಳೆದುಕೊಂಡರು. ಅಂದು ತಮ್ಮ




ಕುಟುಂಬಕ್ಕಾದ ಅನ್ಯಾಯ ಪ್ರಶ್ನಿಸದ ಅವರು, ಅದೇ ಸಂತತಿಯವರ ಹತ್ರ ಹೋಗಿ ರಾಜಕೀಯದಲ್ಲಿ ನಾವು ಗೆಲ್ಲೋದಿಲ್ಲ. ಬಿಜೆಪಿಯವರನ್ನು ಮುಗಿಸಿ ಎಂದು ಬೇಡಿಕೊಂಡರು. ಇಂತಹ ಖರ್ಗೆ ಅವರು ಈಗ ಈ ರೀತಿ ಪ್ರಚೋದನಾಕಾರಿಯಾಗಿ ಮಾತನಾಡಿದ್ದಾರೆ ಎಂದರು.

ಖರ್ಗೆ ಅವರು ಹಿರಿಯ ರಾಜಕಾರಣಿ. ಒಂಬತ್ತು ಬಾರಿ ಶಾಸಕರು, ಎರಡು ಬಾರಿ ಲೋಕಸಭೆ ಸದಸ್ಯರಾಗಿ, ಈಗ ರಾಜ್ಯಸಭೆ ಸದಸ್ಯರಾಗಿ ಎಐಸಿಸಿ ಅಧ್ಯಕ್ಷರಾಗಿದ್ದಾರೆ. ಇಂತಹವರು ತಮ್ಮ ಹಿರಿತನಕ್ಕೆ ಒಪ್ಪದ ಹೇಳಿಕೆ ನೀಡಿದ್ದಾರೆ ಎಂದು ವಿವರಿಸಿದರು.

ಸಾಮಾಜಿಕ ಜಾಲತಾಣದಲ್ಲ ಸಾಮಾನ್ಯ ಕಾರ್ಯಕರ್ತರು ಏನಾದರೂ ಪೋಸ್ಟ್ ಹಾಕಿದರೆ ಅವರ ಮೇಲೆ ಎಫ್‌ಐಆರ್ ದಾಖಲಾಗುತ್ತೆ, ಅವರನ್ನು ಬಂಧಿಸುತ್ತಾರೆ. ಆದರೆ ಖರ್ಗೆ ಅವರು ರಾಷ್ಟ್ರೀಯ ನಾಯಕ. ವೇದಿಕೆ ಕಾರ್ಯಕ್ರಮದಲ್ಲಿ ಬಹಿರಂಗವಾಗಿ ಕೊಲ್ಲಿ ಎಂದು ಪ್ರಚೋಚನೆ ಮಾಡಿದರೂ ಪ್ರಕರಣ ದಾಖಲು ಮಾಡಿಲ್ಲ ಎಂದು ಆರೋಪಿಸಿದರು.

ಖರ್ಗೆ ಅವರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ರಾಜ್ಯ ಬಿಜೆಪಿ ನಿಯೋಗದ ವತಿಯಿಂದ ಈಗಾಗಲೇ ಡಿಜಿಪಿಗೆ ದೂರು ದೂರು ನೀಡಲಾಗಿದೆ. ಆದರೆ ಈವರೆಗೆ ಎಫ್‌ಐಆರ್ ದಾಖಲಾಗಿಲ್ಲ. ಇದನ್ನು ನೋಡಿದರೆ ಕರ್ನಾಟಕದ ಪೊಲೀಸರು ಕಾಂಗ್ರೆಸ್ ಕೈಗೊಂಬೆ ಆಗಿದ್ದಾರೆ ಎಂದು ಹೇಳಿದರು.

ವ್ಯಕ್ತಿಯ ನಿರ್ಮಾಣದ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ಆರ್‌ಎಸ್‌ಎಸ್ ಕೆಲಸ ಮಾಡುತ್ತಿದೆ. ಇಡೀ ಪ್ರಪಂಚದಲ್ಲಿ ಅತಿ ದೊಡ್ಡ ಸ್ವಯಂ ಸೇವಕರ ಸಂಘಟನೆಯಾಗಿದೆ ನಮ್ಮದು. ಇಂತಹ ಸಂಘಟನೆ ವಿರುದ್ಧ ಖರ್ಗೆ ಅವರ ಹೇಳಿಕೆ ಖಂಡನೀಯ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಯುವ ಮೋರ್ಚಾ ಕೇಂದ್ರ ಜಿಲ್ಲೆ ಅಧ್ಯಕ್ಷ ಜಗದೀಶ್ ಆರ್ ಚಂದ್ರ ಮತ್ತು ಯುವ ಮೋರ್ಚಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಬಂಗಾರಪೇಟೆ ಬೆಸ್ಕಾಂನಿಂದ ಮಿಂಚಿನ ಕಾರ್ಯಾಚರಣೆ

ಬಂಗಾರಪೇಟೆ

ಗ್ರಾಮೀಣ ಪ್ರದೇಶಗಳಲ್ಲಿ ಅಡೆತಡೆಯಿಲ್ಲದ ಮತ್ತು ಗುಣಮಟ್ಟದ ವಿದ್ಯುತ್ ಪೂರೈಕೆಯನ್ನು ಖಚಿತಪಡಿಸುವ ನಿಟ್ಟಿನಲ್ಲಿ ಬಂಗಾರಪೇಟೆ ಬೆಸ್ಕಾಂ ಉಪ ವಿಭಾಗದ ವ್ಯಾಪ್ತಿಯಲ್ಲಿ ವಿದ್ಯುತ್ ಪರಿವರ್ತಕಗಳ ಸಮಗ್ರ ನಿರ್ವಹಣಾ ಕಾರ್ಯವನ್ನು ಚುರುಕುಗೊಳಿಸಲಾಗಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಸುಕುಮಾರ್ ರಾಜು ಬಸವರಾಜು ತಿಳಿಸಿದರು.

ಬೆಸ್ಕಾಂ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ವಿದ್ಯುತ್ ಮೂಲಸೌಕರ್ಯಗಳನ್ನು ಸುಧಾರಿಸಲು ಇಲಾಖೆಯ ವ್ಯವಸ್ಥಾಪಕ ನಿರ್ದೇಶಕರ ಸೂಚನೆಯಂತೆ ಈ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

ಈ ಕಾರ್ಯಾಚರಣೆಯಡಿ ಗ್ರಾಮ ಪಂಚಾಯಿತಿ ಕೇಂದ್ರಗಳು ಸೇರಿದಂತೆ ಗ್ರಾಮೀಣ ಭಾಗದ ಪರಿವರ್ತಕ ಕೇಂದ್ರಗಳಲ್ಲಿ ಹಳೆಯ ಹಾಗೂ ದುರ್ಬಲಗೊಂಡಿರುವ ಉಪಕರಣಗಳನ್ನು ಬದಲಾಯಿಸಲಾಗುತ್ತಿದೆ. "ವಿದ್ಯುತ್ ಉಪಕರಣಗಳ ಆಧುನೀಕರಣದಿಂದಾಗಿ ತಾಂತ್ರಿಕ ದೋಷಗಳಿಂದ ಉಂಟಾಗುವ ವಿದ್ಯುತ್ ವ್ಯತ್ಯಯಗಳು ಕಡಿಮೆಯಾಗಲಿವೆ. ಇದರಿಂದ ರೈತರಿಗೆ ಹಾಗೂ ಗ್ರಾಮೀಣ ಗ್ರಾಹಕರಿಗೆ ನಿರಂತರ ವಿದ್ಯುತ್ ಪೂರೈಸಲು ಸಾಧ್ಯವಾಗುತ್ತದೆ," ಎಂದು ಸುಕುಮಾರ್ ರಾಜು ವಿಶ್ವಾಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಬೆಸ್ಕಾಂ ಇಂಜಿನಿಯರ್‌ಗಳಾದ ಶಂಕರ್ ಕುಮಾರ್, ಅಂಬರೀಶ್, ಶ್ರೀನಿವಾಸಗೌಡ ಉಪಸ್ಥಿತರಿದ್ದರು.



# ಸಂಸ್ಥೆಯಲ್ಲಿ ಇಲಿ-ಹೆಗ್ಗಣಗಳ ಕಾಟ; ಇರುವೆಗಳ ಗೂಡು ಪತ್ತೆ

ಬೆಂಗಳೂರು

"ಕೇಂದ್ರ ಸರ್ಕಾರಕ್ಕೆ ಆದಾಯ ತೆರಿಗೆ ರೂಪದಲ್ಲಿ ಹಣ ಪಾವತಿಸುವ ಬದಲು, ಆ ಲಾಭದ ಮೊತ್ತವನ್ನು ಬೆವರು ಸುರಿಸಿ ದುಡಿಯುವ ರೈತರಿಗೆ ಪ್ರೋತ್ಸಾಹ ಧನದ ರೂಪದಲ್ಲಿ ಮರಳಿ ನೀಡಲಾಗುತ್ತಿದೆ," ಎಂದು ಬಮೂಲ್ ಅಧ್ಯಕ್ಷ ಡಿ.ಕೆ. ಸುರೇಶ್ ತಿಳಿಸಿದರು.

ಬುಧವಾರ ನಗರದ ಡಾ. ಬಾಬು ಜಗಜೀವನ್ ರಾಮ್ ಭವನದಲ್ಲಿ ನಡೆದ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗೆ ವಿಶೇಷ ಪ್ರೋತ್ಸಾಹ ಧನದ ಚೆಕ್ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಬಮೂಲ್ ಸಂಸ್ಥೆಯು ಹೊಸ ನಿಯಮಗಳ ಮೂಲಕ 70 ಕೋಟಿ ರೂ. ಲಾಭ ಗಳಿಸಿದೆ. ಈ ಬಗ್ಗೆ ಮಾತನಾಡಿದ ಸುರೇಶ್, "ಕೆಎಂಎಫ್ ಕಳೆದ ವರ್ಷ 180 ಕೋಟಿ ಲಾಭ ಗಳಿಸಿ ಅದರಲ್ಲಿ 60-70 ಕೋಟಿ ರೂ. ತೆರಿಗೆಯನ್ನು ಕೇಂದ್ರಕ್ಕೆ ಕಟ್ಟಿದೆ. ಆದರೆ ನಾನು ಅಧಿಕಾರಿಗಳಿಗೆ ಹೇಳಿ, ಲಾಭ ತೋರಿಸುವ ಬದಲು ಆ ಹಣವನ್ನು ರೈತರಿಗೆ ಹಂಚಲು ನಿರ್ಧರಿಸಿದೆ. ಅದರಂತೆ 1,28,400 ರೈತರಿಗೆ ಪ್ರತಿ ಲೀಟರ್‌ಗೆ 1 ರೂಪಾಯಿಯಂತೆ ಹೆಚ್ಚುವರಿ ಹಣ ನೀಡಲಾಗುತ್ತಿದೆ," ಎಂದರು.

ಬಮೂಲ್ ಕಾರ್ಯಾಚರಣೆಯ ಬಗ್ಗೆ ಮರ್ಮಿಕವಾಗಿ ಮಾತನಾಡಿದ ಅವರು, "ಹಾವು ಬುಸುಗುಟ್ಟಿದರೆ ಎಚ್ಚರಿಕೆ ವಹಿಸಬಹುದು. ಆದರೆ ಇಲ್ಲಿ ಹಾವುಗಳಿಗಿಂತ ಇಲಿ, ಹೆಗ್ಗಣ ಮತ್ತು ಇರುವೆಗಳ ಕಾಟ ಹೆಚ್ಚಿದೆ. ಇವುಗಳ ಗೂಡೇ ಇಲ್ಲಿದೆ. ಪ್ರತಿ ಪೈಸೆಯ ಲೆಕ್ಕಾಚಾರ ಹಾಕಿದರೂ ಅದು ಕೋಟಿಗಳಷ್ಟಾಗುತ್ತದೆ. ಇವುಗಳನ್ನು ಸರಿಪಡಿಸಿ ಸಂಸ್ಥೆಯನ್ನು ಪ್ರಗತಿಯತ್ತ ಕೊಂಡೊಯ್ಯಬೇಕಿದೆ," ಎಂದು ತಿಳಿಸಿದರು.

ಹಾಲಿನ ದರ ಏರಿಕೆಯ ಸಂದರ್ಭದಲ್ಲಿ ಬಮೂಲ್ ತಿಂಗಳಿಗೆ 10 ಕೋಟಿ ರೂ. ನಷ್ಟ ಅನುಭವಿಸುವ ಅಂದಾಜವಿತ್ತು. ಆದರೆ ನಿರಂತರ ಸಭೆ ಮತ್ತು ವಿಭಾಗವಾರು ಸುಧಾರಣೆಗಳ ಫಲವಾಗಿ ಕಳೆದ ಡಿಸೆಂಬರ್‌ನಲ್ಲಿ 3 ಕೋಟಿ ಲಾಭ ಗಳಿಸಿ, ಈಗ ಮಾಸಿಕ 10 ಕೋಟಿ ರೂ. ಲಾಭದತ್ತ ಸಂಸ್ಥೆ ಸಾಗುತ್ತಿದೆ ಎಂದು ಅವರು ವಿವರಿಸಿದರು.

ಬಮೂಲ್‌ನ ಮುಂದಿನ ಯೋಜನೆಗಳು:

ಜಾನುವಾರು ವಿಮೆ: ಈ ವರ್ಷದಿಂದ ಹೊರಗಿನ ಕಂಪನಿಗಳ ಬದಲು ಬಮೂಲ್ ವತಿಯಿಂದಲೇ ಜಾನುವಾರು ವಿಮೆ ಸೌಲಭ್ಯ ನೀಡಲಾಗುವುದು.

ನಂದಿನಿ ಉತ್ಪನ್ನಗಳ ಮಾರುಕಟ್ಟೆ: 2,295 ಸೊಸೈಟಿಗಳ ಅಡಿಯಲ್ಲಿ ನಂದಿನಿ ಚಾಕೊಲೇಟ್, ಬಿಸ್ಕತ್ ಸೇರಿದಂತೆ ಇತರ ಉತ್ಪನ್ನಗಳ ಮಾರಾಟಕ್ಕೆ ಅಂಗಡಿ ತೆರೆಯಲು ಅನುಮತಿ ನೀಡಲಾಗುವುದು.

ಜಿಎಸ್‌ಟಿ ನೋಂದಣಿ: 20 ಲಕ್ಷಕ್ಕಿಂತ ಹೆಚ್ಚು ವಹಿವಾಟು ನಡೆಸುವ ಸಂಘಗಳು ಮುಂದಿನ ಎರಡು ತಿಂಗಳಲ್ಲಿ ಜಿಎಸ್‌ಟಿ ನೋಂದಣಿ ಮಾಡಿಸಿಕೊಳ್ಳುವುದು ಕಡ್ಡಾಯ.

ಸಂಸ್ಕರಣಾ ಗುರಿ: ಕನಕಪುರವೊಂದರಲ್ಲೇ 12 ಲಕ್ಷ ಲೀಟರ್ ಹಾಲನ್ನು ಸಂಸ್ಕರಿಸುವ ಗುರಿ ಹೊಂದಲಾಗಿದೆ.

"ನೀವು ನೀಡಿದ ಜವಾಬ್ದಾರಿ ನನ್ನ ನಿದ್ದೆ ಗೆಡಿಸಿದೆ. ರೈತರಿಗೆ ಮತ್ತು ಸಿಬ್ಬಂದಿಗೆ ನನ್ನ ಮೇಲೆ ನಂಬಿಕೆ ಇದೆ. ಆ ನಂಬಿಕೆಯನ್ನು ಉಳಿಸಿಕೊಳ್ಳಲು ಹಗಲು-ರಾತ್ರಿ ಕೆಲಸ ಮಾಡುತ್ತೇನೆ," ಎಂದು ಡಿ.ಕೆ. ಸುರೇಶ್ ಭಾವುಕರಾಗಿ ನುಡಿದರು.

# ಅಂಬೇಡ್ಕರ್ ಜಯಂತಿಗೆ ಅಧಿಕಾರಿಗಳ ಗೈರುಹಾಜರಿ ಸಹಿಸಲ್ಲ: ಡಿಸಿ

ಕೋಲಾರ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆಯನ್ನು ಜಿಲ್ಲೆಯಲ್ಲಿ ಅತ್ಯಂತ ಅರ್ಥಪೂರ್ಣವಾಗಿ, ಶಿಸ್ತುಬದ್ಧವಾಗಿ ಮತ್ತು ವಿಜೃಂಭಣೆಯಿಂದ ಆಚರಿಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ಬಾರಿ ಮೆರವಣಿಗೆ ಮತ್ತು ವೇದಿಕೆ ಕಾರ್ಯಕ್ರಮಗಳಲ್ಲಿ ಅಧಿಕಾರಿಗಳ ಗೈರುಹಾಜರಿಯ ಬಗ್ಗೆ ಸಮಾಜದ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಕಠಿಣ ಸೂಚನೆ ನೀಡಿದರು. "ಅಂಬೇಡ್ಕರ್ ಜಯಂತಿ ರಾಷ್ಟ್ರೀಯ ಹಬ್ಬ. ಅಂದು ಬೆಳಿಗ್ಗೆಯಿಂದ ಸಂಜೆಯ ಕಾರ್ಯಕ್ರಮದ



ಮುಕ್ತಾಯದವರೆಗೆ ಎಲ್ಲಾ ಇಲಾಖಾ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಬೇಕು. ಗೈರಾಗುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು" ಎಂದು ಎಚ್ಚರಿಸಿದರು. ಜಯಂತಿಯ ಅಂಗವಾಗಿ ಇಡೀ ಕೋಲಾರ ನಗರವನ್ನು ಒಂದು ತಿಂಗಳ ಕಾಲ ನೀಲಿ ಬಣ್ಣದ ಧ್ವಜಗಳು ಮತ್ತು ವಿದ್ಯುತ್ ದೀಪಗಳಿಂದ ಅಲಂಕರಿಸಲು ತೀರ್ಮಾನಿಸಲಾಯಿತು.

ಅಂದು ಬೆಳಿಗ್ಗೆ 10:30ಕ್ಕೆ ಮೆರವಣಿಗೆ ಆರಂಭವಾಗಲಿದ್ದು, ವಿವಿಧ ಇಲಾಖೆಗಳಿಂದ ಸರ್ಕಾರದ ಯೋಜನೆಗಳನ್ನು ಬಿಂಬಿಸುವ ಸ್ತಬ್ದಚಿತ್ರಗಳು ಪಾಲ್ಗೊಳ್ಳಲಿವೆ. ಮುಖಂಡರ ಬೇಡಿಕೆಯಂತೆ ಅಂಬೇಡ್ಕರ್ ಭವನಕ್ಕೆ ಜಾಗ ಮೀಸಲಿಡುವುದು ಹಾಗೂ ನಗರದ ಪ್ರಮುಖ ವೃತ್ತಗಳಲ್ಲಿ ಅಂಬೇಡ್ಕರ್ ಅವರ ಜೀವನ ಸಂದೇಶ ಸಾರುವ ಎಲ್‌ಇಡಿ ಡಿಸ್‌ಪ್ಲೇ ಅಳವಡಿಸಲು ಜಿಲ್ಲಾಧಿಕಾರಿಗಳು ಸಮ್ಮತಿ ಸೂಚಿಸಿದರು. ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಜಿಲ್ಲೆಯ ಟಾಪ್ 10 ವಿದ್ಯಾರ್ಥಿಗಳಿಗೆ ಸನ್ಮಾನಿಸಲು ನಿರ್ಧರಿಸಲಾಯಿತು.

'ಸಂವಿಧಾನವೇ ಬೆಳಕು' ಎಂಬ ಶೀರ್ಷಿಕೆಯಡಿ ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಒಳಗೊಂಡ ಕಿರುಹೊತ್ತಿಗೆಯನ್ನು ಹೊರತರಲು ಸಭೆಯಲ್ಲಿ ನಿರ್ಧರಿಸಲಾಯಿತು.

ಕಾರ್ಯಕ್ರಮದ ಯಶಸ್ವಿ ನಿರ್ವಹಣೆಗಾಗಿ ವೇದಿಕೆ ಸಮಿತಿ, ಸಾಂಸ್ಕೃತಿಕ ಸಮಿತಿ ಮತ್ತು ಆಹಾರ ಸಮಿತಿ ಸೇರಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಯಿತು. ಪ್ರತಿ ಸಮಿತಿಗೆ ಜವಾಬ್ದಾರಿಯುತ ಅಧಿಕಾರಿಗಳನ್ನು ನೇಮಿಸಿ, ಯಾವುದೇ ಲೋಪವಾಗದಂತೆ ನೋಡಿಕೊಳ್ಳಲು ಸೂಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ ಬಾಗೇವಾಡಿ, ಅಪರ ಜಿಲ್ಲಾಧಿಕಾರಿ ಎಸ್.ಎಂ. ಮಂಗಳ, ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಆರ್. ನಟೇಶ್, ಅಪರ ಪೊಲೀಸ್ ವರಿಷ್ಠಾಧಿಕಾರಿ ರವಿಶಂಕರ್, ಸಮಾಜ ಕಲ್ಯಾಣ ಇಲಾಖೆಯ ಶ್ರೀನಿವಾಸನ್, ಕೆ.ಎಸ್.ಆರ್.ಟಿ.ಸಿ ವಿಭಾಗೀ ನಿಯಂತ್ರಣಾಧಿಕಾರಿ ಶ್ರೀನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಜಿ.ಶ್ರೀನಿವಾಸ್, ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಜಾವೀದಾ ನಸೀಮಾ ಖಾನಂ, ಮಹಿಳಾ ಮತ್ತು ಮಕ್ಕಳ ಇಲಾಖೆಯ ಉಪ ನಿರ್ದೇಶಕ ಎಂ.ನಾರಾಯಣಸ್ವಾಮಿ, ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ.ಜಗಧೀಶ್, ಸಮಾಜದ ಮುಂಖಡರಾದ ಡಾ.ಎಂ. ಚಂದ್ರಶೇಖರ್, ಟಿ.ವಿಜಯಕುಮಾರ್, ಡಿಪಿಎಸ್ ಮುನಿರಾಜು, ಪಂಡಿತ್ ಮುನಿವೆಂಕಟಪ್ಪ, ಕೆ. ಜಯದೇವ್, ದಲಿತ್ ನಾರಾಯಣಸ್ವಾಮಿ, ಹಾರೋಹಳ್ಳಿ ರವಿ, ಚಂದ್ರಮೌಳಿ, ರಾಜಕುಮಾರ್, ರೈತ ಮುಖಂಡ ಅಬ್ಬಿಣಿ ಶಿವಪ್ಪ, ಬಿ. ಶ್ರೀರಂಗ, ಕುವೆಂಪು ನಗರ ಆನಂದ್, ವಾಲ್ಮೀಕಿ ನರಸಿಂಹಯ್ಯ, ವೆಂಕಟಾಚಲಪತಿ, ಆಲೇರಿ ಮುನಿರಾಜು, ಕಾಂಗ್ರೆಸ್ ಮುಖಂಡ ರವಿಕುಮಾರ್, ಕೋಟೆ ಶ್ರೀನಿವಾಸ್, ಡಿ ಎಸ್ ಎಸ್ ಮಂಜುಳ, ನಾಗೇಶ್, ಮತ್ತಿಕುಂಟೆ ಕೃಷ್ಣಪ್ಪ, ಗಾಂಧೀನಗರ ಲಕ್ಷ್ಮಣ, ವಾಲ್ಮೀಕಿ ಮಂಜುಳ, ಮತ್ತಿಕುಂಟೆ ನಾರಾಯಣಸ್ವಾಮಿ, ನಾಗನಾಳ ಶಂಕರ್ ಹಾಗೂ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ದಲಿತ ಸಂಘಟನೆಗಳ ಹಿರಿಯ ಮುಖಂಡರು ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy